ಸಂಪುಟ: 04 ಸಂಚಿಕೆ: 276 ಪುಟಗಳು: 08 ಗುರುವಾರ 19 ಡಿಸೆಂಬರ್ 2024
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

ಮುಂಜಾನೆ ಮಾತು
ಜೀವ ನಮ್ಮ ಮಾತನ್ನು ಕೇಳುವುದಿಲ್ಲ. ಯಾವಾಗ ಬೇಕಾದರೂ ಹೋಗಬಹುದು. ಆದರೆ ಜೀವನ ನಮ್ಮ ಮಾತನ್ನು ಕೇಳುವ ಕಾರಣ, ಹೇಗೆ ಬೇಕಾದರೂ ಅದನ್ನು ರೂಪಿಸಿಕೊಳ್ಳಬಹುದು.

ಉದಯ ವಾಹಿನಿ
ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

ಸಂಸದರು ಸಭಾಧ್ಯಕ್ಷರಾದರೆ ಸುಗಮವಾಗಿ ಕಲಾಪ ನಡೆಸಲು ಸಾಧ್ಯವಾಗುತ್ತದೆ : ಖಾದರ್

• ಉದಯವಾಹಿನಿ, ಬೆಳಗಾವಿ

ಸಂಸದರಾದವರು ಸಭಾಧ್ಯಕ್ಷರ ಪೀಠದಲ್ಲಿ ಕುಳಿತರೆ ಲೋಕಸಭೆ ಮಾದರಿ ಕಲಾಪ ನಡೆಸಲು ಸಾಧ್ಯವಾಗುತ್ತದೆ ಎಂದು ಸಭಾಧ್ಯಕ್ಷ ಯು.ಟಿ.ಖಾದರ್ ತಿಳಿಸಿದರು. ಇಂದು ಬೆಳಗ್ಗೆ ಸದನ ಸಮಾವೇಶ ಗೊಂಡಾಗ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಎಚ್. ಮುನಿಯಪ್ಪ ಅವರು ಮಾಡಿದ ಸಲಹೆಗೆ ಸಭಾಧ್ಯಕ್ಷರು, ಸಚಿವರು ಲೋಕಸಭೆ ಮಾದರಿಯಲ್ಲಿ ಕಲಾಪ ನಡೆಸಲು ಅಪೇಕ್ಷಿಸುತ್ತಿದ್ದಾರೆ. ಸಲಹೆ ಮಾಡುತ್ತಿದ್ದಾರೆ. ಅಲ್ಲಿ ಹೇಗೆ ಕಲಾಪಗಳು ನಡೆಸಲಾಗುತ್ತದೆ

ಎಂಬ ವಿಷಯ ಗೊತ್ತಿಲ್ಲದೆ ನಾವು ಜಾರಿ ಮಾಡಲು ಸಾಧ್ಯವಿಲ್ಲ. ಲೋಕಸಭೆಯಲ್ಲಿ ಸದಸ್ಯರಾಗಿದ್ದ ನಿಮಂಥವರು ಈ ಪೀಠದಲ್ಲಿ ಕುಳಿತರೆ ಸಾಧ್ಯವಾಗುತ್ತದೆ ಎಂದು ಮುನಿಯಪ್ಪ ಅವರನ್ನು ಉದ್ದೇಶಿಸಿ ಹೇಳಿದರು. ಇದಕ್ಕೂ ಮುನ್ನ ಮಾತನಾಡಿದ ಮುನಿಯಪ್ಪ ಅವರು, ಲೋಕಸಭೆ ರೀತಿ ವಿಧಾನಸಭೆಯನ್ನು ಪ್ರಾರಂಭಿಸಿ. ಲೋಕಸಭೆಯಲ್ಲಿ 11 ಗಂಟೆಗೆ ಕಲಾಪ ಆರಂಭವಾಗುತ್ತದೆ. ರಾತ್ರಿ ಯವರೆಗೂ ನಡೆಯುತ್ತದೆ. ಅದೇ ರೀತಿ ವಿಧಾನಸಭೆಯಲ್ಲೂ ಕಲಾಪ ನಡೆಯಬೇಕು. ಮೊದಲು ಪ್ರಶ್ನೋತ್ತರ ಪ್ರಾರಂಭಿಸಬೇಕು. ಆ ಕಲಾಪದಲ್ಲಿ ಮುಖ್ಯಮಂತ್ರಿ ಸಚಿವರೂ ಇರಬೇಕು. 1 ಗಂಟೆ ಬೆಲ್ ಹಾಕಿದರೆ ಸರಿಯಲ್ಲ, ಹೊಸ ಬದಲಾವಣೆ ತರಬೇಕು. ನಮಲ್ಲೇ ಶಿಸ್ತಿಲ್ಲ ಎಂದರೆ ಹೇಗೆ? ಜನರ ಇದನ್ನೆಲ್ಲ ನೋಡುತ್ತಿದ್ದಾರೆ ಎಂದರು. ಬೆಳಗ್ಗೆ 9 ಗಂಟೆಗೆ ಸದನ ಪ್ರಾರಂಭವಾಗಬೇಕಿತ್ತು. ಆದರೆ 9.45ಕ್ಕೆ ಪ್ರಾರಂಭವಾಯಿತು. ಆಗ ಕಂದಾಯ ಸಚಿವ ಕೃಷ್ಣಬೈರೇಗೌಡ ಅವರು ನಿತ್ಯ ನಾವು ಸದನಕ್ಕೆ ತಡವಾಗಿ ಬರುತ್ತಿದ್ದೆವು. ಇಂದು ನೀವೇ ವಿಳಂಬ ಮಾಡಿದ್ದೀರಿ. ಈಗ ಉಲ್ಟಾ ಆಗಿದೆ ಎಂದರು. ಆಗ ವಿರೋಧ ಪಕ್ಷದ ನಾಯಕ ಆರ್.ಅಶೋಕ್, ಆಡಳಿತ ಪಕ್ಷದ ವರ್ತನೆಗೆ ಬೇಸತ್ತು ಸಭಾಧ್ಯಕ್ಷರು ಮೌನ ವ್ರತ ಮಾಡುತ್ತಿದ್ದಾರೆ ಎಂದು ಛೇಡಿಸಿದರು.

ವಿಧಾನಸಭೆಯಲ್ಲಿ ಚರ್ಚೆಗೆ ಶಾಸಕಿ ನಯನ ಮೋಟಮ್ಮ ಮನವಿ

• ಉದಯವಾಹಿನಿ, ಬೆಳಗಾವಿ

ಮಹಿಳೆಯ ಪರವಾದ ವಿಷಯ ಪ್ರಸ್ತಾಪಿಸಲು ಅವಕಾಶ ನೀಡಬೇಕೆಂದು ಕಾಂಗ್ರೇಸ್ ಶಾಸಕಿ ನಯನ ಮೋಟಮ್ಮ ಅವರು ಸಭಾಧ್ಯಕ್ಷರಲ್ಲಿ ಆಗ್ರಹ ಪೂರ್ವಕ ಮನವಿ ಮಾಡಿದರು. ವಿಧಾನಸಭೆಯಲ್ಲಿ ಮಹಿಳೆಯರ ಬಗ್ಗೆ ಜಾತಿ ನಿಂದನೆಯಾಗಿದೆ. ಅದಕ್ಕೆ ಅವಕಾಶ ಕೊಡಬೇಕಿದೆ. ಯಾವಾಗ ಅವಕಾಶ ಕೊಡುತ್ತೀರಿ? ಮಹಿಳಾ ಪರ ದನಿ ಎತ್ತಲು ಅವಕಾಶ ನೀಡಿ ಎಂದು ಕೋರಿದರು. ಆಗ ಸಭಾಧ್ಯಕ್ಷ ಯು.ಟಿ.ಖಾದರ್ ಮಾತನಾಡಿ, ನೀವು ನೀಡಿರುವ ನೋಟಿಸ್ ನಿಯಮ 69ರಡಿ ಚರ್ಚೆಗೆ ಕಾರ್ಯಕಲಾಪಗಳ ಪಟ್ಟಿಯಲ್ಲಿ ಸೇರಿಸಲಾಗಿದೆ. ಆ ವಿಚಾರ ಎಸ್ಐಟಿ ವಿಚಾರಣೆಯಲ್ಲಿದೆ. ನ್ಯಾಯಾಲಯದ ವಿಚಾರವೂ ಇದೆ. ಈ ವಿಚಾರದ ಚರ್ಚೆ ನಡೆದ ಸಂದರ್ಭದಲ್ಲಿ ಆಡಳಿತ ಮತ್ತು ಪ್ರತಿಪಕ್ಷಗಳ ನಡುವೆ ಗದ್ದಲವಾಗಿತ್ತು. ನಿನ್ನೆ ನಿಯಮ 69ರಡಿ ಒಂದೂ ವಿಚಾರವನ್ನು ಚರ್ಚೆಗೆ ಕೊಡಲು ಅವಕಾಶ ಸಿಗಲಿಲ್ಲ. ವಕ್ ಕುರಿತ ಚರ್ಚೆಗೆ ಉತ್ತರ, ಉತ್ತರ ಕರ್ನಾಟಕದ ಅಭಿವೃದ್ಧಿ ಕುರಿತ ಚರ್ಚೆಗೆ ಸರ್ಕಾರ ಉತ್ತರ ನೀಡಬೇಕಿದೆ ಎಂದರು. ಆಗ ನಯನ ಮೋಟಮ ಮಾತನಾಡಿ, ಆಡಳಿತ ಮತ್ತು ವಿರೋಧ ಪಕ್ಷದವರೂ ನಮ ಮಾತನ್ನು ಕೇಳಿಸಿಕೊಳ್ಳಬೇಕಿದೆ ಎಂದು ಹೇಳಿದರು.

ಆನ್ ಲೈನ್ ಬೆಟ್ಟಿಂಗ್ ಗೇಮ್ ನಿರ್ಬಂಧಕ್ಕೆ ಕಾನೂನು : ಸಚಿವ

• ಉದಯವಾಹಿನಿ, ಬೆಳಗಾವಿ

ಆನ್ಲೈನ್ ಬೆಟ್ಟಿಂಗ್ ಗೇಮ್‌ಗಳ ಸಂಸ್ಥೆಗಳ ನಿರ್ಬಂಧಕ್ಕೆ ರಾಜ್ಯ ಉಚ್ಚ ನ್ಯಾಯಾಲಯ ತಡೆಯಾಜ್ಞೆ ನೀಡಿದೆ. ಈ ಆದೇಶ ಪ್ರಶ್ನಿಸಿ ರಾಜ್ಯ ಸರ್ಕಾರ ಸರ್ವೋಚ್ಚ ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಿದೆ. ನ್ಯಾಯಾಲಯ ತಡೆಯಾಜ್ಞೆ ಇದೆ ಎಂದು ಸರ್ಕಾರ ಸುಮ್ಮನೆ ಕೂತಿಲ್ಲ. ಕಾನೂನು ಪ್ರಕಾರ ನಿರಂತರವಾಗಿ ಆನ್‌ಲೈನ್ ಬೆಟ್ಟಿಂಗ್ ಗೇಮ್ ಕಡಿವಾಣಕ್ಕೆ ಪ್ರಯತ್ನ ಮಾಡುತ್ತಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ ಹೇಳಿದರು. ಮಂಗಳವಾರ ವಿಧಾನ ಸಭೆಯ ಪ್ರಶ್ನೋತ್ತರ ಕಲಾಪದಲ್ಲಿ ಶಾಸಕ ಎಸ್. ಜಿ.ಸೋಮಶೇಖರ್ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಗೃಹ ಸಚಿವ ಪರಮೇಶ್ವರ್ ಅವರು ಮಾತನಾಡಿ, ಹೆಚ್ಚಿನ ಪ್ರಮಾಣದಲ್ಲಿ ಯುವ ಪೀಳಿಗೆ ಆನ್ ಲೈನ್ ಗೇಮ್‌ಗಳ ವ್ಯಸನಕ್ಕೆ ತುತ್ತಾಗುತ್ತಿದ್ದರೆ. ಆನ್‌ಲೈನ್ ಗೇಮ್ ದೊಡ್ಡ ಪಿಡುಗಾಗಿ ಪರಿಣಮಿಸಿದೆ. ಇದರ ತಡೆಗೆ ರಾಜ್ಯ ಸರ್ಕಾರ ಹಾಗೂ ಕೇಂದ್ರ ಸರ್ಕಾರಗಳು ಕಠಿಣ ಕಾನೂನುಗಳನ್ನು ಜಾರಿ ಮಾಡಬೇಕಿದೆ. ಬೆಂಗಳೂರು ನಗರದಲ್ಲಿ 5 ಹಾಗೂ ವಿಜಯನಗರದಲ್ಲಿ ಒಬ್ಬರು ಆನ್ ಲೈನ್ ಬೆಟ್ಟಿಂಗ್ ಆಟದ ದಂಧೆಗೆ ಸಿಲುಕಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಸಾಫ್ಟವೇರ್ ಉದ್ಯೋಗಿಗಳು ಇದರ ಚಟಕ್ಕೆ ಬಲಿಯಾಗುತ್ತಿರುವುದು ದುರದೃಷ್ಟಕರ ಎಂದರು.

ಪೋಡಿ ಮುಕ್ತ ಗ್ರಾಮ ಸಚಿವ ಕೃಷ್ಣ ಬೈರೇಗೌಡ

• ಉದಯವಾಹಿನಿ, ಬೆಳಗಾವಿ

ಬಹು ಮಾಲೀಕತ್ವದ ಖಾಸಗಿ ಒಡೆತನದ ಪಹಣಿಗಳನ್ನು ಏಕವ್ಯಕ್ತಿ ಪಹಣಿಗಳನ್ನಾಗಿ ಮಾಡುವ ಉದ್ದೇಶದ ಪೋಡಿ ಮುಕ್ತ ಯೋಜನೆಯಡಿ ರಾಜ್ಯದಲ್ಲಿ ಈಗಾಗಲೇ 16,644 ಗ್ರಾಮಗಳನ್ನು ಪೋಡಿ ಮುಕ್ತ ಗ್ರಾಮ ಗಳಾಗಿ ಮಾಡಲಾಗಿದೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಹೇಳಿದರು. ಅವರು ಇಂದು ವಿಧಾನ ಪರಿಷತ್ತಿನಲ್ಲಿ ಸದಸ್ಯ ರಾಮೋಜಿ ಗೌಡ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದರು. ರಾಜ್ಯದಲ್ಲಿ ಭೂ ಮಾಪನ ಇಲಾಖೆಯಲ್ಲಿ ಕಳೆದ 3 ವರ್ಷಗಳಲ್ಲಿ ವಿವಿಧ ರೀತಿಯ 6,62,825 ಪೋಡಿ ಅರ್ಜಿಗಳನ್ನು ಸ್ವೀಕರಿಸಿದ್ದು ಅದರಲ್ಲಿ 5,33,545 ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದ್ದು, ಪ್ರಕರಣಗಳಲ್ಲಿನ ನ್ಯೂನತೆಗಳನ್ನು ಶೀಘ್ರವಾಗಿ ಸರಿಪಡಿಸಿಕೊಂಡು ಕಂದಾಯ ಹಾಗೂ ಭೂ ಮಾಪನ ಇಲಾಖೆಯ ನಡವಳಿಗಳೊಂದಿಗೆ ವಿಳಂಬವಿಲ್ಲದೆ ಪೋಡಿ ದುರಸ್ತಿ ಮಾಡಲಾಗುತ್ತಿದೆ ಎಂದರು. ಈ ಹಿಂದೆ, ಮ್ಯುಟೇಷನ್ ಪೋಡಿಯಂತಹ ಪ್ರಕ್ರಿಯೆಯನ್ನು ಪೂರೈಸಲು ನಾಲ್ಕರಿಂದ ಆರು ತಿಂಗಳವರೆಗೆ ಕಾಲಾವಕಾಶ ತೆಗೆದುಕೊಳ್ಳಲಾಗುತ್ತಿತ್ತು. ಆದರೆ ನಮ್ಮ ಸರ್ಕಾರವು ರೈತರಿಗೆ ಸಂಬಂಧಪಟ್ಟ ಇಂತಹ ಕೆಲಸಗಳಿಗೆ ಆದ್ಯತೆ ನೀಡಿ ಎಲ್ಲಾ ಹಂತಗಳ ಪ್ರಕ್ರಿಯೆಗಳನ್ನು ಸೂಕ್ತ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಮೂಲಕ ಚುರುಕುಗೊಳಿಸಿದ್ದು, ಪೋಡಿಗೆ ಯೋಗ್ಯವಾಗಿರುವ ಯಾವುದೇ ಪ್ರಕರಣಗಳನ್ನು ಸರಾಸರಿ ಒಂದು ತಿಂಗಳ ಅವಧಿಯಲ್ಲಿ ಪೂರೈಸಲಾಗುತ್ತಿದೆ ಎಂದು ಸಚಿವರು ತಿಳಿಸಿದರು.

ಬಾಣಂತಿಯರ ಸಾವು ಸದನದಲ್ಲಿ ಹೆಚ್ಚಿದ ಕಾವು

● ಬಾಣಂತಿಯರ ಸಾವಿನ ಪ್ರಕರಣ ನ್ಯಾಯಾಂಗ ತನಿಖೆಗೆವಹಿಸಿ
● ಬಾಣಂತಿಯರ ಸಾವು ಪ್ರಕರಣ ಪ್ರಸ್ತಾಪ ● ವಿಧಾನಸಭೆಯಲ್ಲಿ ಪ್ರತಿಧ್ವನಿಸಿದ ಬಾಣಂತಿಯರ ಸರಣಿ ಸಾವು ● ನ್ಯಾಯಾಂಗ ತನಿಖೆಗೆ ಆಗ್ರಹ

1 ಕೊಲೆಗಡುಕ ಸರ್ಕಾರ: ಆರೋಗ್ಯ ಸಚಿವರ ವಜಾಗೆ ಒತ್ತಾಯ
2 ಸರ್ಕಾರದ ವಿರುದ್ಧ ಪ್ರತಿಪಕ್ಷ ನಾಯಕ ಆರ್. ಅಶೋಕ್ ಕಿಡಿ
3 ಸರ್ಕಾರಿ ಆಸ್ಪತ್ರೆಗೆ ಹೋಗಬಾರದವ್ವ ಅಂತ ಮಹಿಳೆಯರು ಮಾತಾಡ್ಕೊಳ್ತಿದ್ದಾರೆ

• ಉದಯವಾಹಿನಿ, ಬೆಂಗಳೂರು

ರಾಜ್ಯದ ವಿವಿಧ ಸರ್ಕಾರಿ ಆಸ್ಪತ್ರೆಗಳಲ್ಲಿ ಸಂಭವಿಸಿರುವ ಬಾಣಂತಿಯರ ಸಾವಿನ ಪ್ರಕರಣದ ಬಗ್ಗೆ ನ್ಯಾಯಾಂಗ ತನಿಖೆ ನಡೆಸಬೇಕೆಂದು ಪ್ರತಿಪಕ್ಷದ ನಾಯಕ ಆರ್. ಅಶೋಕ್ ಆಗ್ರಹಿಸಿದರು. ವಿಧಾನಸಭೆಯಲ್ಲಿ ನಿಯಮ 69ರಡಿ ವಿಷಯ ಪ್ರಸ್ತಾಪಿಸಿ, ಬಾಣಂತಿಯರ ಸಾವಿನ ಪ್ರಕರಣ ಹಾಲಿ ನ್ಯಾಯಾಧೀಶರ ಸುಪರ್ದಿಯಲ್ಲಿ ನ್ಯಾಯಾಂಗ ತನಿಖೆಗೆವಹಿಸಬೇಕು. ಕಳಪೆ ಔಷಧಿ ಪೂರೈಸಿದ ಕಂಪನಿಗಳಿಗೆ ಕಠಿಣ ಕ್ರಮದ ಸಂದೇಶ ನೀಡಲುವಂತಾಗಬೇಕು. ಈ ವಿಚಾರ ತಾರ್ಕಿಕ ಅಂತ್ಯಕ್ಕೆ ಕೊಂಡೊಯ್ಯಬೇಕು. ಬಾಣಂತಿಯರ ಸಾವಿಗೆ ಬೆಲೆ ಕಟ್ಟಲಾಗದು. ಔಷಧಿ ತಯಾರಿಸುವ ಕಂಪನಿಗಳಿಗೆ ಕಡಿವಾಣ ಹಾಕಲು ಹೊಸ ಕಾಯ್ದೆಯನ್ನು ತನ್ನಿ. ಮೋಸ ಮಾಡುವ ಕಂಪನಿಗಳಿಗೆ ಕಡಿವಾಣ ಹಾಕಿ. ಬಾಣಂತಿಯರಿಗೆ ಬದುಕುವ ಗ್ಯಾರಂಟಿಯನ್ನು ನೀಡಬೇಕು ಎಂದು ಒತ್ತಾಯಿಸಿದರು.

ಸರ್ಕಾರಿ ಆಸ್ಪತ್ರೆಗಳ ಮೇಲೆ ಜನರಿಗೆ ನಂಬಿಕೆ, ವಿಶ್ವಾಸ ಮೂಡಿಸುವ ಕೆಲಸವಾಗಬೇಕು ಎಂದ ಅಶೋಕ್, ಕರ್ನಾಟಕದಲ್ಲಿ ಬೆಚ್ಚಿ ಬೀಳುವಂತಹ ಬಾಣಂತಿಯರ ಸರಣಿ ಸಾವು, ನವಜಾತ ಶಿಶುಗಳ ಸಾವಿನ ಬಗ್ಗೆ ವರದಿಗಳಾಗಿವೆ. ಬಳ್ಳಾರಿ ಮಾತ್ರವಲ್ಲದೆ ದಾವಣಗೆರೆ, ಚಿತ್ರದುರ್ಗ, ರಾಯಚೂರು, ಬೆಳಗಾವಿಯಲ್ಲೂ ಬಾಣಂತಿಯರ ಸಾವುಗಳು ಸಂಭವಿಸಿವೆ. ಆರೋಗ್ಯ ಇಲಾಖೆ, ರೋಗಪೀಡಿತವಾಗಿದ್ದು, ಅನಾರೋಗ್ಯ ಇಲಾಖೆಯಾಗಿದೆ. ಇಲಾಖೆಗೆ ರೋಗ ಬಂದಂತಾಗಿದೆ. ಅಧಿಕಾರಿಗಳು ಒಬ್ಬರ ಮೇಲೆ ಒಬ್ಬರು ಹೇಳುತ್ತಾರೆ. ನಮ್ಮದೇನೂ ತಪ್ಪಲ್ಲ. ಔಷಧ ದೋಷದಿಂದಲೇ ಸಾವು ಸಂಭವಿಸಿದೆ ಎಂದು ವೈದ್ಯರು ಹೇಳುತ್ತಾರೆ. 6 ತಿಂಗಳ ಹಿಂದೆಯೇ ಔಷಧದಿಂದ ಸತ್ತಿದ್ದಾರೆ ಎಂದು ಹೇಳುತ್ತಿದ್ದಾರೆ. ನಕಲಿ ವೈದ್ಯರ ಹಾವಳಿ ಕೂಡ ಕಂಡುಬರುತ್ತಿದೆ. ಆರೋಗ್ಯ ಇಲಾಖೆ ಕ್ರಿಯಾಶೀಲವಾಗಿಲ್ಲ ಎಂದು ವಾಗ್ದಾಳಿ ನಡೆಸಿದರು. ಕೆ.ಸಿ. ಜನರಲ್ ಆಸ್ಪತ್ರೆಗೆ ಭೇಟಿ ನೀಡಿದ್ದ ಲೋಕಾಯುಕ್ತರು, ಕಾರ್ಯ ನಿರ್ವಹಿಸದ ವೆಂಟಿಲೇಟರ್, ಬಾಣಂತಿಯರಿಗೆ ಬಿಸಿನೀರು ನೀಡದಿರುವುದು ಮೊದಲಾದ ಕೊರತೆಗಳು

ಅನುದಾನ ಪೂರ್ಣ ಬಳಸಿಲ್ಲ
ಅನುದಾನ ಬಳಕೆಯಲ್ಲೂ ಆರೋಗ್ಯ ಇಲಾಖೆ ಹಿಂದೆ ಬಿದ್ದಿದೆ. ಬಜೆಟ್‌ನಲ್ಲಿ ನೀಡಿರುವ ಅನುದಾನವನ್ನು ಪೂರ್ಣ ಬಳಸಿಲ್ಲ. ಕೇಂದ್ರ ಸರ್ಕಾರ ನೀಡುವ ಎನ್‌ಹೆಚ್‌ಎಂ ಹಣದ ಬಳಕೆಯಲ್ಲೂ ಹಿಂದೆ ಬಿದ್ದಿದೆ ಎಂದು ದೂರಿ, ಆರೋಗ್ಯ ಇಲಾಖೆಯಲ್ಲಿ 108 ಆಂಬ್ಯುಲೆನ್ಸ್ ಸರಿಯಾಗಿ ಕೆಲಸ ಮಾಡುತ್ತಿಲ್ಲ. ಸರ್ಕಾರಿ ಆಸ್ಪತ್ರೆಗಳಲ್ಲಿ ಸಿಜೆರಿಯನ್ ಹೆರಿಗೆಯ ಪ್ರಮಾಣವೂ ಹೆಚ್ಚಿದೆ. ಸರಿಯಾದ ರೋಗನಿರೋಧಕ ವ್ಯವಸ್ಥೆ ವೈದ್ಯರುಗಳು ಪಾಲಿಸುತ್ತಿಲ್ಲ ಎಂದು ಡಾ. ಸಿ.ಎನ್. ಅಶ್ವತ್ಥ್ ನಾರಾಯಣ ದೂರಿದರು.

ಸರ್ಕಾರದ ವಿರುದ್ಧ ವಾಗ್ದಾಳಿ
ವೈದ್ಯರ ವರ್ಗಾವಣೆ ಕೌನ್ಸಿಲ್ ಮೂಲಕ ಆಗಿಲ್ಲ. ವರ್ಗಾವಣೆ ಕಾಯ್ದೆ ಉಲ್ಲಂಘನೆಯಾಗಿದೆ. ಈ ಸರ್ಕಾರ ಅಧಿಕಾರಕ್ಕೆ ಬಂದನಂತರ ವೈದ್ಯರ, ನರ್ಸ್‌ಗಳ ನೇಮಕವಾಗಿಲ್ಲ. ಇಲಾಖೆಯಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳಿಲ್ಲ. 16 ಜಂಟಿ ನಿರ್ದೇಶಕರ ಹುದ್ದೆಗಳು ಆರೋಗ್ಯ ಇಲಾಖೆಯಲ್ಲಿ ಖಾಲಿ ಇವೆ. 12 ಸಾವಿರ ಕೋಟಿ ರೂ. ಇಲಾಖೆಗೆ ಒದಗಿಸಿದ್ದರೂ ಈ ವರ್ಷ ಶೇ.23ರಷ್ಟು ಮಾತ್ರ ಬಳಕೆಯಾಗಿದೆ. 108 ಆಯಂಬುಲೆನ್ಸ್‌ಗಳಿಗೆ ಜಿಪಿಎಸ್ ವ್ಯವಸ್ಥೆಯೇ ಇಲ್ಲ ಎಂದು ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

ಕಂಡುಬಂದಿರುವುದನ್ನು ತಿಳಿಸಿದ್ದಾರೆ. ಅವಧಿ ಮೀರಿದ ಔಷಧಗಳು ವಿಲೇವಾರಿಯಾಗಿಲ್ಲ. ಡ್ರಗ್ ಮಾಫಿಯಾದಲ್ಲಿ ಸರ್ಕಾರ ಸಿಲುಕಿದೆ. ಸರ್ಕಾರಿ ಆಸ್ಪತ್ರೆಗಳಲ್ಲಿ ಅಗತ್ಯಕ್ಕೆ ತಕ್ಕ ಔಷಧಿ ದಾಸ್ತಾನು ಇಲ್ಲ. ಸರ್ಕಾರಿ ಆಸ್ಪತ್ರೆಗಳಲ್ಲಿ ದರ ಏರಿಕೆ ಮಾಡಲಾಗಿದೆ ಎಂದಾಗ, ಮಧ್ಯಪ್ರವೇಶಿಸಿದ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ವೈದ್ಯಕೀಯ ಶಿಕ್ಷಣ ಇಲಾಖೆಯ ಆಸ್ಪತ್ರೆಗಳಲ್ಲಿ ಹೆಚ್ಚಳ ಮಾಡಲಾಗಿದೆ. ನಮ್ಮ ಆಸ್ಪತ್ರೆಗಳಲ್ಲಿ ಆಗಿಲ್ಲ ಎಂದು ಸ್ಪಷ್ಟನೆ ನೀಡಿದರು.

ಬಾಣಂತಿಯರಿಗೆ ನೀಡಲಾಗಿದ್ದ ಐವಿ ದ್ರಾವಣದಿಂದಲೇ ಅಂಗಾಂಗ ವೈಫಲ್ಯವಾಗಿ ಮೃತಪಟ್ಟಿರುವುದು ಎಂದು ಹೇಳಲಾಗಿದೆ. ಆದರೆ ವರದಿ ಬೇರೆ ರೀತಿ ಕೊಟ್ಟಿದ್ದಾರೆ. ಔಷಧ ಪೂರೈಸಿದ ಕಂಪನಿಯನ್ನು ಕಪ್ಪುಪಟ್ಟಿಗೆ ಸೇರಿಸಿದರೆ ಇನ್ನು ಒಂದು ವರ್ಷದಲ್ಲಿ ಬೇರೆ ಹೆಸರಿನಲ್ಲಿ ಅದೇ ಕಂಪನಿಯೇ ಔಷಧ ಪೂರೈಸುವಂತಹ ವ್ಯವಸ್ಥೆ ಇದೆ ಎಂದು ಹೇಳಿದರು.

ಮಾತು ಮುಂದುವರೆಸಿದ ಅಶೋಕ್, ಕಳಪೆ ಔಷಧ ಪೂರೈಸಿದ ಕಂಪನಿ ವಿಚಾರದಲ್ಲಿ ನ್ಯಾಯಾಲಯದ ಆದೇಶವಿದೆ ಎಂದರೆ ಸಾವಿಗೆ ಯಾರು ನ್ಯಾಯ ಕೊಡುತ್ತಾರೆ. ಕಲಬುರಗಿಯಲ್ಲಿ ನಿನ್ನೆ ಮೃತಪಟ್ಟಿದ್ದಾರೆ ಎಂದು ಹಲವು ನಿದರ್ಶನ ಮತ್ತು ಅಂಕಿಅಂಶಗಳ ಮೂಲಕ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡರು.

ಬಾಣಂತಿಯರ ಸಾವಿಗೆ ಸರ್ಕಾರವೇ ಹೊಣೆ

ರಾಜ್ಯದಲ್ಲಿ ಸಂಭವಿಸಿರುವ ಬಾಣಂತಿಯರ ಸಾವಿಗೆ ಸರ್ಕಾರವೇ ನೇರ ಹೊಣೆ. ಈ ಸರ್ಕಾರ ಕೊಲೆಗಡುಕ ಸರ್ಕಾರ ಎಂದು ಮಾಜಿ ಡಿಸಿಎಂ, ಬಿಜೆಪಿ ಶಾಸಕ ಡಾ.ಸಿ.ಎನ್.ಅಶ್ವತ್ಥ ನಾರಾಯಣ ವಿಧಾನಸಭೆಯಲ್ಲಿ ಗಂಭೀರ ಆರೋಪ ಮಾಡಿದ್ದಾರೆ. ಇಂದು ನಿಯಮ 69ರಡಿ ನಡೆದ ಚರ್ಚೆಯಲ್ಲಿ ಭಾಗವಹಿಸಿದ ಅವರು, ಸಾವಿನ ಹೊಣೆಯನ್ನು ಆರೋಗ್ಯ ಸಚಿವರೇ ಹೊರಬೇಕು.

2,000 ಬಳಸಿಕೊಂಡು ಸ್ವಾವಲಂಬಿಗಳಾದ ಗೃಹಲಕ್ಷ್ಮಿಯರಿಗೆ ಸದನ ವೀಕ್ಷಣೆ ಭಾಗ್ಯ

• ಉದಯವಾಹಿನಿ, ಬೆಳಗಾವಿ

ಗೃಹಲಕ್ಷ್ಮಿ ಯೋಜನೆಯ ಆಯ್ದ ಕೆಲವು ಫಲಾನುಭವಿಗಳೊಂದಿಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವ ಲಕ್ಷ್ಮಿ ಹೆಬ್ಬಾಳಕರ ಬುಧವಾರ ಸುವರ್ಣ ವಿಧಾನಸೌಧಕ್ಕೆ ತೆರಳಿದರು. ಕುವೆಂಪು ನಗರದಲ್ಲಿರುವ ಅವರ ನಿವಾಸದಿಂದ ಸುವರ್ಣ ವಿಧಾನಸೌಧಕ್ಕೆ ವಾಹನದಲ್ಲಿ ಫಲಾನುಭವಿಗಳೊಂದಿಗೆ ಸಚಿವೆ ತೆರಳಿದರು. ಗೃಹ ಕಚೇರಿಯಲ್ಲಿ ನಡೆದ ಸಮಾರಂಭದಲ್ಲಿ ಮಾತನಾಡಿದ ಅವರು, 'ಯಾವುದೇ ಮಧ್ಯವರ್ತಿಗಳ ಕಾಟವಿಲ್ಲದೆ, ಎಲ್ಲರಿಗೂ ಯೋಜನೆಗಳನ್ನು ತಲುಪಿಸುವುದೇ ನಮ್ಮ ಉದ್ದೇಶ. ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಸರ್ಕಾರದ ಯೋಜನೆಗಳು ತಲುಪವಂತಾಗಬೇಕು.

ಗೃಹಲಕ್ಷ್ಮಿ ಯೋಜನೆ ಮೂಲಕ ಪ್ರತಿ ತಿಂಗಳು ಸಿಗುವ 2000 ಹಣ ಲಕ್ಷಾಂತರ ಹೆಣ್ಣುಮಕ್ಕಳಿಗೆ ಸಹಾಯವಾಗಿದೆ. ಒಬ್ಬರು ಗೃಹಲಕ್ಷ್ಮಿ ಯೋಜನೆಯ ಹಣದಿಂದ ಗ್ರಂಥಾಲಯ ತೆರೆದರೆ, ಗದಗ ಗಜೇಂದ್ರಗಢದ ಅತ್ತೆ-ಸೊಸೆ ಸೇರಿ ತಮ್ಮ ಜಮೀನಿನಲ್ಲಿ ಬೋರ್ ವೆಲ್ ಕೊರೆಸಿದ್ದಾರೆ. ಕಣ್ಣಿನ ಶಸ್ತ್ರಚಿಕಿತ್ಸೆ, ವೈದ್ಯಕೀಯ ಖರ್ಚು ವೆಚ್ಚಗಳು, ಮಕ್ಕಳಿಗೆ ಶಾಲಾ ಶುಲ್ಕ, ಮಕ್ಕಳಿಗೆ ಬೈಕ್ ಕೊಡಿಸಿರುವುದು.. ಹೀಗೆ ಅನೇಕ ರೂಪದಲ್ಲಿ ಯೋಜನೆಯ ಹಣ ಬಡ ಮಹಿಳೆಯರಿಗೆ ಸಹಾಯವಾಗುತ್ತಿದೆ' ಎಂದರು. 'ಮಹಿಳೆಯರ ಜೊತೆಗೆ ಲೈಂಗಿ

ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

ಮಂದಿರಗಳ ಮೇಲೆ ಮುಸ್ಲಿಮರ ದಾಳಿ

ಮೂರನೆಯದಾಗಿ ಗುಜರಾತಿನ ಗಿರ್ ಜಿಲ್ಲೆಯ ಸೋಮನಾಥ ದೇವಾಲಯ. ಹಿಂದುಗಳ ಪವಿತ್ರ ದ್ವಾದಶ ಜ್ಯೋತಿರ್ಲಿಂಗಗಳಲ್ಲಿ ಮೊದಲನೆಯದು. ಸೌರಾಷ್ಟ್ರೇ ಸೋಮನಾಥಂ ಚ ಎಂಬುದಾಗಿ ಪ್ರಾರ್ಥಿಸುತ್ತೇವೆ. ಕಪಿಲಾ ಹಿರಣ್ಯಾ ಸರಸ್ವತೀ ಎಂಬ ಮೂರು ನದಿಗಳು ಸಂಗಮವಾಗುವ (ತ್ರಿವೇಣೀ ಸಂಗಮ) ಪವಿತ್ರ ಸ್ಥಳದಲ್ಲಿರುವ ಈ ಪ್ರಾಚೀನ ದೇವಾಲಯವನ್ನು ಕ್ರಿಸ್ತಶಕ 1026 ರಲ್ಲಿ ನಿರ್ಮಿಸಲಾಗಿತ್ತು ಎಂದು ಪ್ರಸಿದ್ಧ ಇತಿಹಾಸ ಸಂಶೋಧಕ ವಿದ್ವಾಂಸ ಕೆ. ಎಂ. ಮುನ್ಸಿ ಅಭಿಪ್ರಾಯ ಪಡುತ್ತಾರೆ. ಘಜ್ನಿ ಮಹಮದ್, ಅಫ್ಜಲ್ ಖಾನ್, ಅಲ್ಲಾವುದ್ದೀನ್ ಖಿಲ್ಜಿ, ಔರಂಗಜೇಬ್ ಮುಂತಾದವರು ಹದಿನೇಳು ಬಾರಿ ಈ ದೇವಾಲಯದ ಮೇಲೆ ಆಕ್ರಮಣ ಮಾಡಿ ಲೂಟಿ ಮಾಡಿದ್ದಲ್ಲದೇ ನಾಶಪಡಿಸಿದರು. ದೇವಾಲಯದ ಇಡೀ ಅರ್ಚಕ ಸಮೂಹವನ್ನು ಕಗ್ಗೊಲೆ ಮಾಡಲಾಯಿತೆಂದು ಹೇಳಲಾಗುತ್ತಿದೆ. ಸ್ವತಂತ್ರ ಭಾರತದಲ್ಲಿ ಸರ್ದಾರ್ ವಲ್ಲಭಭಾಯಿ ಪಟೇಲ್ ರು ಈ ದೇವಾಲಯವನ್ನು ಚಾಲುಕ್ಯ ಶೈಲಿಯಲ್ಲಿ ಪುನಃ ನಿರ್ಮಿಸಿ 1951 ರ ಮೇ ತಿಂಗಳಲ್ಲಿ ಪೂರ್ಣಗೊಳಿಸಿ ಲೋಕಾರ್ಪಣೆ ಮಾಡಿದರು.

ರಾಜ್ಯದ ಹಿಂದುಳಿದ ವರ್ಗಗಳ 2.50 ಲಕ್ಷ ವಿದ್ಯಾರ್ಥಿಗಳಿಗೆ ಹಾಸ್ಟೆಲ್ ಸೌಲಭ್ಯ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಹಿಂದುಳಿದ ವರ್ಗಗಳ 2.50 ಲಕ್ಷ ವಿದ್ಯಾರ್ಥಿಗಳಿಗೆ ಹಾಸ್ಟೆಲ್ ಸೌಲಭ್ಯ ನೀಡಲಾಗುತ್ತಿದೆ ಎಂದು ಸಚಿವ ಶಿವರಾಜ್ ತಂಗಡಗಿ ಹೇಳಿದ್ದಾರೆ. ಪ್ರತಿ ವರ್ಷ ಹಿಂದುಳಿದ ವರ್ಗಗಳ 2.50 ಲಕ್ಷ ವಿದ್ಯಾರ್ಥಿಗಳಿಗೆ ಹಾಸ್ಟೆಲ್ ವ್ಯವಸ್ಥೆ ಕಲ್ಪಿಸಲಾಗುತ್ತಿದೆ. ಹಾಸ್ಟೆಲ್ ಗಳ ಮೂಲಸೌಕರ್ಯ, ಪುಸ್ತಕ, ಗ್ರಂಥಾಲಯಗಳಿಗೂ ಆದ್ಯತೆ ನೀಡಲಾಗಿದೆ. ಉತ್ತಮ ಗುಣಮಟ್ಟದ ಆಹಾರ, ಹಾಸ್ಟೆಲ್ ಗಳ ನವೀಕರಣ, ಪುಸ್ತಕ ವಿತರಣೆ, ಗ್ರಂಥಾಲಯದ ವ್ಯವಸ್ಥೆ ಕಲ್ಪಿಸಲಾಗುತ್ತಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರಾದ ಶಿವರಾಜ್ ತಂಗಡಗಿ ಅವರು ತಿಳಿಸಿದ್ದಾರೆ.

ಆರೂಢಿ ವ್ಯಾಪ್ತಿಯಲ್ಲಿ ಚಿರತೆ ಪ್ರತ್ಯಕ್ಷ

• ಉದಯವಾಹಿನಿ, ದೊಡ್ಡಬಳ್ಳಾಪುರ

ತಾಲ್ಲೂಕಿನ ಆರೂಢಿ ಗ್ರಾಮದ ಹೊರವಲಯದಲ್ಲಿ ಮಂಗಳವಾರ ಬೆಳಗ್ಗೆ ಚಿರತೆ ಕಾಣಿಸಿಕೊಂಡಿದ್ದು, ಗ್ರಾಮಸ್ಥರಲ್ಲಿ ಆತಂಕ ಮೂಡಿಸಿದೆ.ಆರೂಢಿ ಗ್ರಾಮದ ಹೊರವಲಯದ ಶಿವಣ್ಣ ಎಂಬುವರು ತಮ್ಮ ಜಮೀನಿನಲ್ಲಿ ಬೆಳೆದ ಸುಗಂದರಾಜ ಹೂವು ಬಿಡಿಸಲು ದ್ವಿಚಕ್ರ ವಾಹನದಲ್ಲಿ ತೆರಳಿದ ವೇಳೆ ಅವರಿಗೆ ದಿಢೀರನೆ ಚಿರತೆ ಎದುರಾಗಿದೆ. ಈ ವೇಳೆ ದ್ವಿಚಕ್ರವಾಹನ ತಿರುಗಿಸಿಕೊಳ್ಳಲಾಗದೆ ವಾಹನವನ್ನು ಅಲ್ಲೇ ಬಿಟ್ಟು ಸ್ಥಳದಿಂದ ಓಡಿಬಂದಿದ್ದಾರೆ. ಈ ಕುರಿತು ಅರಣ್ಯ ಇಲಾಖೆ ಅಧಿಕಾರಿ ಗಳಿಗೆ ಗ್ರಾಮಸ್ಥರು ಮಾಹಿತಿ ನೀಡಿದ್ದು ಸಾಸಲು ಹೋಬಳಿ ವಲಯ ಅರಣ್ಯ ಅಧಿಕಾರಿ ಷೇಕ್ ಔಲಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.ಈ ಕುರಿತು ಪ್ರತಿಕ್ರಿಯಿಸಿದ ಸ್ಥಳೀಯ ನಿವಾಸಿ ಕೆಂಪರಾಜ್, ಕೆಲವು ದಿನಗಳಿಂದ ಜಕ್ಕೇನಹಳ್ಳಿ, ಆರೂಢಿ, ವಡ್ಡನಹಳ್ಳಿ, ಅಮಲಗುಂಟೆ, ಗರಿಕೇನಹಳ್ಳಿ ವ್ಯಾಪ್ತಿಯಲ್ಲಿ ಆಗ್ಾಗೆ ಚಿರತೆ ಕಾಣಿಸಿಕೊಳ್ಳುತ್ತಿದೆ.ಇದರಿಂದ ಗ್ರಾಮಸ್ಥರು ಆತಂಕಕ್ಕೆ ಒಳಗಾಗಿದ್ದಾರೆ. ಅರಣ್ಯ ಇಲಾಖೆ ಸೂಕ್ತ ಕಾರ್ಯಾಚರಣೆ ನಡೆಸುವ ಮೂಲಕ ಚಿರತೆ ಸೆರೆ ಹಿಡಿಯಲು ಕ್ರಮಕೈಗೊಳ್ಳಬೇಕು' ಎಂದು ಮನವಿ ಮಾಡಿದರು.

ಲಗ್ನಪತ್ರಿಕೆಯಲ್ಲಿ ಮೋದಿಗೆ ಮತ ಯಾಚನೆ: ಪ್ರಕರಣ ರದ್ದು

• ಉದಯವಾಹಿನಿ, ಬೆಂಗಳೂರು

ಈ ಬಾರಿಯೂ ನರೇಂದ್ರ ಮೋದಿಯನ್ನು ಪ್ರಧಾನಿ ಮಾಡುವುದೇ ವಧು-ವರರಿಗೆ ನೀಡುವ ಉಡುಗೊರೆ. ಯಾಕೆಂದರೆ, ನಮ್ಮ ಭವಿಷ್ಯದ ಭಾರತ ಸುಭದ್ರವಾಗಿರಬೇಕು' ಎಂದು ಲಗ್ನಪತ್ರಿಕೆಯಲ್ಲಿ ಮುದ್ರಿಸಿ ಮತ ಯಾಚನೆ ಮಾಡಿದ ಆರೋಪಕ್ಕೆ ಸಂಬಂಧಿಸಿದ ಕ್ರಿಮಿನಲ್ ಪ್ರಕರಣವನ್ನು ಹೈಕೋರ್ಟ್ ರದ್ದುಗೊಳಿಸಿದೆ. 'ನನ್ನ ವಿರುದ್ಧ ದಾಖಲಾಗಿರುವ ಕ್ರಿಮಿನಲ್ ಪ್ರಕರಣವನ್ನು ರದ್ದುಗೊಳಿಸಬೇಕು' ಎಂದು ಕೋರಿ ದಕ್ಷಿಣ ಕನ್ನಡ ಜಿಲ್ಲೆಕಡಬ ತಾಲ್ಲೂಕಿನ ಆಲಂತಾಯ ಗ್ರಾಮದ ಶಿವಪ್ರಸಾದ್ ಮತ್ತು ಗೌಳಿತೊಟ್ಟು ಗ್ರಾಮದ ಎ.ಬಾಲಕೃಷ್ಣ ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಏಕಸದಸ್ಯ ನ್ಯಾಯಪೀಠ ಪುರಸ್ಕರಿಸಿದೆ. ವಿಚಾರಣೆ ವೇಳೆ ಅರ್ಜಿದಾರರ ಪರ ವಾದ ಮಂಡಿಸಿದ ಹೈಕೋರ್ಟ್ ವಕೀಲ ಎಂ.ವಿನೋದ್ ಕುಮಾರ್, 'ಚುನಾವಣೆಗೂ ಮುನ್ನವೇ ಲಗ್ನಪತ್ರಿಕೆ ಮುದ್ರಿಸಲಾಗಿತ್ತು. ಹೀಗಾಗಿ, ಆರೋಪವು ಅರ್ಜಿದಾರರಿಗೆ ಅನ್ವಯವಾಗುವುದಿಲ್ಲ' ಎಂದು ಪೂರ್ವ ನಿರ್ಣಯಿತ; ಎಂ.ಇಷಿಯಾಕ್ ಅಹ್ಮದ್ ವರ್ಸಸ್ ರಾಜ್ಯ ಸರ್ಕಾರ ಹಾಗೂ ಅಟ್ಟಿಕಾ ಗೋಲ್ಡ್ ವರ್ಸಸ್ ರಾಜ್ಯ ಸರ್ಕಾರದ ಪ್ರಕರಣಗಳಲ್ಲಿ ರಾಜ್ಯ ಹೈಕೋರ್ಟ್ ನೀಡಿರುವ ತೀರ್ಪನ್ನು ನ್ಯಾಯಪೀಠಕ್ಕೆ ಸಲ್ಲಿಸಿದರು. ಇದನ್ನು ಮಾನ್ಯ ಮಾಡಿದ ನ್ಯಾಯಪೀಠ, ಅರ್ಜಿದಾರರ ವಿರುದ್ಧ ಉಪ್ಪಿನಂಗಡಿ ಪೊಲೀಸ್ ಠಾಣೆಯಲ್ಲಿ ಪ್ರಜಾಪ್ರತಿನಿಧಿ ಕಾಯ್ದೆ-1951ರ 20 1274 ಕಲಂ 127ಎ (ಕರಪತ್ರ, ಪೋಸ್ಟರ್ ಇತ್ಯಾದಿ ಮುದ್ರಣಕ್ಕೆ ನಿರ್ಬಂಧ) ಅಡಿ ದಾಖಲಾಗಿದ್ದ ಕ್ರಿಮಿನಲ್ ಪ್ರಕರಣವನ್ನು ರದ್ದುಪಡಿಸಿ ಆದೇಶಿಸಿತು.

ಮರದ ಕೊಂಬೆ ಬಿದ್ದು ಬಾಲಕನಿಗೆ ಗಂಭೀರ ಗಾಯ!

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನಲ್ಲಿ ಬಿಬಿಎಂಪಿ ನಿರ್ಲಕ್ಷಕ್ಕೆ ಇದೀಗ ಮತ್ತೊಂದು ಅವಘಡ ಸಂಭವಿಸಿದ್ದು, ತಂದೆಯ ಜೊತೆಗೆ ಶಾಲೆಗೆ ತೆರಳುತ್ತಿದ್ದ ವೇಳೆ ಮರದ ಕೊಂಬೆ ಬಿದ್ದು ಬಾಲಕನಿಗೆ ತಲೆಗೆ ಪೆಟ್ಟಾಗಿ ಗಂಭೀರವಾಗಿ ಗಾಯಗೊಂಡಿರುವ ಘಟನೆ ಬೆಂಗಳೂರಿನ ನಂದಿ ದುರ್ಗದ ರಸ್ತೆಯಲ್ಲಿ ಈ ಒಂದು ಘಟನೆ ನಡೆದಿದೆ. ಹೌದು ಬಿಬಿಎಂಪಿ ನಿರ್ಲಕ್ಷಕ್ಕೆ ಮರದ ಕೊಂಬೆ ಬಿದ್ದು ಜಾಡೆಂ ಲೂಕಸ್ (14) ವರ್ಷದ ಬಾಲಕ ಐಸಿಯುನಲ್ಲಿ ಜೀವನ್ಮರಣದ ನಡುವೆ ಹೋರಾಟ ಮಾಡುತ್ತಿದ್ದಾನೆ. ಮರದ ಕೊಂಬೆ ಬಿದ್ದು ಆಸ್ಪತ್ರೆಯಲ್ಲಿ ಬಾಲಕ ಇದೀಗ ನರಳಾಟ ನಡೆಸುತ್ತಿದ್ದಾನೆ. ಬೆಳಗ್ಗೆ ನಂದಿ ದುರ್ಗದ ರಸ್ತೆಯಲ್ಲಿ ಈ ಒಂದು ಘಟನೆ ನಡೆದಿದೆ. ತಂದೆ ಜೊತೆ ಸ್ಕೂಟರ್ ಜೊತೆಗೆ ತೆರಳುತ್ತಿದ್ದಾಗ ಮರದ ಕೋಂಬೆ ಮರ ಬಿದ್ದು ಜಾಡಂ ಲೂಕಸ್ ತಲೆಗೆ ಗಂಭೀರವಾದ ಗಾಯಗಳಾಗಿವೆ. ಘಟನೆ ತಿಳಿದ ತಕ್ಷಣ ಆಸ್ಪತ್ರೆಗೆ ಬಿಬಿಎಂಪಿ ಅಧಿಕಾರಿ ಜಿ.ಎಲ್.ಜಿ ಸ್ವಾಮಿ ಭೇಟಿ ನೀಡಿ ಬಾಲಕನ ಆರೋಗ್ಯವನ್ನು ವಿಚಾರಿಸಿದ್ದಾರೆ. ಈ ವೇಳೆ ಮಾಧ್ಯಮಗಳೊಂದಿಗೆ ಮಾತನಾಡಿದ ಬಾಲಕನ ತಂದೆ ಡೇವಿಡ್. ಎಂದಿನಂತೆ ನನ್ನ ಮಗನನ್ನು ಶಾಲೆಗೆ ಬಿಟ್ಟು ಬರಲು ಹೋಗುತ್ತಿದ್ದಾಗ ನಂದಿ ದುರ್ಗದ ರಸ್ತೆಯಲ್ಲಿ ಮರದ ಗೊಂಬೆ ಬಿದ್ದು ನನ್ನ ಮಗನ ತಲೆಗೆ ಪೆಟ್ಟಾಗಿ ಗಂಭೀರವಾಗಿ ಗಾಯಗೊಂಡಿದ್ದಾನ ಘಟನೆ ಬಳಿಕ ಅಧಿಕಾರಿಗಳು ಬಂದು ನನ್ನ ಮಗನನ್ನು ವಿಚಾರಿಸಿದ್ದಾರೆ ಎಂದು ಬಿಬಿಎಂಪಿ ನಿರ್ಲಕ್ಷಕ್ಕೆ ಆಕ್ರೋಶ ಹೊರಹಾಕಿದರು.

ಕರ್ನಾಟಕದಲ್ಲಿ 3 ದಿನ ಶೀತಗಾಳಿ

• ಉದಯವಾಹಿನಿ, ಬೆಂಗಳೂರು

ಬಂಗಾಳಕೊಲ್ಲಿಯಲ್ಲಿ ವಾಯುಭಾರ ಕುಸಿತದ ಬೆನ್ನಲ್ಲೇ ಇತ್ತ ಕರ್ನಾಟಕ ರಾಜ್ಯದಲ್ಲಿ ತಾಪಮಾನ ಕುಸಿತವಾಗಿದ್ದು, ಮುಂದಿನ 3 ದಿನಗಳ ಕಾಲ ಶೀತಗಾಳಿ ಬೀಸುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಬುಧವಾರ ಎಚ್ಚರಿಕೆ ನೀಡಿದೆ. ರಾಜ್ಯದಲ್ಲಿ ತಾಪಮಾನ ಗಣನೀಯವಾಗಿ ಕುಸಿತವಾಗಿದ್ದು, ಮುಂದಿನ ದಿನಗಳಲ್ಲಿ ತಾಪಮಾನ 2 ರಿಂದ 4 ಡಿಗ್ರಿಗಳ ವರೆಗೂ ಕುಸಿಯುವ ಸಾಧ್ಯತೆ ಇದೆ.ಮುಂದಿನ 3 ದಿನ ಶೀತಗಾಳಿ ಬೀಸುವ ಸಾಧ್ಯತೆ ಇದ್ದು ಮುಂದಿನ ಮೂರು ದಿನಗಳವರೆಗೆ ಉತ್ತರ ಒಳನಾಡಿನ ಉಳಿದ ಜಿಲ್ಲೆಗಳಲ್ಲಿ ತಾಪಮಾನವು 2-4 ಡಿಗ್ರಿ ಸೆಲ್ಸಿಯಸ್ ಸಾಮಾನ್ಯಕ್ಕಿಂತ ಕಡಿಮೆ ಇರಲಿದೆ ಎಂದು ಭಾರತೀಯ ಹವಾಮಾನ ಇಲಾಖೆ (ಐಎಂಡಿ) ತಿಳಿಸಿದೆ.

ಹೊಸ ಏರ್‌ಪೋರ್ಟ್: ಸದನದಲ್ಲೂ ಚರ್ಚೆ ಜೋರು

ರಾಜ್ಯ ಸರ್ಕಾರ ತುದಿಗಾಲಲ್ಲಿ ನಿಂತಿದೆ, ಅದಕ್ಕಾಗಿ ಬೆಂಗಳೂರು ಸುತ್ತಮುತ್ತಲೂ ಸ್ಥಳ ನಿಗದಿ ಪ್ರಕ್ರಿಯೆ ಕೂಡ ನಡೆಯುತ್ತಿದೆ

• ಉದಯವಾಹಿನಿ, ಬೆಂಗಳೂರು

ಈಗಾಗಲೇ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣವಿದ್ದು, ಮತ್ತೊಂದು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಿಸಲು ರಾಜ್ಯ ಸರ್ಕಾರ ತುದಿಗಾಲಲ್ಲಿ ನಿಂತಿದೆ. ಅದಕ್ಕಾಗಿ ಬೆಂಗಳೂರು ಸುತ್ತಮುತ್ತಲೂ ಸ್ಥಳ ನಿಗದಿ ಪ್ರಕ್ರಿಯೆ ಕೂಡ ನಡೆಯುತ್ತಿದೆ.

ಮತ್ತೊಂದೆಡೆ ಬೆಳಗಾವಿ ಅಧಿವೇಶನದಲ್ಲೂ ಈ ಬಗ್ಗೆ ಭಾರಿ ಚರ್ಚೆ ನಡೆದಿದ್ದು, ಹೊಸ ವಿಮಾನ ನಿಲ್ದಾಣವನ್ನು ಉತ್ತರ ಕರ್ನಾಟಕ ಭಾಗಕ್ಕೆ ನೀಡುವಂತೆ ಆ ಭಾಗದ ನಾಯಕರು ಪಟ್ಟು ಹಿಡಿದಿದ್ದಾರೆ.

ದಕ್ಷಿಣ ಕರ್ನಾಟಕಕ್ಕೆ ಸಕಲ ಸೌಭಾಗ್ಯಗಳನ್ನು ಮೂಲಭೂತ ಸೌಕರ್ಯಗಳನ್ನು ನೀಡಿದರೆ ಉತ್ತರ ಕರ್ನಾಟಕದ ಜನತೆ ಏನು ಮಾಡಬೇಕು ಹಾಗೂ ಇಲ್ಲಿನ ಅಭಿವೃದ್ಧಿ ಹೇಗೆ ಸಾಧ್ಯ ಎಂದು ಅಧಿವೇಶನದಲ್ಲಿ ಪ್ರಸ್ತಾಪಿಸಿದ್ದಾರೆ. ಉತ್ತರ ಕರ್ನಾಟಕದ ಯಾವುದಾದರೂ ಒಂದು ಜಿಲ್ಲೆಯಲ್ಲಿ ವಿಮಾನ ನಿಲ್ದಾಣ ಮಾಡುವುದರಿಂದ ಇದರಿಂದ ಸ್ಥಳೀಯ ಆರ್ಥಿಕತೆಗೆ ಅನುಕೂಲವಾಗುತ್ತದೆ. ಅಲ್ಲದೆ,

ಉದಯವಾಹಿನಿ ಚಿತ್ರ

ರೈತರಿಗೆ ಬಾಕಿ ಇರುವ ಪ್ರೋತ್ಸಾಹಧನ ಕೂಡಲೇ ಬಿಡುಗಡೆ

ಪ್ರವಾಸೋದ್ಯಮ ಅಭಿವೃದ್ಧಿ ಹಾಗೂ ಕೃಷಿ ಉತ್ಪನ್ನ ಜವಳಿ, ವ್ಯಾಪಾರ ಹಾಗೂ ವಾಣಿಜ್ಯಕ್ಕೆ ಸಾಕಷ್ಟು ಅನುಕೂಲಕರವಾದ ವಾತಾವರಣ ಸೃಷ್ಟಿಯಾಗುತ್ತದೆ ಎಂದು ಯತ್ನಾಳ್ ಸದನದಲ್ಲಿ ಮಾತನಾಡಿದ್ದಾರೆ. ಎಲ್ಲಾ ಅಭಿವೃದ್ಧಿ ಕಾರ್ಯಗಳನ್ನು ಯೋಜನೆಗಳನ್ನು ದಕ್ಷಿಣ ಕರ್ನಾಟಕಕ್ಕೆ ಕೊಡದೆ ಸಮತೋಲಿತ ಪ್ರಾದೇಶಿಕ ಅಭಿವೃದ್ಧಿಗೆ ಅದರಲ್ಲೂ ವಿಶೇಷವಾಗಿ ಉತ್ತರ ಕರ್ನಾಟಕದ ಅಭಿವೃದ್ಧಿಗೆ ಸರ್ಕಾರ ಒತ್ತು ನೀಡಬೇಕು ಎಂದು ಅವರು ಒತ್ತಾಯಿಸಿದ್ದಾರೆ. ಆದರೆ, ಸ್ವತಃ ಪಶುಸಂಗೋಪನಾ ಸಚಿವರೇ ಕೆ. ವೆಂಕಟೇಶ್ ಅವರು ಹೇಳುವಂತೆ

ಹಾಲಿನ ಹಣ ಗ್ಯಾರಂಟಿಗಳಿಗೆ ಬಳಕೆ ಆಗಿದ್ಯಾ

ಹೈನುಗಾರರಿಗೆ ಸರ್ಕಾರ ಪ್ರೋತ್ಸಾಹಧನ ಬಾಕಿ ಉಳಿಸಿಕೊಂಡಿರುವ ಬಗ್ಗೆಯೂ ಶಾಸನ ಬಸನಗೌಡ ಪಾಟೀಲ್ ಯತ್ನಾಳ್ ತರಾಟೆಗೆ ತೆಗೆದುಕೊಂಡಿದ್ದಾರೆ. ಹೈನುಗಾರಿಕೆಯನ್ನೇ ನಂಬಿಕೊಂಡಿರುವ ರೈತರಿಗೆ ಕಾಂಗ್ರೇಸ್ ಸರ್ಕಾರ ಕಳೆದ 9 ತಿಂಗಳಿನಿಂದ ಹಾಲಿನ ಪ್ರೋತ್ಸಾಹ ಧನ ನೀಡಿಲ್ಲ, ಮುಖ್ಯ ಮಂತ್ರಿ ಸಿದ್ದರಾಮಯ್ಯ ಅವರು ಪ್ರತಿಪಕ್ಷ ನಾಯಕರಾಗಿದ್ದ ಸಂದರ್ಭದಲ್ಲಿ ಕಾಂಗ್ರೇಸ್ ಸರ್ಕಾರ ಅಧಿಕಾರಕ್ಕೆ ಬಂದರೆ, ಪ್ರೋತ್ಸಾಹ ಧನವನ್ನು ಪ್ರತಿ ಲೀಟರ್‌ಗೆ 7 ರೂಪಾಯಿ ಏರಿಸುವುದಾಗಿ ಹೇಳಿದ್ದರು ಎಂದು ನೆನಪು ಮಾಡಿದ್ದಾರೆ.

ಕಳೆದ ಜೂನ್ 2024ರಿಂದ ಅಕ್ಟೋಬರ್ 2024ವರೆಗೂ 606.69 ಕೋಟಿಯಷ್ಟು ಬಾಕಿ ಉಳಿಸಿಕೊಂಡಿರುವುದಾಗಿ ಹೇಳಿದ್ದಾರೆ.

ಸರ್ಕಾರದ ಬಳಿ ಹಣ ಇಲ್ಲದಿರುವ ಕಾರಣದಿಂದಾಗಿ ರೈತರಿಗೆ ಪ್ರೋತ್ಸಾಹ ಧನ ಕೊಟ್ಟಿಲ್ಲ ಎಂದು ಹೇಳಿದ್ದಾರೆ ಎಂದು ಯತ್ನಾಳ್ ವಾಗ್ದಾಳಿ ನಡೆಸಿದ್ದಾರೆ. ಸುಳ್ಳು ಹಾಗೂ ಈಡೇರಿಸಲಾಗದ ಭರವಸೆಗಳನ್ನು ಕೊಟ್ಟು ಈಗ ರೈತರಿಗೆ ಹಣವಿಲ್ಲ ಎಂದು ಹೇಳುತ್ತಿರುವುದು ರೈತರಿಗೆ ಮಾಡಿರುವ ಅನ್ಯಾಯ. ಕೆ.ಎಂ.ಎಫ್ ಹಾಲಿನ ದರವನ್ನು ಹೆಚ್ಚಳ ಮಾಡಿ, ಹೆಚ್ಚಳ ಮಾಡಿದ್ದನ್ನು ರೈತರಿಗೆ ನೀಡುತ್ತೇವೆ ಎಂದು ಹೇಳಿ ಈ ಹಣವನ್ನೂ ಗ್ಯಾರಂಟಿ ಯೋಜನೆಗಳಿಗೆ ಬಳಸಿದೆಯಾ ಸರ್ಕಾರ ಎಂದು ಮುಖ್ಯಮಂತ್ರಿಗಳು ಸ್ಪಷ್ಟೀಕರಣ ಕೊಡಬೇಕು. ರೈತರಿಗೆ ಬಾಕಿ ಇರುವ ಪ್ರೋತ್ಸಾಹಧನ ಕೂಡಲೇ ಬಿಡುಗಡೆ ಮಾಡಬೇಕು ಎಂದು ಅವರು ಆಗ್ರಹಿಸಿದ್ದಾರೆ.

ದೇವನಹಳ್ಳಿ ಬಳಿ ಇರುವ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಪರ್ಯಾಯವಾಗಿ ನಮ್ಮ ಉತ್ತರ ಕರ್ನಾಟಕದ ಯಾವುದಾದರೂ ಒಂದು ಜಿಲ್ಲೆಯಲ್ಲಿ ವಿಮಾನ ನಿಲ್ದಾಣ ಮಾಡುವ ಯೋಜನೆಯನ್ನು ಸರ್ಕಾರ ಪ್ರೋತ್ಸಾಹಿಸಬೇಕು ಎಂದು ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಒತ್ತಾಯಿಸಿದ್ದಾರೆ.

ಬೆಂಗಳೂರಲ್ಲಿ 25 ಐಷಾರಾಮಿ ಕಾರುಗಳು ಸೀಜ್!

• ಉದಯವಾಹಿನಿ, ಬೆಂಗಳೂರು

ಬೆಂಗಳೂರಲ್ಲಿ ವೈಟ್ ಬೋರ್ಡ್ ಹೊಂದಿ ರುವಂತಹ, ಸೆಲೆಬ್ರಿಟಿಗಳಿಗೆ ಐಷಾರಾಮಿ ಕಾರುಗಳನ್ನು ಬಾಡಿಗೆಗೆ ನೀಡುತ್ತಿದ್ದ ಟ್ರಾವೆಲ್ಸ್ ಮಾಲೀಕರಿಗೆ ಇದೀಗ ಸಾರಿಗೆ ಇಲಾಖೆಯು ಬಿಗ್ ಶಾಕ್ ನೀಡಿದೆ. ಐಷಾರಾಮಿ ವೈಟ್ ಬೋರ್ಡ್ ಕಾರುಗಳನ್ನು ಸೆಲೆಬ್ರಿಟಿಗಳಿಗೆ ಬಾಡಿಗೆಗೆ ನೀಡುತ್ತಿದ್ದಾರೆ ಇದರಿಂದ ಸಾರಿಗೆ ಇಲಾಖೆಗೆ ಕೋಟ್ಯಂತರ ರೂ. ನಷ್ಟ ಉಂಟಾಗುತ್ತಿದೆ.

ಉದಯವಾಹಿನಿ ಚಿತ್ರ

ಇಲಾಖೆಯ ಅಧಿಕಾರಿಗಳು ಹಲವು ಕಡೆಗಳಲ್ಲಿ ದಾಳಿ

ಹಾಗಾಗಿ ಸಾರಿಗೆ ಇಲಾಖೆ ಆ ಕಾರುಗಳನ್ನು ಸೀಜ್ ಮಾಡುವ ಮೂಲಕ ಟ್ರಾವೆಲ್ಸ್ ಮಾಲೀಕರಿಗೆ ಶಾಕ್ ನೀಡಿದೆ. ಹೌದು ಬೆಂಗಳೂರಲ್ಲಿ ಸಾರಿಗೆ ಇಲಾಖೆಯ ಅಧಿಕಾರಿಗಳು ಹಲವು ಕಡೆಗಳಲ್ಲಿ ದಾಳಿ ನಡೆಸಿದ್ದು, ಯಶವಂತಪುರ, ರಾಜಾಜಿ ನಗರ, ಮತ್ತಿಕೆರೆ, ಪೀಣ್ಯ, ಮಲ್ಲೇಶ್ವರಂ ಸೇರಿದಂತೆ ಅಕ್ಕಪಕ್ಕದ ಏರಿಯಾಗಳಲ್ಲಿ ಪ್ರತಿ ತಂಡದಲ್ಲೂ ಸಾರಿಗೆ ಇಲಾಖೆಯ ಇನ್ಸ್‌ಪೆಕ್ಟರ್ ಒಳಗೊಂಡಂತೆ ಒಟ್ಟು 9 ತಂಡಗಳಿಂದ ಕಾರ್ಯಾಚರಣೆ ಮಾಡಲಾಗಿದೆ. ಈ ಮೂಲಕ, ಜಾಗ್ವಾರ್, ಬಿಎಂಡಬ್ಲ್ಯೂ, ರೇಂಜ್ ರೋವರ್, ಸೇರಿದಂತೆ ಕೋಟ್ಯಂತರ ರೂ. ಬೆಲೆಬಾಳುವ 25 ಐಷಾರಾಮಿ ಕಾರುಗಳನ್ನು ಆರ್‌ಡಿಓ ಅಧಿಕಾರಿಗಳು ಸೀಜ್ ಮಾಡಿದ್ದಾರೆ. ಜೊತೆಗೆ 50 ಲಕ್ಷ ರೂ. ದಂಡ ವಸೂಲಿ ಮಾಡಿದ್ದಾರೆ. ಈ ಮೂಲಕ, ಜಾಗ್ವಾರ್, ಬಿಎಂಡಬ್ಲ್ಯೂ, ರೇಂಜ್ ರೋವರ್, ಸೇರಿದಂತೆ ಕೋಟ್ಯಂತರ ರೂ. ಬೆಲೆಬಾಳುವ 25 ಐಷಾರಾಮಿ ಕಾರುಗಳನ್ನು ಆರ್‌ಡಿಓ ಅಧಿಕಾರಿಗಳು ಸೀಜ್ ಮಾಡಿದ್ದಾರೆ.

ಜೊತೆಗೆ 50 ಲಕ್ಷ ರೂ. ದಂಡ ವಸೂಲಿ ಮಾಡಿದ್ದಾರೆ.ಟ್ರಾವೆಲ್ಸ್ ಮಾಲೀಕರು ಔಡಿ, ಬಿಎಂಡಬ್ಲ್ಯೂ, ಬೆನ್, ವೋಲ್ವೋ ಸೇರಿದಂತೆ ಸಾಕಷ್ಟು ಐಷಾರಾಮಿ ವೈಟ್ ಬೋರ್ಡ್‌ಗಳನ್ನು ಸೆಲೆಬ್ರಿಟಿಗಳಿಗೆ ಯೆಲ್ಲೋ ಬೋರ್ಡ್ ರೀತಿಯಲ್ಲಿ ಬಾಡಿಗೆಗೆ ನೀಡುತ್ತಿದ್ದಾರೆ. ನಿಯಮದ ಪ್ರಕಾರ ವೈಟ್ ಬೋರ್ಡ್ ಕಾರು ಇರುವುದು ಸ್ವಂತ ಬಳಕೆಗೆ. ಆದರೆ, ವೈಟ್ ಬೋರ್ಡ್ ಐಷಾರಾಮಿ ಕಾರುಗಳನ್ನು ದೊಡ್ಡ ಸಿನಿಮಾ ನಟರು ಸೇರಿದಂತೆ ಸೆಲೆಬ್ರಿಟಿಗಳಿಗೆ ಬಾಡಿಗೆ ನೀಡಲು ಬಳಕೆ ಮಾಡಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ರಾಜ್ಯ ಸಾರಿಗೆ ಇಲಾಖೆಗೆ ಕೋಟ್ಯಂತರ ರೂ. ನಷ್ಟ ಉಂಟಾಗುತ್

ಸಿಬ್ಬಂದಿ ಕೊರತೆ ಸುಳಿಯಲ್ಲಿ ನಗರಸಭೆ

ಜಿಲ್ಲಾ ಕೇಂದ್ರವಾದ ರಾಮನಗರದ ನಗರಸಭೆಯು ಸಿಬ್ಬಂದಿ ಕೊರತೆಯಿಂದ ಬಳಲುತ್ತಿದೆ

• ಉದಯವಾಹಿನಿ, ರಾಮನಗರ

ಜಿಲ್ಲಾ ಕೇಂದ್ರವಾದ ರಾಮನಗರದ ನಗರಸಭೆಯು ಸಿಬ್ಬಂದಿ ಕೊರತೆಯಿಂದ ಬಳಲುತ್ತಿದೆ. ರಾಜಧಾನಿಗೆ ಹೊಂದಿಕೊಂಡಂತಿರುವ ಜಿಲ್ಲೆಯು ವರ್ಷದಿಂದ ವರ್ಷಕ್ಕೆ ಬೆಳೆದು, ಜನಸಂಖ್ಯೆಯೂ ಹೆಚ್ಚಾಗಿದೆ.

ಆದರೆ, ನಗರದ ನಿರ್ವಹಣೆಯ ಹೊಣೆ ಹೊತ್ತಿರುವ ನಗರಸಭೆಯ ಸಿಬ್ಬಂದಿಯ ಸಂಖ್ಯೆಯಲ್ಲಿ ಮಾತ್ರ ಯಾವುದೇ ಬದಲಾವಣೆ ಆಗಿಲ್ಲ. ತ್ಯಾಜ್ಯ ವಿಲೇವಾರಿ ಸಮಸ್ಯೆ, ನೈರ್ಮಲ್ಯದ ಕೊರತೆ, ಹದಗೆಟ್ಟ ರಸ್ತೆಗಳು, ರಸ್ತೆ ಅತಿಕ್ರಮಿಸಿರುವ ಗೂಡಂಗಡಿಗಳು, ಎಗ್ಗಿಲ್ಲದೆ ಬಳಕೆಯಲ್ಲಿರುವ ನಿಷೇಧಿತ ಪ್ಲಾಸ್ಟಿಕ್, ಪಾದಚಾರಿ ಮಾರ್ಗದ ಒತ್ತುವರಿ, ನಿಯಮಬಾಹಿರ ಚಟುವಟಿಕೆಗಳ ವಿರುದ್ಧ ನಡೆಯದ ಕಾರ್ಯಾಚರಣೆ ಸೇರಿದಂತೆ ಮೂಲಸೌಕರ್ಯಕ್ಕೆ ಸಂಬಂಧಿಸಿದ ಕುಂದುಕೊರತೆಗಳ ಕುರಿತು ನಿತ್ಯ ನಾಗರಿಕರು ನಗರಸಭೆಯ ಕದ ಬಡಿಯುತ್ತಲೇ ಇದ್ದಾರೆ. ಆದರೆ, ನಾಗರಿಕ ಸಮಸ್ಯೆಗಳಿಗೆ ಕೂಡಲೇ ಸ್ಪಂದಿಸಿ ಪರಿಹಾರ ಒದಗಿಸುವಷ್ಟು ಸಿಬ್ಬಂದಿ ಸಾಮರ್ಥ್ಯ ನಗರಸಭೆಗಿಲ್ಲ.

ಆದರೆ, ಸದ್ಯ ಇರುವುದು 104 ಮಾತ್ರ. ಇವರೇ ನಿತ್ಯ ತ್ಯಾಜ್ಯ ಸಂಗ್ರಹ, ಲೋಡಿಂಗ್, ವಿಲೇವಾರಿ, ನಗರದ ಸ್ವಚ್ಛತೆ, ಉದ್ಯಾನ ನಿರ್ವಹಣೆ, ನಿಷೇಧಿತ ಪ್ಲಾಸ್ಟಿಕ್ ಬಳಕೆ ವಿರುದ್ಧದ ಕಾರ್ಯಾಚರಣೆಗೂ ಬಳಸಿಕೊಳ್ಳಲಾಗುತ್ತಿದೆ. ನಗರದ ಜನಸಂಖ್ಯೆ ಹೆಚ್ಚಳಕ್ಕೆ ತಕ್ಕಂತೆ ಕಾರ್ಮಿಕರ ಸಂಖ್ಯೆಯೂ ಹೆಚ್ಚಳವಾಗಬೇಕು. ಆಗ ನಗರದ ನೈರ್ಮಲ್ಯ ಆದರೆ, ಮಂಜೂರಾದ ಹುದ್ದೆಗಳಿಗಿಂತಲೂ ಕಡಿಮೆ ಇದ್ದಾರೆ' ಎಂದರು. ಅರ್ಧದಷ್ಟು ಸಿಬ್ಬಂದಿ ಕೊರತೆ! ನಗರಸಭೆಯ ವಿವಿಧ ವಿಭಾಗಗಳ ಅಧಿಕಾರಿಗಳು ಹಾಗೂ ವಿಭಾಗಗಳಿಗೆ ಮಂಜೂರಾಗಿರುವ ಒಟ್ಟು ಹುದ್ದೆಗಳಲ್ಲಿ ಯಾವೂ ಪೂರ್ಣ ಪ್ರಮಾಣದಲ್ಲಿ ಭರ್ತಿಯಾಗಿಲ್ಲ. ರಾಮನಗರದಲ್ಲಷ್ಟೇ ಅಲ್ಲದೆ ಎಲ್ಲಾ ಕಡೆಯೂ ಇದೇ ರೀತಿಯ ಸ್ಥಿತಿ ಇದೆ. ಕೊರತೆಯ ನಡುವೆಯೇ ಎಲ್ಲವನ್ನು ನಿಭಾಯಿಸಿ ಕೊಂಡು ಹೋಗಬೇಕಾದ ಸವಾಲು ನಮ್ಮ ಮುಂದಿದೆ. ಕೆಲ ವಿಭಾಗಗಳಿಗೆ ಹೊರಗುತ್ತಿಗೆ ಆಧಾರದ ಮೇಲೆ ಸಿಬ್ಬಂದಿ ನೇಮಿಸಿಕೊಂಡು ಸರಿದೂಗಿಸಲಾಗುತ್ತಿದೆ. ಇದೇ ಕಾರಣಕ್ಕೆ ಘನ ತ್ಯಾಜ್ಯ ನಿರ್ವಹಣೆ ನಿಷೇಧಿತ ಪ್ಲಾಸ್ಟಿಕ್ ಬಳಕೆ ವಿರುದ್ಧ ದಾಳಿ ಸೇರಿದಂತೆ ಕೆಲ ಕಾರ್ಯಾಚರಣೆಗಳನ್ನು ನಡೆಸಲು ಸಾಧ್ಯವಾಗುತ್ತಿಲ್ಲ. ಇರುವ ಸಿಬ್ಬಂದಿಯೇ ಕಚೇರಿ ಕೆಲಸದ ಜೊತೆಗೆ ಕ್ಷೇತ್ರ ಭೇಟಿ ಕೂಡ ಮಾಡಬೇಕಿದೆ' ಎಂದು ನಗರಸಭೆ ಪೌರಾಯುಕ್ತ ಡಾ. ಜಯಣ್ಣ ತಿಳಿಸಿದರು.



ಉದಯವಾಹಿನಿ ಚಿತ್ರ

ಬೆಳಿಗ್ಗೆ ಬೀದಿಗಳಲ್ಲಿ ಮತ್ತು ಮನೆಗಳಲ್ಲಿ ಕಸ ಸಂಗ್ರಹಿಸಿ ವಿಲೇವಾರಿ ಮಾಡುವ ಪೌರ ಕಾರ್ಮಿಕರಿಂದಿಡಿದು, ಅವರನ್ನು ಮೇಲ್ವಿಚಾರಣೆ ಮಾಡುವವರರು ಸೇರಿದಂತೆ ಅದಕ್ಕೂ ಮೇಲಿನ ಇನ್ನು ಹಲವು ಅಧಿಕಾರಿಗಳ ಕೊರತೆಯ ಸುಳಿಯಲ್ಲಿ ನಗರಸಭೆ ಇದೆ. ನಗರಸಭೆಗೆ 152 ಕಾಯಂ ಪೌರ ಕಾರ್ಮಿಕರ ಹುದ್ದೆಗಳು ಮಂಜೂರಾಗಿವೆ.

ನಿಷೇಧಿತ ಪ್ಲಾಸ್ಟಿಕ್ ಬಳಕೆ ವಿರುದ್ಧ ದಾಳಿ

ಸಿಬ್ಬಂದಿ ಒಳಗೊಂಡಂತೆ ಒಟ್ಟು 236 ಹುದ್ದೆಗಳು ಮಂಜೂರಾಗಿವೆ. ಆ ಪೈಕಿ ಭರ್ತಿಯಾಗಿರುವುದು 118 ಮಾತ್ರ. ಅರ್ಧದಷ್ಟು ಸಿಬ್ಬಂದಿ ಕೊರತೆ ಇದೆ. ಅದರಲ್ಲೂ ಮುಖ್ಯವಾಗಿ ಲೆಕ್ಕಾಧಿಕಾರಿ ಕಂದಾಯ ನಿರೀಕ್ಷಕರು ಕಿರಿಯ ಆರೋಗ್ಯ ನಿರೀಕ್ಷಕರು ನೀರು ಸರಬರಾಜುದಾರರು ಸಹಾಯಕ ನೀರು ಸರಬರಾಜುದಾರರು ಹಾಗೂ ಪೌರ ಕಾರ್ಮಿಕರ ಕೊರತೆ ದೊಡ್ಡ ಸಮಸ್ಯೆಯಾಗಿದೆ. ಕೊರತೆಯಲ್ಲೂ ನಿಭಾಯಿಸುವ ಸವಾಲು 'ನಗರಸಭೆಯ ವಿವಿಧ

ಇರುವವರಿಗೇ ಕಾರ್ಯೋತ್ತಡ: 'ಅರ್ಧದಷ್ಟು ಸಿಬ್ಬಂದಿ ಕೊರತೆಯಿಂದಾಗಿ, ಸದ್ಯ ಇರುವವರ ಮೇಲೆಯೇ ಕಾರ್ಯೋತ್ತಡ ಹೆಚ್ಚಾಗಿದೆ. ಇದರಿಂದಾಗಿ ನಿಗದಿತ ಅವಧಿಯಲ್ಲಿ ಜನರ ಕೆಲಸಗಳು ಆಗುತ್ತಿಲ್ಲ. ಇದರಿಂದ ಸಾರ್ವಜನಿಕರಿಂದ ಆಕ್ರೋಶ ಎದುರಿಸಬೇಕಾಗಿದೆ. ಲಭ್ಯವಿರುವ ಸಿಬ್ಬಂದಿಯೇ ಕಚೇರಿ ಕೆಲಸದ ಜೊತೆಗೆ ಕ್ಷೇತ್ರ ಭೇಟಿ ನೀಡಬೇಕು. ನಿಷೇಧಿತ ಪ್ಲಾಸ್ಟಿಕ್ ಸೇರಿದಂತೆ ವಿವಿಧ ರೀತಿಯ ಕಾರ್ಯಾಚರಣೆ ನಡೆಸಬೇಕಿದೆ' ಎಂದು ತಿಳಿಸಿದರು.

ನಗರಸಭೆ ಪೌರಾಯುಕ್ತ ಡಾ. ಜಯಣ್ಣ

ಸಂಘರ್ಷಕ್ಕೊಳಗಾದ ಮಕ್ಕಳು ಬೆಂಗಳೂರಲ್ಲೇ ಹೆಚ್ಚು

• ಉದಯವಾಹಿನಿ, ಮೈಸೂರು

ರಾಜ್ಯದಲ್ಲಿ 2020ರಿಂದ 2023ರವರೆಗೆ ವಿವಿಧ ಅಪರಾಧ ಪ್ರಕರಣಗಳಲ್ಲಿ ಭಾಗಿಯಾಗಿ, ಕಾನೂನು ಸಂಘರ್ಷಕ್ಕೆ ಒಳಗಾದ ಮಕ್ಕಳಲ್ಲಿ ಹೆಚ್ಚಿನವರು ರಾಜ್ಯದ ರಾಜಧಾನಿ ಬೆಂಗಳೂರಿನಲ್ಲೇ ಇದ್ದಾರೆ. ಇಂತಹ 1,665 ಮಕ್ಕಳಿರುವ ಬೆಂಗಳೂರು ಬಿಟ್ಟರೆ, ಸಾಂಸ್ಕೃತಿಕ ರಾಜಧಾನಿಯಾದ ಮೈಸೂರು ಜಿಲ್ಲೆ ಎರಡನೇ ಸ್ಥಾನದಲ್ಲಿದೆ. ಶಿವಮೊಗ್ಗ 3ನೇ ಸ್ಥಾನದಲ್ಲಿದೆ. ನಾಲ್ಕು ವರ್ಷಗಳ ಅವಧಿಯಲ್ಲಿ ವರ್ಷದಿಂದ ವರ್ಷಕ್ಕೆ ಕಾನೂನು ಸಂಘರ್ಷಕ್ಕೆ ಒಳಗಾದ ಬಾಲಕರ ಸಂಖ್ಯೆಯು ಹೆಚ್ಚುತ್ತಲೇ ಇದೆ. ಬಾಲಕಿಯರ ಸಂಖ್ಯೆ ಕಳೆದ ಎರಡು ವರ್ಷಗಳಿಂದ ಹೆಚ್ಚಿಲ್ಲ, ಮೂರಂಕಿ ದಾಟಿಲ್ಲ. ಒಟ್ಟಾರೆ 8,941 ಬಾಲಕರು ಹಾಗೂ 930 ಬಾಲಕಿಯರಿದ್ದಾರೆ.

ನಗರದ ಒಡನಾಡಿ' ಸೇವಾ ಸಂಸ್ಥೆಯು ಮಾಹಿತಿ ಹಕ್ಕಿನಡಿ ಸಲ್ಲಿಸಿದ್ದ ಅರ್ಜಿಗೆ ರಾಜ್ಯ ಅಪರಾಧ ದಾಖಲಾತಿ ವಿಭಾಗವು ಈ ಅಂಕಿ ಅಂಶವನ್ನು ನೀಡಿದೆ. ರಾಜ್ಯದ 31 ಜಿಲ್ಲೆಗಳು, ಪ್ರಮುಖ ನಗರಗಳು, ಸಿಐಡಿ, ಕರಾವಳಿ ಭದ್ರತಾ ಪಡೆ, ರಾಜ್ಯ ರೈಲ್ವೆಯಲ್ಲಿ ದಾಖಲಾಗಿರುವ ಪ್ರಕರಣಗಳೂ ಇದರಲ್ಲಿ ಸೇರಿವೆ. ಈ ಮಕ್ಕಳಲ್ಲಿ ಬಾಲಕಿಯರಿಗಿಂತ ಬಾಲಕರೇ ಹೆಚ್ಚಿದ್ದಾರೆ. ಮೈಸೂರು, ಶಿವಮೊಗ್ಗದಲ್ಲಿ 400ಕ್ಕೂ ಹೆಚ್ಚು ಮಕ್ಕಳಿದ್ದರೆ, ತುಮಕೂರು, ಚಿತ್ರದುರ್ಗ, ಬೆಳಗಾವಿ, ತುಮಕೂರು ಮತ್ತು ಬೆಂಗಳೂರು ಜಿಲ್ಲೆ, ಬೀದರ್, ಚಿಕ್ಕಮಗಳೂರಿನಲ್ಲಿ 300ಕ್ಕೂ ಹೆಚ್ಚು ಮಕ್ಕಳಿದ್ದಾರೆ. ಇವನ್ನು ಬಿಟ್ಟರೆ, ಬಹುತೇಕ ಜಿಲ್ಲೆಗಳಲ್ಲಿ ನೂರಕ್ಕೂ ಹೆಚ್ಚು ಮಕ್ಕಳಿದ್ದಾರೆ. ಸಿಐಡಿಯಲ್ಲಿ ಕೇವಲ ಒಂದು ಪ್ರಕರಣ ದಾಖಲಾಗಿದ್ದು, ಒಬ್ಬ ಬಾಲಕನಿದ್ದಾನೆ. ರಾಜ್ಯ ರೈಲ್ವೆಯಲ್ಲಿ ದಾಖಲಾದ ಪ್ರಕರಣಗಳಲ್ಲಿ ಹತ್ತು ಮಕ್ಕಳಿದ್ದಾರೆ. ಕರಾವಳಿ ಭದ್ರತಾ ಪಡೆಯಲ್ಲಿ ಪ್ರಕರಣ ದಾಖಲಾಗಿಲ್ಲ.

'ಪೋಷಕರ ಸಾಲ, ಟಿವಿ ಮಾಧ್ಯಮಗಳು, ಮೊಬೈಲ್ ಫೋನ್ ದುರ್ಬಳಕೆಯು ಮಕ್ಕಳನ್ನು ಕೆಟ್ಟದಾಗಿ ಬೆಳೆಯಲು ಪ್ರೇರೇಪಿಸುತ್ತಿದೆ. ಏಕಪೋಷಕ ಕುಟುಂಬ, ವ್ಯಸನಿಗಳ ಕುಟುಂಬ, ಬಡ ಕುಟುಂಬಗಳ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಬೇಕು. ಮಕ್ಕಳು-ಪೋಷಕರಿಗೆ ಆಪ್ತಸಮಾಲೋಚನೆ ಅಗತ್ಯ. ಮಕ್ಕಳು ತಪ್ಪು ಮಾಡಿದಾಗ ತಿದ್ದಬೇಕು. ದಂಡಿಸಬಾರದು' ಎಂದು ಹೇಳಿದರು.

ಈ ಕುರಿತು ಪ್ರತಿಕ್ರಿಯಿಸಿದ ಸಂಸ್ಥೆಯ ನಿರ್ದೇಶಕ ಎಂ.ಎಲ್.ಪರಶುರಾಂ, ಅಂಕಿ ಅಂಶಗಳು, ಸಮಾಜದ ಆರೋಗ್ಯ ಹದಗೆಡುತ್ತಿರುವುದರ ಸೂಚನೆಯಂತೆ ಕಾಣುತ್ತವೆ. ಮಕ್ಕಳು ಹೆಚ್ಚಿನ ಮಟ್ಟದಲ್ಲಿ ಅಪರಾಧ ಜಗತ್ತಿಗೆ ತೆರೆದುಕೊಳ್ಳುತ್ತಿರುವುದನ್ನು ಎಚ್ಚರಿಕೆಯ ಗಂಟೆ ಎಂದೇ ಸರ್ಕಾರ ಭಾವಿಸಬೇಕು' ಎಂದು ಪ್ರತಿಪಾದಿಸಿದರು. ಅಪರಾಧ ಜಗತ್ತಿನಲ್ಲಿ ಮಕ್ಕಳು ಕಾಣಬಾರದು. ಆದರೆ, ಮಕ್ಕಳೇ ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ. ಹೀಗಾಗಿ ನ್ಯಾಯಾಲಯಗಳು, ಮಕ್ಕಳ ಕಲ್ಯಾಣ ಸಮಿತಿ, ಬಾಲ ನ್ಯಾಯ ಮಂಡಳಿಗಳು ಸಮಾಜದಲ್ಲಿ ಮಕ್ಕಳ ಸ್ನೇಹಿ ವಾತಾವರಣವನ್ನು ನಿರ್ಮಿಸುವ ನಿಟ್ಟಿನಲ್ಲಿ ಇನ್ನಷ್ಟು ಕಾರ್ಯಪ್ರವೃತ್ತರಾಗಬೇಕು' ಎಂದು ಅಭಿಪ್ರಾಯಪಟ್ಟರು.

ಮಿನಿ ನ್ಯೂಸ್

ನೌಕರರ ನಡುವೆ ಜಗಳ: ಕಚೇರಿಯಲ್ಲೇ ಅಧಿಕಾರಿಗಳನ್ನು ಕೂಡಿ ಹಾಕಿದ ಅಟೆಂಡರ್

• ಉದಯವಾಹಿನಿ, ತುಮಕೂರು

ಸಣ್ಣ ನೀರಾವರಿ ಇಲಾಖೆಯಲ್ಲಿ ಅಧಿಕಾರಿಗಳು, ನೌಕರರ ನಡುವಿನ ಜಗಳ ತಾರಕಕ್ಕೇರಿದ್ದು ಅಧಿಕಾರಿಗಳನ್ನು ಕಚೇರಿಯಲ್ಲಿಯೇ ಕೂಡಿ ಹಾಕಿದ ಘಟನೆ ತುಮಕೂರಿನಲ್ಲಿ ನಡೆದಿದೆ. ತುಮಕೂರಿನ ವಿದ್ಯಾನಗರದಲ್ಲಿರುವ ಸಣ್ಣ ನೀರಾವರಿ ಕಚೇರಿಯಲ್ಲಿ ಅಧಿಕಾರಿಗಳು ಕಚೇರಿಯಲ್ಲಿರುವಾಗಲೇ ಅಟೆಂಡರ್, ಕಚೇರಿಗೆ ಬೀಗ ಹಾಕಿ. ಪರಾರಿಯಾಗಿದ್ದಾರೆ. ಕೆ.ಎಂ. ಅಜಾಜ್ ಪಾಷ ಅಎಂಬ ಅಟೆಂಡರ್ ಈ ಕೃತ್ಯವೆಸಗಿದ್ದಾರೆ. ಸಹಾಯಕ ಕಾರ್ಯಪಾಲಕ ಇಂಜಿನಿಯರ್ ತಿಪ್ಪೇಸ್ವಾಮಿ, ಇಬ್ಬರು ಇಂಜಿನಿಯರ್ ಸೇರಿ 7 ಜನ ಸಿಬ್ಬಂದಿಗಳು ಕಚೇರಿ ಒಳಗೆ ಇದ್ದರು. ವೇಳೆ ಕಚೇರಿಗೆ ಬೀಗ ಹಾಕಿ ಅಟೆಂಡರ್ ಎಸ್ಕೆಪ್ ಆಗಿದ್ದಾರೆ. ಬಳಿಕ ಇಂಜಿನಿಯರ್ ತಿಪ್ಪೇಸ್ವಾಮಿ ಪೊಲೀಸರಿಗೆ ಕರೆ ಮಾಡಿ ಮಾಹಿತಿ ನೀಡಿದ್ದು, ಸ್ಥಳಕ್ಕಾಗಮಿಸಿದ ಪೊಲೀಸರು ಅಜಾಜ್ ಪಾಷಾಗೆ ಕರೆ ಮಾಡಿ ಕಚೇರಿಗೆ ಕರೆಸಿದ್ದಾರೆ. ಈ ವೇಳೆ ಅಜಾಜ್ ಪಾಷಾ, ಅಧಿಕಾರಿಗಳು ಅನಗತ್ಯವಾಗಿ ಕಿರುಕುಳ ನೀಡುತ್ತಿದ್ದು ಅವಾಚ್ಯ ಶಬ್ದಗಳಿಂದ ನಿಂದಿಸುತ್ತಾರೆ. ಇಲ್ಲಸಲ್ಲದ ಆರೋಪ ಮಾಡುತ್ತಾರೆ. ಈ ಬಗ್ಗೆ ಹಲವು ಬಾರಿ ಮನವಿ ಮಾಡಿದರೂ ಯಾವುದೇ ಬದಲವಣೆಯಾಗಿಲ್ಲ. ಪದೇ ಪದೇ ಅವಮಾನ ಮಾಡುತ್ತಿರುವುದಕ್ಕೆ ಬೇಸತ್ತು ಅಧಿಕಾರಿಗಳನ್ನು ಕೂಡಿ ಹಾಕಿ ಹೋಗಿದ್ದಾಗಿ ತಿಳಿಸಿದ್ದಾರೆ.

ಚಲಿಸುತ್ತಿದ್ದ ಸಾರಿಗೆ ಬಸ್‌ನಲ್ಲಿ ಕಾಣಿಸಿಕೊಂಡ ಬೆಂಕಿ : ತಪ್ಪಿದ ಭಾರಿ ಅನಾಹುತ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಚಿಕ್ಕಬಳ್ಳಾಪುರದಲ್ಲಿ ಘೋರ ದುರಂತ ಒಂದು ಸಂಭವಿಸಿದ್ದು ಚಲಿಸುತ್ತಿದ್ದ ಕೆಎಸ್‌ಆರ್‌ಟಿಸಿ ಬಸ್‌ನಲ್ಲಿ ಆಕಸ್ಮಿಕವಾಗಿ ಬೆಂಕಿ ಕಾಣಿಸಿಕೊಂಡಿದೆ.

ಕೂಡಲೆ ಎಚ್ಚೆತ್ತುಕೊಂಡ ಚಾಲಕ ಮತ್ತು ನಿರ್ವಾಹಕ ಬಸ್‌ನಲ್ಲಿದ್ದ ಸುಮಾರು 40ಕ್ಕು ಹೆಚ್ಚು ಪ್ರಯಾಣಿಕರನ್ನು ಬಸ್‌ನಿಂದ ಕೆಳಗೆ ಇಳಿಸಿದ್ದಾರೆ. ಹೀಗಾಗಿ ಭಾರಿ ಅನಾಹುತ ಒಂದು ತಪ್ಪಿದೆ. ಚಿಕ್ಕಬಳ್ಳಾಪುರ ಜಿಲ್ಲೆಯ ಮಂಚೇನಹಳ್ಳಿ ಹೊರವಲಯದಲ್ಲಿ ಈ ಘಟನೆ ನಡೆದಿದೆ.

ಹೌದು ಗೌರಿಬಿದನೂರಿನಿಂದ ಚಿಕ್ಕಬಳ್ಳಾಪುರಕ್ಕೆ ತೆರಳುತ್ತಿದ್ದ ಸಾರಿಗೆ ಬಸ್ ಬಸ್‌ನಲ್ಲಿ 40 ಜನ ಪ್ರಾಣಿಸುತ್ತಿದ್ದರು. ಕೂಡಲೇ ಸ್ಥಳಿಯರು ಪ್ರಯಾಣಿಕರನ್ನು ಹಾಗೂ ಚಾಲಕ ಮತ್ತು ನಿರ್ವಾಹಕರನ್ನು ಸುರಕ್ಷಿತವಾಗಿ ರಕ್ಷಣೆ ಮಾಡಿದ್ದಾರೆ ಸ್ಥಳೀಯರು ಸಾರಿಗೆ ಸಿಬ್ಬಂದಿಯಿಂದ ಬೆಂಕಿ ನಂದಿಸುವ ಕಾರ್ಯ ನಡೆಯುತ್ತಿದೆ. ಈ ವೇಳೆ ಸಾರಿಗೆ ಸಿಬ್ಬಂದಿಗಳು ಪ್ರಯಾಣಿಕರಿಗೆ ಬೇರೆ ಬಸ್ ವ್ಯವಸ್ಥೆ ಮಾಡಿದರು.

ಕಾಡು ಪ್ರಾಣಿಗಳ ಹಾವಳಿಗೆ ಕಡಿವಾಣ ಹಾಕುವಂತೆ ಒತ್ತಾಯಿಸಿ ಪ್ರತಿಭಟನೆ

• ಉದಯವಾಹಿನಿ, ಗುಂಡ್ಲುಪೇಟೆ

ತಾಲ್ಲೂಕಿನ ಓಂಕಾರ ಅರಣ್ಯ ವಲಯ ವ್ಯಾಪ್ತಿಯ ಹೊಸಪುರ ಸುತ್ತ ಕಾಡುಪ್ರಾಣಿಗಳ ಹಾವಳಿ ತಡೆಯಬೇಕು, ಮುಚ್ಚಿ ಹೋಗಿರುವ ಕಂದಕಗಳನ್ನು ದುರಸ್ತಿ ಮಾಡಿಸಬೇಕು ಎಂದು ಒತ್ತಾಯಿಸಿ ರೈತ ಸಂಘಟನೆ ಮುಖಂಡರು ಪ್ರತಿಭಟನೆ ನಡೆಸಿದರು. ಬಂಡೀಪುರ ಅಭಯಾರಣ್ಯದ ಹೊಸಪುರ ಗ್ರಾಮದ ಅರಣ್ಯ ಇಲಾಖೆ ಕಟ್ಟಡದ ಮುಂದೆ ಜಮಾವಣೆಗೊಂಡ ರೈತ ಸಂಘ ಪ್ರಮುಖರು ಹಾಗೂ ಸುತ್ತಲಿನ ಗ್ರಾಮಗಳ ರೈತರು ಅರಣ್ಯಾಧಿಕಾರಿಗಳ ವಿರುದ್ಧ ಘೋಷಣೆ ಕೂಗಿ ಆಕ್ರೋಶ ಹೊರ ಹಾಕಿದರು. ಪ್ರತಿಭಟನಾಕಾರ ಮಹದೇವಪ್ಪ ಮಾತನಾಡಿ, ಹೊಸಪುರ ಸುತ್ತ ಕಾಡಾನೆಗಳ ಹಾವಳಿ ನಿರಂತರವಾಗಿದೆ. ಓಣಕನಪುರ, ಶ್ರೀಕಂಠಪುರ ಮುಂತಾದೆಡೆ ಕಾಡಾನೆಗಳು ಫಸಲು ನಾಶ ಪಡಿಸುತ್ತಿವೆ. ರೈತರಿಗೆ ಅಪಾರ ನಷ್ಟ ಉಂಟಾಗಿದೆ. ಅರಣ್ಯಾಧಿಕಾರಿಗಳಿಗೆ ಹಲವು ಬಾರಿ ಮನವಿ ಮಾಡಿದ್ದರೂ ಪ್ರಯೋಜನವಾಗಿಲ್ಲ ಎಂದು ದೂರಿದರು. ಓಂಕಾರ ವಲಯ ಅರಣ್ಯಾಧಿಕಾರಿಗಳು ಕೂಡಲೇ ಕಾಡು ಪ್ರಾಣಿಗಳ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳಬೇಕು. ಹೊಸಪುರ ಸುತ್ತಲಿನ ಕಂದಕಗಳಲ್ಲಿ ತುಂಬಿರುವ ಹೂಳು ತೆಗೆಸಿ, ಸೋಲಾರ್ ತಂತಿ ಮತ್ತು ರೈಲ್ವೆ ಕಂಬಿ ಬೇಲಿಗಳನ್ನು ನಿರ್ಮಿಸಬೇಕು. ಕಾಡಾನೆ ದಾಳಿಯಿಂದ ನಾಶವಾಗಿರುವ ಫಸಲಿಗೆ ಶೀಘ್ರ ಪರಿಹಾರ ಹಣ ನೀಡಬೇಕು ಎಂದು ಒತ್ತಾಯಿಸಿದರು. ವಲಯ ಅರಣ್ಯಾಧಿಕಾರಿ ಸತೀಶ್ ಕುಮಾರ್ ಅವರಿಗೆ ರೈತರು ಪ್ರತಿಭಟನಾಕಾರರು ಮನವಿ ಸಲ್ಲಿಸಿದರು.

ರೂ.28 ಲಕ್ಷ ಪರಿಹಾರ ನೀಡುವಂತೆ ಗ್ರಾಹಕರ ಆಯೋಗ ತೀರ್ಪು

• ಉದಯವಾಹಿನಿ, ಮಡಿಕೇರಿ

ಅಡುಗೆ ಅನಿಲ ಸೋರಿಕೆಯಿಂದ ಉಂಟಾದ ಅಗ್ನಿ ಅನಾಹುತದಿಂದ ತಂದೆ, ತಾಯಿಯನ್ನು ಕಳೆದುಕೊಂಡ ಪುತ್ರಿ ಲಿಪಿಕಾ ಅವರಿಗೆ 28 ಲಕ್ಷ ಪರಿಹಾರ ನೀಡಬೇಕು ಎಂದು ಎಚ್.ಪಿ. ಗ್ಯಾಸ್, ಮಂಗಳೂರು , ಎಸ್‌ಬಿಐ ಜನರಲ್ ಇನ್ಸೂರೆನ್ಸ್ ಕಂಪನಿಗೆ ಇಲ್ಲಿನ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಆದೇಶ ನೀಡಿದೆ.

ಮಡಿಕೇರಿ ನಿವಾಸಿ ಎಚ್.ಕೆ. ರಮೇಶ್, ಅವರ ಪತ್ನಿ ಎನ್. ರೂಪಾ ಅವರು 2023ರ ಅ. 4ರಂದು ತಮ್ಮ ಮನೆಯಲ್ಲಿ ಅಡುಗೆ ಅನಿಲ ಸೋರಿಕೆಯಿಂದ ಉಂಟಾದ ಅಗ್ನಿ ದುರಂತದಿಂದ ಮೃತಪಟ್ಟಿದ್ದರು. ಆದರೆ, ಎಚ್.ಪಿ. ಗ್ಯಾಸ್ ಕಂಪನಿಯಾಗಲಿ, ಎಸ್‌ಬಿಐ ಜನರಲ್ ಇನ್ಸೂರೆನ್ಸ್ ಕಂಪನಿಯಾಗಲಿ ಯಾವುದೇ ಪರಿಹಾರ ನೀಡಿಲ್ಲ ಎಂದು ಇವರ ಪುತ್ರಿ ಲಿಪಿಕಾ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗಕ್ಕೆ ದೂರು ಸಲ್ಲಿಸಿದ್ದರು. ವಿಚಾರಣೆ ನಡೆಸಿದ ಆಯೋಗದ ಪ್ರಭಾರ ಅಧ್ಯಕ್ಷೆ ಸಿ. ರೇಣುಕಾಂಬ, ಸದಸ್ಯೆ ಗೌರಮ್ಮಣ್ಣಿ ಅವರು ಎಚ್.ಪಿ. ಗ್ಯಾಸ್ ಮಂಗಳೂರು , ಎಸ್‌ಬಿಐ ಜನರಲ್ ಇನ್ಸೂರೆನ್ಸ್ ಕಂಪನಿಯು ಜಂಟಿಯಾಗಿ ಅಥವಾ ಪ್ರತ್ಯೇಕವಾಗಿ ಲಿಪಿಕಾ ಅವರಿಗೆ 28 ಲಕ್ಷ ಪರಿಹಾರ ನೀಡಬೇಕು ಎಂದು ಆದೇಶ ನೀಡಿದ್ದಾರೆ.

ರೈಲು ತಡೆಯಲು ಯತ್ನಿಸಿದ ರೈತ ಮುಖಂಡರ ಬಂಧನ

• ಉದಯವಾಹಿನಿ, ಮೈಸೂರು

ರೈತನಾಯಕ ಜಗಜಿತ್ ಸಿಂಗ್ ದಲ್ಲೆವಾಲ ಉಪವಾಸ ಸತ್ಯಾಗ್ರಹ ಬೆಂಬಲಿಸಿ ರೈಲು ಸಂಚಾರ ತಡೆಯಲು ಯತ್ನಿಸಿದ ರಾಜ್ಯ ರೈತ ಸಂಘಟನೆ ಒಕ್ಕೂಟದ ಮುಖಂಡರನ್ನು ಪೊಲೀಸರು ಬುಧವಾರ ಬಂಧಿಸಿದರು. ಇಲ್ಲಿನ ರೈಲು ನಿಲ್ದಾಣದ ಮುಖ್ಯದ್ವಾರದ ಮುಂಭಾಗ ಜಮಾಯಿಸಿದ ರೈತ ಮುಖಂಡರು ಕೇಂದ್ರ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ವೇಳೆ ರೈಲು ನಿಲ್ದಾಣದೊಳಕ್ಕೆ ನುಗ್ಗಲು ಯತ್ನಿಸಿದ ಅವರಿಗೆ ಪೊಲೀಸರು ಅವಕಾಶ ನೀಡದಿದ್ದಾಗ ಮಾತಿನ ಚಕಮಕಿ ನಡೆಯಿತು.

ಅಂಗನವಾಡಿ ನೌಕರರ ಧರಣಿ

• ಉದಯವಾಹಿನಿ, ರಾಮನಗರ

ಸೇವೆ ಕಾಯಂಗೊಳಿಸುವುದು, ಗೌರವಧನವನ್ನು 15 ಸಾವಿರಕ್ಕೆ ಹೆಚ್ಚಳ ಮಾಡುವುದು, ಗ್ರಾಚ್ಯುಯಿಟಿ ಹಣ ಬಿಡುಗಡೆ, ನಿವೃತ್ತ ನೌಕರರಿಗೆ ಮಾಸಿಕ 10 ಸಾವಿರ ಪಿಂಚಣಿ ನೀಡುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ, ರಾಜ್ಯ ಅಂಗನವಾಡಿ ನೌಕರರ ಸಂಘದ ಸದಸ್ಯರು ನಗರದ ಜಿಲ್

ಅಂತರಾಳದಿಂದ... EDITORIAL

ಹಿಂದಿ ಹೇರಿಕೆ: ಒಕ್ಕೂಟ ವ್ಯವಸ್ಥೆಗೆ ಅಪಚಾರ

ಏಕ ಧರ್ಮ, ಏಕ ಸಂಸ್ಕೃತಿ ಎಂಬ ತಮ್ಮ ರಹಸ್ಯ ಕಾರ್ಯಸೂಚಿಯನ್ನು ಅನುಷ್ಠಾನಕ್ಕೆ ತರಲು ಹೊರಟಿರುವ ಕೇಂದ್ರದ ನರೇಂದ್ರ ಮೋದಿ ನೇತೃತ್ವದ ಎನ್‌ಡಿಎ ಸರಕಾರ ಕಳೆದ ಹತ್ತು ವರ್ಷಗಳಿಂದ ಅಂದರೆ, ಕೇಂದ್ರದ ಅಧಿಕಾರ ಹಿಡಿದಾಗಿನಿಂದ ಬಹುತ್ವಭಾರತದ ಸ್ವರೂಪವನ್ನೇ ಬದಲಿಸಲು ಹೊರಟಿದೆ. ದಕ್ಷಿಣದ ತಮಿಳುನಾಡು, ಕರ್ನಾಟಕ, ಕೇರಳ ಸೇರಿದಂತೆ ಬಹುತೇಕ ರಾಜ್ಯಗಳ ಆಕ್ಷೇಪವನ್ನು ಕಡೆಗಣಿಸಿ ಬಲವಂತವಾಗಿ ಹಿಂದಿ ಭಾಷೆಯನ್ನು ರಾಷ್ಟ್ರಭಾಷೆ ಎಂದು ಕರೆದು ಎಲ್ಲಾ ರಾಜ್ಯಗಳ ಮೇಲೂ ಹೇರಲು ಹೊರಟಿದೆ. ಇತ್ತೀಚಿನ ಲೋಕಸಭಾ ಚುನಾವಣೆಯಲ್ಲಿ ಮತದಾರರು ನಿಚ್ಚಳ ಬಹುಮತವನ್ನು ನೀಡದಿದ್ದರೂ ಆಂಧ್ರಪ್ರದೇಶದ ಚಂದ್ರಬಾಬು ನಾಯ್ಡು ಹಾಗೂ ಬಿಹಾರದ ನಿತೀಶ್ ಕುಮಾರ್ ಅವರ ಬೆಂಬಲದಿಂದ ಮತ್ತೆ ಅಧಿಕಾರಕ್ಕೆ ಬಂದ ಬಿಜೆಪಿಗೆ ತಮ್ಮ ಕೋಮುವಾದಿ ಕಾರ್ಯಸೂಚಿಯನ್ನು ಜಾರಿಗೆ ತರುವುದೇ ಮೊದಲ ಆದ್ಯತೆಯಾಗಿದೆ. ಬಹುತೇಕ ರಾಜ್ಯಗಳ ವಿರೋಧವಿದ್ದರೂ ಸರಕಾರದ ದೈನಂದಿನ ವ್ಯವಹಾರದಲ್ಲಿ ಹಿಂದಿ ಭಾಷೆಯನ್ನು ಬಳಸಲು ಮುಂದಾಗಿದೆ. ಕೇಂದ್ರ ಸರಕಾರದ ಎಲ್ಲಾ ಕಚೇರಿ ಮತ್ತು ಸಂಸ್ಥೆಗಳಲ್ಲಿ ಹಿಂದಿ ಭಾಷೆಯನ್ನು ಕಡ್ಡಾಯ ಮಾಡಲು ಹೊರಟಿದೆ. ಅಷ್ಟೇ ಅಲ್ಲದೆ ರಾಜ್ಯ ಸರಕಾರಗಳು ಕೂಡ ಹಿಂದಿಯ ಬಳಕೆಯನ್ನು ವಿಸ್ತರಿಸಬೇಕೆಂದು ಸೂಚನೆಯನ್ನು ನೀಡಿದೆ.

ಭಾರತದಲ್ಲಿ ಇರುವುದು ಒಕ್ಕೂಟ ವ್ಯವಸ್ಥೆ ಒಕ್ಕೂಟ ವ್ಯವಸ್ಥೆ ಅಂದರೆ ಆಯಾ ರಾಜ್ಯಗಳಿಗೆ ತಮ್ಮ ಗಡಿಯೊಳಗೆ ಸಾರ್ವಭೌಮತ್ವವನ್ನು ಕಲ್ಪಿಸುವುದು ಮಾತ್ರವಲ್ಲ ಅವುಗಳ ಹಕ್ಕುಗಳು ಮತ್ತು ರಾಜ್ಯಗಳ ಪ್ರಾದೇಶಿಕ ಭಾಷೆಯನ್ನು ಮನ್ನಿಸಿ ಗೌರವಿಸುವುದು ಮಾತ್ರವಲ್ಲ ಸಾಂಸ್ಕೃತಿಕ ಅಂಶವೂ ಇದರಲ್ಲಿ ಅಡಕವಾಗಿದೆ. ಆದರೆ ಕೇಂದ್ರದ ಮೋದಿ ಸರಕಾರ ಸಂವಿಧಾನದ ಆಶಯಗಳಿಗೆ ತದ್ವಿರುದ್ಧವಾಗಿ ಹಿಂದಿಗೆ ವಿಶೇಷ ಪ್ರಾತಿನಿಧ್ಯ ನೀಡಲು ಹೊರಟಿರುವುದು ಸರಿಯಲ್ಲ. ಸಂವಿಧಾನದ 348(1)(ಬಿ) ವಿಧಿಯು ದೇಶದ ಎಲ್ಲಾ ಶಾಸನಗಳ ಅಧಿಕೃತ ಪಠ್ಯವೂ ಇಂಗ್ಲಿಷ್ ಭಾಷೆಯಲ್ಲಿ ಇರಬೇಕೆಂದು ಹೇಳುತ್ತದೆ. ಅಂದರೆ ವಿಧೇಯಕಗಳು, ತಿದ್ದುಪಡಿಗಳು ಶಾಸನ ಸಭೆಗಳಲ್ಲಿ ಅಂಗೀಕರಿಸಲಾದ ಕಾಯ್ದೆಗಳು ಇಂಗ್ಲಿಷ್ ಭಾಷೆಯಲ್ಲಿ ಇರಬೇಕೆಂದು ಸಂವಿಧಾನ ಹೇಳುತ್ತದೆ. ಸಂವಿಧಾನವು ಯಾವುದನ್ನೂ ಕಡ್ಡಾಯವೆಂದು ಹೇಳಿರುವುದನ್ನು ರಾಜ್ಯ ಹಾಗೂ ಕೇಂದ್ರ ಸರಕಾರಗಳು ಪಾಲಿಸಲೇಬೇಕಾಗುತ್ತದೆ.

ಸಂಸತ್ತಿನ ರಾಜ್ಯಸಭೆಯಲ್ಲಿ ಕೇರಳದ ಜಾನ್ ಬ್ರಿಟ್ಯಾಸ್ ಅವರು ಇಂಗ್ಲಿಷ್ ಭಾಷೆಯಲ್ಲಿ ಕೇಳಿದ ಪ್ರಶ್ನೆಗೆ ಮಂತ್ರಿಯೊಬ್ಬರು ಹಿಂದಿಯಲ್ಲಿ ಉತ್ತರ ನೀಡಿರುವ ಬಗ್ಗೆ ವಿವಾದ ಉಂಟಾಗಿದೆ. ಇದಲ್ಲದೆ ಸಂಸತ್ತಿನ ಟಿವಿಯಲ್ಲಿ ರಾಜ್ಯಸಭೆಯ ಕಲಾಪಗಳನ್ನು ಇನ್ನು ಮುಂದೆ ಹಿಂದಿ ಭಾಷೆಯಲ್ಲಿ ಪ್ರಸಾರ ಮಾಡಲಾಗುತ್ತದೆ ಎಂದು ತಿಳಿದು ಬಂದಿದೆ. ಇನ್ನು ಮುಂದೆ ರಾಜ್ಯಸಭೆಯ ಸದಸ್ಯರು ಇಂಗ್ಲಿಷ್ ಅಥವಾ ತಮ್ಮ ರಾಜ್ಯದ ಭಾಷೆಯಲ್ಲಿ ಮಾತಾಡಿದರೂ ಅದನ್ನು ಅವರ ಧ್ವನಿಗೆ ಬದಲಾಗಿ ಹಿಂದಿ ಭಾಷೆಯಲ್ಲಿ ಅನುವಾದಿಸಿ ಪ್ರಸಾರ ಮಾಡಲಾಗುವುದೆಂದು ತಿಳಿಸಲಾಗಿದೆ. ಇತ್ತೀಚಿನ ಹೊಸ ಶಾಸನಗಳು ಕೂಡ ಹಿಂದಿ ಇಲ್ಲವೇ ಸಂಸ್ಕೃತ ಭಾಷೆಯಲ್ಲಿ ಇವೆ. ಇದು ನಿಜಕ್ಕೂ ಅತ್ಯಂತ ಆಘಾತಕಾರಿ ಸಂಗತಿಯಾಗಿದೆ. ಕೇಂದ್ರದ ಮೋದಿ ಸರಕಾರ ಹಿಂದೂ ಹಾಗೂ ಹಿಂದಿ ಭಾಷೆಗಳಿಗೆ ತಳಕು ಹಾಕಿ ಹಿಂದಿಯನ್ನು ಹೇರಲು ಹೊರಟಿದೆ. ಆದರೆ ಹಿಂದಿ ಹಿಂದೂಗಳೆಲ್ಲರ ಭಾಷೆಯಲ್ಲ ಅದೇ ರೀತಿ ಉರ್ದು ಕೂಡ ಮುಸಲ್ಮಾನರ ಭಾಷೆಯಲ್ಲ. ಯಾವುದೇ ಧರ್ಮಕ್ಕೂ ಭಾಷೆಗೂ ಸಂಬಂಧವಿಲ್ಲ. ಅದೇ ರೀತಿ ಭಾರತ ಎಂಬುದು ಯಾವುದೇ ಒಂದು ಭಾಷೆಯನ್ನು ಆಡುವ ಜನರ ದೇಶವಲ್ಲ ಭಾರತದ ಬಹುತೇಕ ಜನರು ಹಿಂದೂಗಳೆಂದು ಕರೆಯಲಾಗುತ್ತಿದ್ದರೂ ಅವರೆಲ್ಲರೂ ಮಾತಾಡುವ ಭಾಷೆ ಹಿಂದಿಯಲ್ಲ ಹಿಂದಿ ಎಂಬುದು 3-4 ರಾಜ್ಯಗಳಿಗೆ ಸೀಮಿತವಾದ ಭಾಷೆ ಮಾತ್ರ, ಹಿಂದಿ ಮಾತ್ರವಲ್ಲ ಕನ್ನಡ, ತಮಿಳು, ತೆಲುಗು, ಮಲಯಾಳಂ, ಮರಾಠಿ ಮುಂತಾದ 22 ರಾಜ್ಯಗಳ ಅಧಿಕೃತ ಪ್ರಾದೇಶಿಕ ಭಾಷೆಗಳು ರಾಷ್ಟ್ರ ಭಾಷೆಗಳಾಗಿವೆ. ಇದನ್ನು ಕಡೆಗಣಿಸಿ ಕೆಲವೇ ರಾಜ್ಯಗಳಿಗೆ ಸೀಮಿತವಾದ ಹಿಂದಿ ಭಾಷೆಯನ್ನು ಹಿಂದಿಯೇತರ ರಾಜ್ಯಗಳ ಮೇಲೆ ಹೇರುವುದು ಒಕ್ಕೂಟ ವ್ಯವಸ್ಥೆಗೆ ಮಾಡುವ ಅಪಚಾರವಾಗಿದೆ.

ಆದರೆ ಸಂವಿಧಾನದ ಆಶಯಗಳಿಗೆ ವ್ಯತಿರಿಕ್ತವಾಗಿ ಹಾಗೂ ರಾಜ್ಯಗಳ ಪ್ರಾದೇಶಿಕ ಭಾಷೆ ಮತ್ತು ಅಸ್ಮಿತೆಯನ್ನು ಕಡೆಗಣಿಸಿ ಹಿಂದಿಯನ್ನು ಹೇರಲು ಹೊರಟಿರುವುದು ಸರಿಯಲ್ಲ ಕಳೆದ ವರ್ಷ ಗ್ರಾಮೀಣ ಬ್ಯಾಂಕುಗಳ ಅಧಿಕಾರಿಗಳು ಹಾಗೂ ಕಚೇರಿ ಸಹಾಯಕರ ಹುದ್ದೆಗಳಿಗಾಗಿ ದೇಶವ್ಯಾಪಿ ನಡೆದ ಪ್ರಾಥಮಿಕ ಪರೀಕ್ಷೆಯಲ್ಲಿ ಹಿಂದಿಯನ್ನು ಕಡ್ಡಾಯವಾಗಿ ಹೇರಲಾಗಿತ್ತು. ಇದರಿಂದ ಕರ್ನಾಟಕ ಸೇರಿದಂತೆ ಬಹುತೇಕ ಎಲ್ಲಾ ಹಿಂದಿಯೇತರ ರಾಜ್ಯಗಳಲ್ಲಿ ಭಾರೀ ಪ್ರತಿಭಟನೆ ಮತ್ತು ಚಳವಳಿಗಳು ನಡೆದವು. ಹೀಗಾಗಿ ಪೊಲೀಸ್ ರಕ್ಷಣೆಯಲ್ಲಿ ಸದರಿ ಪರೀಕ್ಷೆಗಳು ನಡೆದವು ಬೆಂಗಳೂರಿನ ಮೇಟ್ರೊದಲ್ಲಿ ಹಿಂದಿ ಹೇರಿಕೆ ಮಾಡಲು ಹೊರಟಾಗ ತೀವ್ರ ವಿರೋಧ ವ್ಯಕ್ತವಾಯಿತು. ಆಗ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಹಿಂದಿ ಹೇರಿಕೆಯ ವಿರುದ್ಧ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದರು. ಆದರೂ ಹಿಂದಿ ಹೇರಿಕೆಯನ್ನು ಕೇಂದ್ರ ಸರಕಾರ ಮುಂದುವರಿಸಿದೆ.

ಒಂದೆಡೆ ಹಿಂದಿಯನ್ನು ರಾಷ್ಟ್ರಭಾಷೆ ಎಂದು ಬಿಂಬಿಸಿ, ಮತ್ತೊಂದೆಡೆ ಕನ್ನಡ, ತಮಿಳು, ಮಲಯಾಳಂ, ತೆಲುಗು ಮುಂತಾದ ಪ್ರಾದೇಶಿಕ ಭಾಷೆಗಳನ್ನು ಅಳಿಸಿ ಹಾಕುವುದು ಹಿಂದಿವಾದಿಗಳ ಹುನ್ನಾರವಾಗಿದೆ. ರಾಜಧಾನಿ ಬೆಂಗಳೂರು ಕೂಡ ಈಗ ಉತ್ತರ ಭಾರತದ ಹಿಂದಿ ಭಾಷಿಕರಿಂದ ತುಂಬಿದೆ. ಉತ್ತರ ಪ್ರದೇಶದಲ್ಲಿ ಆದಿತ್ಯನಾಥ್ ಸರಕಾರ ಅಲ್ಲಿನ ಯುವಕರಿಗೆ ಉದ್ಯೋಗ ಕೊಡುತ್ತಿಲ್ಲ. ಅವರೆಲ್ಲ ಬೇರೆ ದಾರಿ ಕಾಣದೆ ಬೆಂಗಳೂರಿಗೆ ಬರುತ್ತಾರೆ. ಹೀಗಾಗಿ ಬೆಂಗಳೂರಿನಲ್ಲಿ ಹಿಂದಿ ಭಾಷಿಕರ ಸಂಖ್ಯೆ ಹೆಚ್ಚಾಗುತ್ತಿದೆ. ಅಷ್ಟೇ ಅಲ್ಲದೆ ಕರ್ನಾಟಕದಲ್ಲಿ ಇರುವ ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಉತ್ತರ ಭಾರತದ ಹಿಂದಿ ಭಾಷಿಕರನ್ನೇ ವರ್ಗಾವಣೆ ಮಾಡಿರುವುದರಿಂದ ಕನ್ನಡ ಬಾರದ ಅವರಿಂದಾಗಿ ಕನ್ನಡ ಗ್ರಾಹಕರಿಗೆ ತುಂಬಾ ತೊಂದರೆಯಾಗಿದೆ. ಹಳ್ಳಿಗಾಡಿನಲ್ಲಿ ಇರುವ ಬ್ಯಾಂಕ್ ಶಾಖೆಗಳಲ್ಲೂ ವರ್ಗಾವಣೆಯಾಗಿ ಬಂದವರು ಹೆಚ್ಚಿನ ಸಂಖ್ಯೆಯಲ್ಲಿ ಇದ್ದಾರೆ. ಹೀಗಾಗಿ ಕನ್ನಡ ಬಿಟ್ಟು ಬೇರೆ ಭಾಷೆ ಗೊತ್ತಿಲ್ಲದ ರೈತರಿಗೆ, ಕಾರ್ಮಿಕರಿಗೆ ತುಂಬಾ ತೊಂದರೆಯಾಗಿದೆ. ಇದನ್ನು ಸರಿಪಡಿಸುವುದು ತುರ್ತು ಅಗತ್ಯವಾಗಿದೆ.

ನಿಮ್ಮ ಹೃದಯ ಚೆನ್ನಾಗಿ ಕೆಲಸ ಮಾಡುತ್ತಿದೆ ಎಂದು ತಿಳಿಸುವ ಸೂಚನೆಗಳು

• ಉದಯವಾಹಿನಿ, ಬೆಂಗಳೂರು

ನಮ್ಮ ಇಡೀ ದೇಹದ ಚಲನೆ ನಿಂತಿರುವುದೇ ನಮ್ಮ ಹೃದಯದ ಬಡಿತದ ಮೇಲೆ. ನಾವು ಹುಟ್ಟಿದಾಗಿನಿಂದ ಸಾಯುವವರೆಗೂ ನಮ್ಮ ಹೃದಯ ತನ್ನ ಬಡಿತವನ್ನು ನಿಲ್ಲಿಸುವುದಿಲ್ಲ. ಈ ರೀತಿ ಹೃದಯ ತನ್ನ ಕಾರ್ಯ ಚಟುವಟಿಕೆಯನ್ನು ದಿನದ 24 ಗಂಟೆ ಮಾಡಬೇಕು ಎಂದರೆ ಅದಕ್ಕೆ ಪೂರಕವಾದ ವಾತಾವರಣ ನಮ್ಮ ದೇಹದಲ್ಲಿರಬೇಕು. ನಮ್ಮದೇ ಆದ ಕೆಟ್ಟ ಜೀವನ ಶೈಲಿ ಹಾಗೂ ಆಹಾರ ಪದ್ಧತಿ ಹೃದಯದ ಆರೋಗ್ಯಕ್ಕೆ ಮಾರಕ. ಇದು ಹೃದಯ ಬಡಿತವನ್ನು ಏರುಪೇರು ಮಾಡುತ್ತದೆ.

ರಕ್ತದ ಒತ್ತಡ ಸರಿ ಇದ್ದರೆ

ನಿಮ್ಮ ರಕ್ತದ ಒತ್ತಡವನ್ನು ಕೂಡ ನೀವು ಆಗಾಗ ಪರೀಕ್ಷೆ ಮಾಡಿಸಿಕೊಳ್ಳುವುದು ಒಳ್ಳೆಯದು. ಸಹಜವಾದ ರಕ್ತದ ಒತ್ತಡ ನಿಮ್ಮ ಹೃದಯದ ಆರೋಗ್ಯವನ್ನು ಸೂಚಿಸುತ್ತದೆ. ರಕ್ತದ ಒತ್ತಡ ಹೆಚ್ಚು ಅಥವಾ ಕಡಿಮೆ ಆದರೆ ಅದರಿಂದ ಹೃದಯದ ಆರೋಗ್ಯಕ್ಕೆ ತೊಂದರೆ ಎನ್ನುತ್ತಾರೆ.

ಕೆಲವೊಂದು ಚಿಹ್ನೆಗಳ ಪ್ರಕಾರ ನಮ್ಮ ಹೃದಯ ಸರಿಯಾಗಿ ಕೆಲಸ ಮಾಡುತ್ತಿಲ್ಲ ಎಂದು ತಿಳಿದುಕೊಳ್ಳಬಹುದು. ಅದೇ ತರಹ ಇನ್ನು ಕೆಲವು ಸೂಚನೆಗಳು ನಮ್ಮ ಹೃದಯದ ಆರೋಗ್ಯ ಚೆನ್ನಾಗಿದೆ ಎಂದು ತಿಳಿಸುತ್ತವೆ. ಇಲ್ಲಿ ಅವುಗಳ ಬಗ್ಗೆ ಮಾಹಿತಿ ಇದೆ.

ಉತ್ತಮ ಕೊಲೆಸ್ಟ್ರಾಲ್ ಮಟ್ಟ: ನೀವು ಆಗಾಗ ಕೊಲೆಸ್ಟ್ರಾಲ್ ಪರೀಕ್ಷೆ ಮಾಡಿಸುತ್ತಿದ್ದರೆ ಮತ್ತು ಕೆಟ್ಟ ಕೊಲೆಸ್ಟ್ರಾಲ್ ಪ್ರಮಾಣ ಮಿತಿಯಲ್ಲಿದ್ದರೆ, ನಿಮ್ಮ ಹೃದಯಕ್ಕೆ ಯಾವುದೇ ತೊಂದರೆ ಇಲ್ಲ ಎಂದರ್ಥ. ಏಕೆಂದರೆ ಕೊಲೆಸ್ಟ್ರಾಲ್ ನಮ್ಮ ದೇಹದಲ್ಲಿ ಹೆಚ್ಚಾದರೆ ಅದರಿಂದ ಹೃದಯ ಬಡಿತ ಏರುಪೇರಾಗುತ್ತದೆ ಮತ್ತು ಹೃದಯದ ಕಾರ್ಯ ಚಟುವಟಿಕೆಗೆ ತೊಂದರೆ ಆಗುವ ಸಾಧ್ಯತೆ ಇರುತ್ತದೆ. ಇದು ಹೃದಯದ ಕಾಯಿಲೆಗೂ ಕೂಡ ಕಾರಣವಾಗಬಹುದು.

ಇದು ಹೃದಯ ಬಡಿತವನ್ನು ಏರುಪೇರು

ಹೃದಯ ಬಡಿತ: ಒಂದು ನಿಮಿಷಕ್ಕೆ ನಿಮ್ಮ ಹೃದಯ ಎಷ್ಟು ಬಡಿದುಕೊಳ್ಳುತ್ತದೆ ಎನ್ನುವುದನ್ನು ಇದು ಸೂಚಿಸುತ್ತದೆ. ಹೃದಯ ಆರೋಗ್ಯವಾಗಿ ಕೆಲಸ ಮಾಡುತ್ತಿದೆ ಎಂದು ತಿಳಿದುಕೊಳ್ಳಲು ಹೃದಯ ಬಡಿತದ ದರವನ್ನು ಪರೀಕ್ಷೆ ಮಾಡಬೇಕು. ಒಂದು ವೇಳೆ ನಿಮ್ಮ ಹಾರ್ಟ್ ಬೀಟ್ 60 ರಿಂದ 100 ಇದ್ದರೆ, ನಿಮ್ಮ ಹೃದಯದ ಆರೋಗ್ಯ ಚೆನ್ನಾಗಿದೆ ಎಂದರ್ಥ.

ಸುಸ್ತು, ಆಯಾಸ ಆಗದಿರುವುದು : ಇದು ನಿಮ್ಮ ದೇಹದ ಶಕ್ತಿಯ ಮಟ್ಟವನ್ನು ಸೂಚಿಸುತ್ತದೆ. ನಿಮಗೆ ಪದೇ ಪದೇ ಸುಸ್ತು, ಆಯಾಸ ಆಗುತ್ತಿದ್ದರೆ, ನಿಮ್ಮ ಹೃದಯ ಚೆನ್ನಾಗಿ ಕೆಲಸ ಮಾಡುತ್ತಿಲ್ಲ ಎಂದು ನೀವು ತಿಳಿದು ಕೊಳ್ಳಬಹುದು. ರಾತ್ರಿಯ ಸಮಯ ದಲ್ಲಿ ಉತ್ತಮ ನಿದ್ರೆ ಮಾಡಿ ಬೆಳಗ್ಗೆ ಒಳ್ಳೆಯ ಶಕ್ತಿ ಹಾಗೂ ಚೈತನ್ಯದಿಂದ ಕೂಡಿದ್ದರೆ, ನಿಮ್ಮ ಹೃದಯಕ್ಕೆ ಯಾವುದೇ ತೊಂದರೆ ಇಲ್ಲ ಎಂದು ನೀವು ತಿಳಿದುಕೊಳ್ಳಬಹುದು.



ಚೆನ್ನಾಗಿ ವ್ಯಾಯಾಮ ಮಾಡುವುದು: ಕೆಲವರಿಗೆ ವ್ಯಾಯಾಮ ಮಾಡಲು ಕೂಡ ದೇಹ ದುರ್ಬಲವಾಗಿರುತ್ತದೆ. ವ್ಯಾಯಾಮ ಮಾಡಲು ಹೋದರೆ ಉಸಿರುಗಟ್ಟುವುದು, ಎದೆ ಹಿಡಿದುಕೊಂಡಂತೆ ಆಗುವುದು, ಸುಸ್ತು, ಆಯಾಸ ಎದುರಾಗುತ್ತದೆ. ನೀವು ಯಾವುದೇ ತೊಂದರೆ ಇಲ್ಲದೆ ಸರಾಗವಾಗಿ ವ್ಯಾಯಾಮ ಮಾಡಲು ಯಾವಾಗ ಮುಂದಾಗುತ್ತೀರಿ, ಆಗ ನಿಮ್ಮ ಹೃದಯ ಹಾಗೂ ಹೃದಯ ರಕ್ತನಾಳದ ಆರೋಗ್ಯ ಸರಿ ಇದೆ ಎಂದರ್ಥ.

ಚೆನ್ನಾಗಿ ಉಸಿರಾಡುವುದು: ಉಸಿರಾಟ ವ್ಯವಸ್ಥೆ ಕೂಡ ನಮ್ಮ ಹೃದಯದ ಆರೋಗ್ಯವನ್ನು ನಿರ್ಧರಿಸುತ್ತದೆ ಎಂದು ಹೇಳಬಹುದು. ಸುಮ್ಮನೆ ಕುಳಿತಿದ್ದಾಗ ಅಥವಾ ಯಾವುದಾದರೂ ಕಾರ್ಯ ಚಟುವಟಿಕೆಯಲ್ಲಿ ತೊಡಗಿದ್ದಾಗ ನಾವು ಚೆನ್ನಾಗಿ ಉಸಿರಾಡುತ್ತಿದ್ದೇವೆ ಮತ್ತು ನಮ್ಮ ದೇಹದೊಳಗಿನ ಎಲ್ಲಾ ಅಂಗಾಂಗಗಳಿಗೆ ಸರಿಯಾಗಿ ಆಮ್ಲಜನಕ ಪೂರೈಕೆ ಆಗುತ್ತಿದೆ ಎಂದರೆ ನಮ್ಮ ಹೃದಯದ ಆರೋಗ್ಯ ಚೆನ್ನಾಗಿದೆ ಎಂದು ತಿಳಿದುಕೊಳ್ಳಬಹುದು.

ಉತ್ತಮ ದೈಹಿಕ ತೂಕ

ಹೃದಯದ ಆರೋಗ್ಯಕ್ಕೆ ದೇಹದ ತೂಕ ಕೂಡ ಬಹಳ ಮುಖ್ಯ. ದೇಹದ ತೂಕ ಹೆಚ್ಚಾದರೆ, ಅದು ಹೃದಯದ ಮೇಲೆ ಕೆಟ್ಟ ಪ್ರಭಾವ ಬೀರುವ ಸಾಧ್ಯತೆ ಇರುತ್ತದೆ. ಇದಕ್ಕಾಗಿ ಆರೋಗ್ಯ ತಜ್ಞರು ಬಾಡಿ ಮಾಸ್ ಇಂಡೆಕ್ಸ್ ಪರಿಗಣನೆಗೆ ತೆಗೆದುಕೊಳ್ಳುತ್ತಾರೆ. ಇದು 18.5 ರಿಂದ 24.9ರವರೆಗೆ ಇದ್ದರೆ, ಜೊತೆಗೆ ನಮ್ಮ ಜೀವನ ಶೈಲಿ ಚೆನ್ನಾಗಿದ್ದರೆ, ಹೃದಯ ಆರೋಗ್ಯಕರವಾಗಿದೆ ಎಂದರ್ಥ. ಹಾಗಾಗಿ ತೂಕ ನಿಯಂತ್ರಣ ಆರೋಗ್ಯಕರ ಹೃದಯದ ಮೇಲೆ ಬಹಳ ಉತ್ತಮ ಪ್ರಭಾವ ಬೀರಬಲ್ಲದು.

ಸಕ್ಕರೆಯ ಅಕ್ಕರೆಯ ಭವ್ಯ ಊರು ಮಂಡ್ಯ ಮನಸ್ಸು ಮಲ್ಲಿಗೆ ನವಿರು

ಗೊರೂರು ಅನಂತರಾಜು

• ಉದಯವಾಹಿನಿ, ವಿಶೇಷ

ಸಕ್ಕರೆ ಸೀಮೆ ಎಂದು ಹೆಸರಾದ ಮಂಡ್ಯದಲ್ಲಿ ಆಖಿಲ ಭಾರತ ಸಾಹಿತ್ಯ ಸಮ್ಮೇಳನ ನಡೆಯುತ್ತಿದೆ. ಇಲ್ಲಿಯ ಕವಿ ಮಿತ್ರ ಕಟ್ಟೆ ಎಂ.ಎಸ್. ಕೃಷ್ಣಸ್ವಾಮಿಯವರ 3ನೇ ಕವನ ಸಂಕಲನ ಮನಸು ಮಲ್ಲಿಗೆ ನವಿರು ಈಗ ಕೈಗೆ ಸಿಕ್ಕಿದೆ. ಕಟ್ಟೆಯವರು ವಿಶ್ವ ವಿಖ್ಯಾತ ಬೃಂದಾವನ ಅಣೆಕಟ್ಟೆ ಇರುವ ಕೃಷ್ಣರಾಜಸಾಗರದಲ್ಲಿ ಹುಟ್ಟಿ ಈಗ ಮಂಡ್ಯದಲ್ಲಿ ಗೂಡು ಕಟ್ಟಿ ಇತ್ತೀಚೆಗೆ ಗೃಹಪ್ರವೇಶಕ್ಕೆ ಕರೆದಿದ್ದರು. ಹೋಗಲಾಗಲಿಲ್ಲ, ಇದಕ್ಕೆ ಬೇಸರ ಬೇಡ ಗೆಳೆಯ. ಹಿಂದೊಮ್ಮೆ ನೀವು ಹಾಸನಕ್ಕೆ ಕವಿಗೋಷ್ಠಿಗೆ ಬಂದಾಗ ಒಂದು ಕವನ ಸಂಕಲನ ಕೊಟ್ಟು ಹೋಗಿದ್ದು ಸರಿಯಷ್ಟೇ. ಅದು ನನ್ನ ಪುಸ್ತಕ ಭಂಡಾರದಲ್ಲಿ ಅಡಗಿ ಹೋಗಿತ್ತು. ಇಂದು ಮನೆಯ ಧೂಳು ಕೊಡವಲು ಹೊರಟು ಅಚಾನಕ್ ಸಿಕ್ಕಿತು. ಓದಲು ಕುಳಿತೆ. ನಿಮ್ಮ ಮೊದಲ ಕವನ ಸಂಕಲನ ಮನಸ್ಸು ನಕ್ಕಾಗ ಎಂದೂ ತಿಳಿಯಿತು. ನೀವು ಪತ್ರಿಕೆಗಳಲ್ಲಿ ಆಗಿಂದಾಗ್ಗೆ ಕವಿತೆ ಬರೆಯುತ್ತಿರುತ್ತಿರಲ್ಲಾ ಗಮನಿಸುತ್ತಿರುವೆ. ನಿಮ್ಮ ಮನಸ್ಸು ಮಲ್ಲಿಗೆಯಲ್ಲಿ ಮಂಡ್ಯ ಒಳಗೊಂಡು ನಮ್ಮ ನಾಡಿನ ಹೆಮ್ಮೆಯ ಕವಿ ಸಾಹಿತಿಗಳು, ನಾಡು ಕಟ್ಟಿದವರು ನಿಮ್ಮ ಹುಟ್ಟೂರಲ್ಲಿ ಅಣೆಕಟ್ಟೆ ಕಟ್ಟಿದವರು ಸೇರಿ ಅನೇಕ ಮಹನೀಯರ ಸೇವಾ ಕೈಂಕರ್ಯವನ್ನು ಕವಿತೆಯ ನುಡಿಗಟ್ಟಿನಲ್ಲಿ ಕಟ್ಟಿಕೊಟ್ಟಿದ್ದಿರಿ. ಸಂಕಲನದ ಮೊದಲ ಕವಿತೆ ಭುವನೇಶ್ವರಿ ಸೊಗಸಾಗಿ ಪ್ರಾಸಬದ್ಧತೆಯಲ್ಲಿ ಪಡಿಮೂಡಿದೆ. ಕುವೆಂಪು ಬೇಂದ್ರೆ ಕಾರಂತ ಮಾಸ್ತಿಯವರ ಸಂಗಮ



ವಿಶ್ವೇಶ್ವರಯ್ಯ ಒಡೆಯರ್ ಕನ್ನಂಬಾಡಿ ಕಟ್ಟೆಯ ಉಗಮ

ವ್ಯಕ್ತಿ ಚಿತ್ರಗಳೇ ಹೆಚ್ಚಿರುವ ನಿಮ್ಮ ಕವಿತೆಗಳಲ್ಲಿ ನಾಡಿನ ಅನೇಕ ರಾಜರು ದೇಶ ನಾಡು ಕಟ್ಟಿ ಬಾಳಿ ಬೆಳಗಿದ ಇತಿಹಾಸ ಪುರುಷರ ಭವ್ಯ ಇತಿಹಾಸ ಅನಾವರಣಗೊಂಡಿದೆ. ನಿಮ್ಮ ಕಾವ್ಯವು ಜೀವನ ದೃಷ್ಟಿಯಾಗಿ ಮನುಷ್ಯನೇ ಕಾವ್ಯದ ಕೇಂದ್ರವಾಗಿ ನಾಡು ನುಡಿ ಸೇವೆಗೈದವರ ಸ್ಮರಣೆ ಮನನೀಯವೇ ಸೈ,

ಬೆಂಗಳೂರು ಕಟ್ಟಿದ ಕೆಂಪೇಗೌಡ ನಾಡಿನ ವೀರ ಉದ್ಧಮ

ಹಕ್ಕ ಬುಕ್ಕರ ಜನ್ನ ವಿಜಯ ನಗರದ ಸಾಮ್ರಾಜ್ಯದ ಉಗಮ ಈ ನಡುವೆ ನಮ್ಮ ನಿಮ್ಮ ನಡುವೆ ಬೆಳೆಯುತ್ತಿರುವ ಭ್ರಷ್ಟಾಚಾರದ ಭೂತ ನಿಮ್ಮನ್ನು ಕೆಂಗೆಡಿಸಿದೆ. ನೀವು ಇಲ್ಲಿ ಸಾಂಕೇತಿಕ ಅಷ್ಟೇ. ಭ್ರಷ್ಟ ತೋಳಗಳ ನಡುವೆ ನೀವಷ್ಟೇ ಅಲ್ಲಾ ನಾವೂ ಕುರಿಗಳೇ. ಕವಿ ನಿಸಾರ್ ಅಹ್ಮದ್ ಕವಿತೆಯಲ್ಲಿ ಹೇಳಿದಂತೆ ಕುರಿಗಳು ಸಾರ್ ಕುರಿಗಳು.. ನಮ್ಮ ನಾಡಿನಲ್ಲಿ ನಮ್ಮವರೆ ತೋಳಗಳಾದರೆ ಹೇಗೆ ನಮ್ಮವರೇ ನಮ್ಮ ಕಿತ್ತು ತಿಂದರೆ ಉಳಿದೀತೆ ಮನುಕುಲ ಮನುಕುಲ ಇನ್ನು ಕಿಂಚಿತ್ ಉಳಿದಿದೆ. ಅದಕ್ಕೆ ನಾವಿನ್ನೂ ಉಳಿದಿದ್ದೇವೆ. ಮನುಷ್ಯರಾಗಿ ನೀವು ಚಿಂತಿಸಿದ್ದೀರಿ. ನಿಮ್ಮ ಪ್ರಶ್ನೆಗೆ ಉತ್ತರ ಯಾರು ಕೊಡುವುದು ಗೆಳೆಯ. ನೀವು ಸಂಕಲನದುದ್ದಕ್ಕೂ ಅಹಿಂಸೆಯ ಪರ ನಿಂತು ನಿಮ್ಮ ಮನಸ್

ಒತ್ತುವರಿ ತೆರವುಗೊಳಿಸಿ ಕಾನೂನು ಕ್ರಮ ಕೈಗೊಳ್ಳಿ: ಪುರಸಭೆ ಅಧ್ಯಕ್ಷ ಆನಂದ ಟೈಗರ್

ಪಟ್ಟಣದಾದ್ಯಂತ ಮಹಾಪುರುಷರ ಭಾವಚಿತ್ರಗಳಿಗೆ, ಮೂರ್ತಿಗಳಿಗೆ ಪುರಸಭೆ ವತಿಯಿಂದ ಸಿಸಿಟಿವಿ ಅಳವಡಿಸಲಾಗುವುದು

• ಉದಯವಾಹಿನಿ,ಚಿಂಚೋಳಿ

ಪಟ್ಟಣದ ಪುರಸಭೆ ವ್ಯಾಪ್ತಿಯಲ್ಲಿ ಅನಾಧಿಕೃತ ಕಟ್ಟಿರುವ ಕಟ್ಟಡಗಳು ಹಾಗೂ ಒತ್ತುವರಿ ಮಾಡಿರುವ ಖಾಲಿ ಸ್ಥಳಗಳನ್ನು ಶೀಘ್ರದಲ್ಲೇ ತೆರವುಗೊಳಿಸಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಪುರಸಭೆ ಅಧ್ಯಕ್ಷ ಆನಂದಕುಮಾರ ಟೈಗರ್ ಅಧಿಕಾರಿಗಳಿಗೆ ಖಡಕ್‌ಕ್ಕಾಗಿ ಸೂಚಿಸಿದರು.

ಅಧಿಕಾರಿಗಳಿಗೆ ಟೈಗರ್ ಖಡಕ್ ಸೂಚನೆ

ಪಟ್ಟಣದ ಪುರಸಭೆ ಕಾರ್ಯಾಲಯದಲ್ಲಿ ಹಮ್ಮಿಕೊಂಡ ಸಾಮಾನ್ಯ ಸಭೆಯಲ್ಲಿ ಮಾತನಾಡಿದ ಅವರು, ಈಗಾಗಲೇ ಪುರಸಭೆಗೆ ಬಂದಿರುವ 15ನೇ ಹಣಕಾಸು ಅನುದಾನ ಮತ್ತು ಇತರ ಅನುದಾನಗಳ ಕ್ರಿಯಾಯೋಜನೆ ಸಿದ್ಧಪಡಿಸಲಾಗಿದ್ದು ಈಗಾಗಲೇ ಕಾಮಗಾರಿ ಪ್ರಾರಂಭವಾಗಿದ್ದು ಅತಿಶೀಘ್ರದಲ್ಲೆ ಎಲ್ಲಾ ಕಾಮಗಾರಿಗಳು ಮುಕ್ತಾಯವಾಗಲಿದೆ ಎಂದರು.

ಸಿದ್ಧಸಿರಿ ಕಾರ್ಖಾನೆ ಮತ್ತು ಕಾರ್ಖಾನೆಯಲ್ಲಿ ಅನೇಕ ಅನಾಧಿಕೃತ ಕಟ್ಟಡಗಳು ತಲೆಎತ್ತಿವೆ ಯಾಕೆ ಅವರನ್ನು ತೆರಿಗೆ ಕೇಳಿ ನೋಟಿಸ್ ಜಾರಿ ಮಾಡಿ ಕಟ್ಟುನಿಟ್ಟಿನ ಕ್ರಮಕೈಗೊಳ್ಳುತ್ತಿಲ್ಲಾವೆಂದು ಮುಖ್ಯಾಧಿಕಾರಿಗಳಿಗೆ ಆನಂದ ಟೈಗರ್,ಅಬ್ದುಲ್ ಬಾಷೀದ್,ಅನ್ವರ್ ಖತೀಬ್,ಸಂತೋಷ ಮಾಳಪನೋರ,ಸೈಯದ್ ಶಬ್ಬೀರ,ಸದಸ್ಯರು ಧ್ವನಿಗೂಡಿಸಿ ಪ್ರೇಶ್ನಿಸಿದರು.

ಈಗಾಗಲೇ ತೆರಿಗೆ ಕಟ್ಟುವಂತೆ ನೋಟಿಸ್ ಜಾರಿ ಮಾಡಲಾಗಿದೆ ಎಂದು ಮುಖ್ಯಾಧಿಕಾರಿ ಉತ್ತರಿಸಿದರು,ಎಡ್ಮೂರು ನೋಟಿಸ್ ನೀಡಿ ಕಾರ್ಖಾನೆ ಜೋತೆಯಲ್ಲಿ ಅನಾಧಿಕೃತ ಕಟ್ಟುತ್ತಿರುವ ಕಟ್ಟಡಗಳು ಸಹ ನಿಲ್ಲಿಸಿ ಗೇಟ್ ಲಾಕ್ ಮಾಡುವಂತೆ ಮೇಲೆ ಹೇಳಿರುವ ಸದಸ್ಯರು ಒತ್ತಾಯಿಸಿದರು.

ಬಡಿದರ್ಗಾದಿಂದ ಚಂದಾಪೂರ ತಾಂಡಾದವರೆಗೆ ಅಂಗಡಿಗಳು,ಸರ್ಕಾರಿ ಕಛೆರಿಗಳು,ಕಾರ್ಖಾನೆಗಳ ಹಾಗೂ ಮನೆಗಳ ತೆರಿಗೆ ವಸೂಲಿ ಮಡುವಂತೆ ಅಧ್ಯಕ್ಷ ಆನಂದ ಟೈಗರ್ ಹಾಗೂ ಅನ್ವರ್ ಖತೀಬ್ ಸೂಚಿಸುತ್ತಿದಂತೆ ಸದಸ್ಯ ಸೈಯದ್ ಶಬ್ಬೀರ ಮಾತನಾಡಿ ಮೊದಲು ಸಾರ್ವಜನಿಕರಿಗೆ ಕುಡಿಯುವ ನೀರು, ದಿನಾಲು ಕಸದ ವಾಹನ ಇನ್ನೀತರ ಮೂಲ ಭೂತ ಸೌಕರ್ಯ ಕಲ್ಪಿಸಿ ಅಲ್ಲಿಯವರೆಗೆ ಯಾರೂ ತೆರಿಗೆ ಕಟ್ಟಬೇಡಿ ಎಂದು ಪ್ರಚಾರ ಮಾಡುತ್ತೇನೆ ಎಂದು ಸವಾಲೇಸಿದರು,ತಕ್ಷಣವೇ ಅಧ್ಯಕ್ಷ ಮುಖ್ಯಾಧಿಕಾರಿಗೆ ಮಾತನಾಡಿ ಯಾಕೆ ಅವರ ವಾರ್ಡಗಳಿಗೆ ನೀರು ಸರಬರಾಜು ಕಸದ ವಾಹನ ತೊಂದರೆಯಿದೆ ಅನುಕೂಲ ಕಲ್ಪಿಸುವಂತೆ ಸೂಚಿಸಿದರು.

ಅಧ್ಯಕ್ಷ ಆನಂದಕುಮಾರ ಟೈಗರ್ ಮಾತನಾಡಿ ನೀಮಾಹೋಸಳ್ಳಿ ರಸ್ತೆಗೆ ಸರ್ಕಾರದಿಂದ ನಿರ್ಮಿಸಿದ 200ಮನೆಗಳು ಹಾಳುಬಿದ್ದಿವೆ,ಸರ್ವೆ ನಂಬರ್ 186/2 10ಏಕರೆ ಜಮೀನಿನಲ್ಲಿ ಕೊಳಚೆ ಅಭಿವೃದ್ಧಿ ಮಂಡಳಿ ವತಿಯಿಂದ 250ಮನೆಗಳು ನಿರ್ಮಿಸುತ್ತಿದ್ದು ಎಲ್ಲಾ ಕಳಪೆಮಟ್ಟದಿಂದ ನಿರ್ಮಾಣ ಮಾಡುತ್ತಿದ್ದಾರೆ,ಅದರ ದಾಖಲಾತಿಗಳು ಕೊಡಿ ದೂರು ಸಲ್ಲಿಸೋಣ ಇಲ್ಲ ಕಾಮಗಾರಿ ವಿಕ್ಷಿಸೋಣ ಮನೆಗಳು ಗುಣಮಟ್ಟದಿಂದ ಮಾಡಲು ತಾಕೀತು ಮಾಡೋಣ ದಾಖಲಾತಿಗಳು ಕೊಡಿ ಎಂದರೆ ಮುಖ್ಯಾಧಿಕಾರಿ ಅವರಿಗೆ ಅನೇಕ ಬಾರಿ ನೋಟಿಸ್ ನೀಡಿದರೂ ಯಾವುದೇ ದಾಖಲಾತಿಗಳು ಕೊಟ್ಟಿಲ್ಲ ಎಂದರೆ ಅಧ್ಯಕ್ಷ ಮಾತನಾಡಿ ಯಾವುದೇ ದಾಖಲೆ ಪತ್ರಗಳನ್ನು ನೀಡಿಲ್ಲ ಅಂದರೆ ನಮ್ಮ ಪುರಸಭೆ ವ್ಯಾಪ್ತಿಯಲ್ಲಿ ಕಟ್ಟಡಗಳು ಕಟ್ಟುತ್ತಿರುವುದು ಯಾರನ್ನು ಕೇಳಿ ಯಾಕೆ ದಾಖಲೆಗಳು ಕೊಟ್ಟಿಲ್ಲ ತಕ್ಷಣವೇ ಜಿಲ್ಲಾಧಿಕಾರಿಗಳಿಗೆ ಪತ್ರ ಬರೆದು ಮಾಹಿತಿ ಕೇಳಿ ದಾಖಲಾತಿಗಹು ನೀಡುವಂತೆ ಪತ್ರ ಬರೆಯವಂತೆ ಸೂಚಿಸಿದರು.

ಉದಯವಾಹಿನಿ ಚಿತ್ರ

ಸರ್ಕಾರಿ ಯೋಜನೆಗಳು ಬಡ ಜನರಿಗೆ ತಲುಪಬೇಕು ಅದನ್ನು ಬಿಟ್ಟು ಪುರಸಭೆಯಲ್ಲಿ ಅನೇಕ ಕಟ್ಟಡಗಳು 15-20ವರ್ಷಗಳಿಂದ ನಿರ್ಮಾಣ ಮಾಡುತ್ತಿದ್ದಾರೆ ಇಲ್ಲಿಯವರೆಗೆ ಯಾವ ಕಟ್ಟಡಗಳು ಪೂರ್ಣಗೊಂಡಿಲ್ಲ ಅಂದರೆ ಸರ್ಕಾರಿ ಸೌಲಭ್ಯಗಳನ್ನು ಹೇಗೆ ಜನರಿಗೆ ತಲುಪುತ್ತವೆ ಎಂದು ಪ್ರೇಶ್ನಿಸಿದರು.

ಪಟ್ಟಣದ್ಯಂತ ಮಹಾಪುರುಷರ ಭಾವಚಿತ್ರಗಳಿಗೆ,ಮೂರ್ತಿಗಳಿಗೆ ಪುರಸಭೆ ವತಿಯಿಂದ ಸಿಸಿಟಿವಿ ಕ್ಯಾಮೆರಾ ಅಳವಡಿಸಲಾಗುವುದು,ಹಾಗೆಯೇ ಈಗಾಗಲೇ ತೆರಿಗೆ 75ಪ್ರತಿಶತಃ ವಸೂಲಾತಿ,ಕರ ವಸೂಲಿ 12ಪ್ರತಿಶತಃ,ವಸೂಲಾತಿ ಆಗಿದೆ ಸಿದ್ಧಸಿರಿ ಕಂಪನಿಯ ತೆರಿಗೆ ಮತ್ತು ಅನಾಧಿಕೃತ ಕಟ್ಟಡಗಳು ನಿರ್ಮಿಸಲಾಗಿದೆ ಸಾಮಾನ್ಯ ಸಭೆಯಲ್ಲಿ ಚರ್ಚೆ ಮಾಡಲಾಗಿದ್ದು ಅನಾಧಿಕೃತ ಕಟ್ಟಿರುವ ಕಟ್ಟಡಗಳಿಗೆ ನೋಟಿಸ್ ಜಾರಿ ಮಾಡುವಂತೆ ಸಭೆಯಲ್ಲಿ ನಿರ್ಣಯ ಮಂಡನೆ ಮಾಡಲಾಗಿದೆ ನೋಟಿಸ್ ಉತ್ತರ ಬಂದನಂತರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು - ಆನಂದಕುಮಾರ ಟೈಗರ್, ಪುರಸಭೆ ಅಧ್ಯಕ್ಷರು.

ಕಾನೂನು ಸಲಹೇಗಾರರ ಬದಲಾವಣೆ ಚರ್ಚೆ

ಪುರಸಭೆ ಕಾನೂನು ಸಲಹೆಗಾರರಿಗೆ ಬದಲಾವಣೆ ಮಾಡೋಣ ಎಲ್ಲಾ ಸದಸ್ಯರ ಒಪ್ಪಿಗೆ ಇದಿಯಾ ಎಂದು ಅಧ್ಯಕ್ಷರು ಸೂಚಿಸಿದಾಗ ಬಹುಮತ ಇದಂತೆ ಬದಲಾಯಿಸಿವೆಂದು ಸದಸ್ಯರು ಧ್ವನಿಗೂಡಿಸಿದರು,ಎಡ್ಮೂರು ಜನ ವಿರೋಧ ಪಡಿಸಿ ಮೊದಲು ಅವರ ಇಷ್ಟುದಿನ ಮಾಡಿ ಕೆಲಸಕ್ಕೆ ಹಣ ಕೊಟ್ಟು ಬದಲಾಯಿಸಿ ಎಂದು ಭೀಮರಾವ ರಾಠೋಡ್ ಸದಸ್ಯ ಹೇಳಿದರು,ಅಧ್ಯಕ್ಷ ಆನಂದ ಟೈಗರ್ ಮಾತನಾಡಿ ಅವರ ಹಣ ಕೊಡೋಣ ಮೊದಲು ಬದಲಾವಣೆ ಮಾಡಿ ಅವರು ಎಷ್ಟು ಪ್ರಕರಣಗಳು ನ್ಯಾಯಾಲಯದಲ್ಲಿ ನಡೆಸಿದ್ದಾರೆ ಎಷ್ಟು ಗೆಲುವು ಸಾಧಿಸಿದ್ದಾರೆ ಎಷ್ಟು ದಿನ ಆಯಿತು ಎಂದು ವರದಿ ಪಡೆದ ನಂತರ ಅವರ ಬಿಲ್ಲು ಅವರಾಗೆ ನೀಡೋಣ ಈಗ ಸದ್ಯದಲ್ಲಿಯೇ ಅವರಿಗೆ ಬದಲಾವಣೆ ಮಾಡುತ್ತಿದ್ದೇವೆ ಎಂದು ಬಹುಮತದ ಸದಸ್ಯರ ಬೆಂಬಲ ಪಡೆದು ಸಭೆಯಲ್ಲಿ ಪಾಸ್ ಮಾಡಲಾಗಿದೆ ಎಂದರು.

ಉಪಾಧ್ಯಕ್ಷ ಸುಲ್ತಾನಬೇಗಂ, ಮುಖ್ಯಾಧಿಕಾರಿ ಕಾಶಿನಾಥ ಧನ್ನಿ, ಅಬ್ದುಲ್ ಬಾಷೀದ್, ಅನ್ವರ್ ಖತೀಬ್, ಸೈಯದ್ ಶಬ್ಬೀರ, ಭೀಮರಾವ ರಾಠೋಡ್, ಜಗನ್ನಾಥ ಗುತ್ತೇದಾರ, ರಾಧಾಬಾಯಿ,ರೂಪಕಲಾ ಕಟ್ಟಿಮನಿ, ಕವಿತಾ ಬಸವರಾಜ, ಸಂತೋಷ ಮಾಳಪನೋರ, ಫರ್ಜಾನಬೇಗಂ, ಬಸವರಾಜ ಸಿರ್ಸಿ, ಜಗದೇವಿ ಗಡಂತಿ, ನಾಗೇಂದ್ರಪ್ಪಾ ಗುರಂಪಳ್ಳಿ, ಲಕ್ಷ್ಮಿಕಾಂತ ಸುಕಂದ, ಶಿವಕುಮಾರ ಪೋಚಾಲಿ, ಸೇರಿದಂತೆ ವೆಂಕಟೇಶ್, ಆನಂದ ಕಾಂಬಳೆ,ಅಯೇಜಾಜ್, ಸವಿತಾ, ಸಿಬ್ಬಂದಿ ವರ್ಗ ಅಧಿಕಾರಿಗಳು ಇದ್ದರು.

ಮಹಿಳೆಯರು,ವಿಕಲಚೇತನರು ಹೊಲಿಗೆಯಂತ್ರ ಸದುಪಯೋಗ ಪಡೆದು ಸಬಲರಾಗಿ: ರಾಠೋಡ್

• ಉದಯವಾಹಿನಿ, ಚಿಂಚೋಳಿ

ಮಹಿಳೆಯರು,ವಿಕಲಚೇತನರು ಹೊಲಿಗೆಯಂತ್ರ ಪಡೆದುಕೊಂಡು ಆರ್ಥಿಕವಾಗಿ ಸಬಲರಾಗಬೇಕು ಎಂದು ತಾಲ್ಲೂಕಾ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಶಂಕರ ರಾಠೋಡ್ ಹೇಳಿದರು.

ತಾಲ್ಲೂಕಿನ ಕರ್ಚಖೇಡ ಗ್ರಾಮ ಪಂಚಾಯತ್ ನಲ್ಲಿ ಆವರಣದಲ್ಲಿ ಹಮ್ಮಿಕೊಂಡ 15ನೇ ಹಣಕಾಸು ಹಾಗೂ ಕರ ವಸೂಲಿ ಅನುದಾನದಡಿಯಲ್ಲಿ ಮಹಿಳೆಯರಿಗೆ,ವಿಕಲಚೇತನರಿಗೆ ಹೊಲಿಗೆ ಯಂತ್ರ ವಿತರಣೆ ಕಾರ್ಯಕ್ರಮವನ್ನು ಉಧ್ಘಾಟಿಸಿ ಮಾತನಾಡಿದ ಅವರು, ಈಗಾಗಲೇ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಮಹಿಳೆಯರಿಗಾಗಿ ಮತ್ತು ವಿಕಲಚೇತನರಿಗೆ ಅನೇಕ ಯೋಜನೆಗಳು ರೂಪಿಸಿವೆ ಅದರಂತೆ ಗ್ರಾಮ ಪಂಚಾಯಿತಿಯ 15ನೇ ಹಣಕಾಸು ಯೋಜನೆ ಮತ್ತು ಕರವಸೂಲಿ ಅನುದಾನದಡಿಯಲ್ಲಿ ಮಹಿಳೆಯರಿಗೆ ಹೊಲಿಗೆಯಂತ್ರ ವಿತರಿಸಿದ್ದು ಇದರಿಂದ ಮಹಿಳೆಯರು ಸದುಪಯೋಗ ಪಡೆದುಕೊಂಡು ಸಬಲರಾಗಬೇಕು ಎಂದರು.

ಉದಯವಾಹಿನಿ ಚಿತ್ರ

ಕರ್ಚಖೇಡ ಗ್ರಾಪಂ.ಅಧ್ಯಕ್ಷ ಬಾಬುಮಿಯ್ಯ ಮೋಮೀನ್,ಗ್ರಾಪಂ ಪಿಡಿಒ ಶಾಂತಪ್ಪ,ಜಗನ್ನಾಥ ಬಡಿಗೇರ,ಸಂಗರೆಡ್ಡಿ ಕರ್ಚಖೇಡ,ಲಕ್ಷ್ಮಣ,ಸದ್ದಾಂ, ಶಂಕರ ಮುತ್ತಂಗಿ,ಹಣಮಂತ ಇರಕಪಳ್ಳಿ,ಜಗನ್ನಾಥ ಹುಲಿ ಬುರಪಳ್ಳಿ,ನಾಗೇಂದ್ರಪ್ಪ ಪೂಜಾರಿ,ಸೇರಿದಂತೆ ಸಿಬ್ಬಂದಿ ವರ್ಗದವರು ಇದ್ದರು.

ಗೊಲ್ಲರಹಟ್ಟಿಯಲ್ಲಿ ಮೌಢ್ಯ ಆಚರಣೆಗಳ ವಿರುದ್ಧ ಜಾಗೃತಿ

• ಉದಯವಾಹಿನಿ, ಚಿತ್ರದುರ್ಗ

ಜಿಲ್ಲೆಯ ಹಿರಿಯೂರು ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಡಿಯಲ್ಲಿ ಬರುವ ಅಮ್ಮನಹಟ್ಟಿ ಗೊಲ್ಲರಟ್ಟಿಯಲ್ಲಿ ಮೌಢ್ಯ ಪದ್ಧತಿ ಮತ್ತು ಆಚರಣೆ ವಿರುದ್ಧ ಮಂಗಳವಾರ ಜಾಗೃತಿ ಮೂಡಿಸಲಾಯಿತು.

ಜೆಂಡರ್ಸ್ ಸ್ಪೆಷಲಿಸ್ಟ್ ಡಿ.ಗೀತಾ ಮಾತನಾಡಿ, ಮೌಢ್ಯ ಆಚರಣೆಗಳಿಂದಾಗುವ ದುಷ್ಪರಿಣಾಮಗಳ ಬಗ್ಗೆ ಮತ್ತು ಅದರಿಂದ ಸಮಾಜದಲ್ಲಿ ನಡೆಯುತ್ತಿರುವ ಅನಿಷ್ಟ ಪದ್ಧತಿಗಳ ಬಗ್ಗೆ ಜಾಗೃತಿ ಮೂಡಿಸಿದರು.

ಗೊಲ್ಲರಹಟ್ಟಿಗಳಲ್ಲಿ ಹೆಣ್ಣು ಮಗಳು ಋತುಮತಿಯಾದರೆ ಮತ್ತು ಹೆರಿಗೆಯಾದರೆ ಆ ಊರಿನ ಪದ್ಧತಿಯ ಪ್ರಕಾರ ಆ ಮಹಿಳೆಯರು ಮನೆ ತೊರೆದು ಕುಟೀರಗಳಲ್ಲಿ ವಾಸ್ತವ್ಯ ಹೂಡುವುದು ವಾಡಿಕೆ ಆಗಿರುತ್ತದೆ. ಮುಂದಿನ ದಿನಗಳಲ್ಲಿ ಈ ತರಹದ ತಪ್ಪುಗಳನ್ನು ಮತ್ತು ಕೆಟ್ಟ ಆಚರಣೆಗಳನ್ನು ಮಾಡದಂತೆ ಗ್ರಾಮದ ಮಹಿಳೆಯರಿಗೆ ಅರಿವು ಮೂಡಿಸಿದ ಅವರು, ಮುಂದಿನ ದಿನಗಳಲ್ಲಿ ಈ ತರಹ ಆಚರಣೆಗಳು ಕಂಡು ಬಂದಲ್ಲಿ ಮೇಲಾಧಿಕಾರಿಗಳಿಗೆ ಮತ್ತು ಸಂಬಂಧಪಟ್ಟ ಪೊಲೀಸ್ ಅಧಿಕಾರಿಗಳಿಗೆ ಮಾಹಿತಿ ನೀಡಲಾಗುವುದು ಎಂದು ತಿಳಿಸಿದರು.

ಉದಯವಾಹಿನಿ ಚಿತ್ರ

ಈ ತರದ ಪದ್ಧತಿಗಳು ಗೊಲ್ಲರಹಟ್ಟಿಗಳಲ್ಲಿ ಕಂಡುಬಂದಲ್ಲಿ ಮಾಹಿತಿಯನ್ನು ತಿಳಿಸುವಂತೆ ಗ್ರಾಮದ ಮಹಿಳೆಯರಿಗೆ ಮಹಿಳಾ ಸಹಾಯವಾಣಿ ಸಂಖ್ಯೆ 181 ಮತ್ತು ಪೊಲೀಸ್ ಸಹಾಯವಾಣಿ 112 ಮತ್ತು ಮಕ್ಕಳ ಮೇಲೆ ಯಾವುದೇ ರೀತಿಯ ದೌರ್ಜನ್ಯ ನಡೆದಾಗ ಮಕ್ಕಳ ಸಹಾಯವಾಣಿ ಸಂಖ್ಯೆ 1098 ಗೆ ಕರೆ ಮಾಡುವಂತೆ ತಿಳಿಸಲಾಯಿತು.

ಬಾಲ್ಯ ವಿವಾಹ ನಿಷೇಧ ಕಾಯ್ದೆ, ಬಾಲಕಾರ್ಮಿಕರ ನಿಷೇಧ, ಬಾಲ ತಾಯಂದಿರು, ಪೋಕ್ಸೋ ಕಾಯಿದೆ ಸೇರಿದಂತೆ ಸುರಕ್ಷಿತ ಸ್ಪರ್ಶ, ಅಸುರಕ್ಷಿತ ಸ್ಪರ್ಶ, ಶಾಲೆಯನ್ನು ತೊರೆದರೆ ಆಗುವಂತಹ ಅನಾನುಕೂಲತೆಗಳು ಹಾಗೂ ತಮ್ಮ ತಮ್ಮ ಮನೆಯ ಮಕ್ಕಳಿಗೆ ಶಿಕ್ಷಣ ಕೊಡಿಸುವಂತೆ ಪೋಷಕರಿಗೆ ಶಿಕ್ಷಣದ ಮಹತ್ವ ಕುರಿತು ಮನವರಿಕೆ ಮಾಡಿಕೊಟ್ಟರು. ಶಾಲೆಯ ಮುಖ್ಯ ಶಿಕ್ಷಕ ಉಮೇಶ್ ಮಾತನಾಡಿ, ಮುಂದಿನ ದಿನಗಳಲ್ಲಿ ಶಾಲೆಯ ಜಗುಲಿಯನ್ನು ಬಳಸಿಕೊಂಡರೆ ಮೇಲಾಧಿಕಾರಿಗಳಿಗೆ ಮಾಹಿತಿ ನೀಡಲಾಗುವುದು.

ಈ ಪದ್ಧತಿಗಳನ್ನು ಮಾಡುವುದು ಬಹಳ ತಪ್ಪು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷ ತಿಪ್ಪೇಸ್ವಾಮಿ, ಶಾಲೆಯ ಮುಖ್ಯ ಶಿಕ್ಷಕ ಉಮೇಶ್, ಶಿಕ್ಷಕಿ ಛಾಯ, ಅಂಗನವಾಡಿ ಮೇಲ್ವಿಚಾರಕಿ ಗೀತಾ, ಆಶಾ ಕಾರ್ಯಕರ್ತೆ ಜ್ಯೋತಿ, ಗ್ರಾಮದ ಹಿರಿಯ ಮುಖಂಡರಾದ ಪಾರ್ವತಮ್ಮ ಹಾಗೂ ಅಂಗನವಾಡಿ ಕಾರ್ಯಕರ್ತೆಯರು, ಗ್ರಾಮದ ಮಹಿಳೆಯರು ಇದ್ದರು.

ರಾಜ್ಯಮಟ್ಟದ ಸ್ಕೇಟಿಂಗ್ ಸ್ಪರ್ಧೆಯ ವಿವಿಧ ವಿಭಾಗಗಳಲ್ಲಿ ಪದಕ

• ಉದಯವಾಹಿನಿ, ಮುದ್ದೇಬಿಹಾಳ

ಬಳ್ಳಾರಿ ಜಿಲ್ಲೆ ಶಿರಗುಪ್ಪ ನಗರದ ಸುಧಿಕ್ಷಾ ಇಂಟರ್ನ್ಯಾಷನಲ್ ಸ್ಕೂಲ್ ಪಿ ಯು ಕಾಲೇಜಿನಲ್ಲಿ ನಡೆದ ರಾಜ್ಯ ಮಟ್ಟದ ಸ್ಕೆಟಿಂಗ್ ಪಂದ್ಯಾವಳಿಯಲ್ಲಿ ಪಟ್ಟಣದ ಏಕಲವ್ಯ ರೂಲರ್ ಸ್ಕೆಟಿಂಗ್ ಅಕಾಡೆಮಿಯ ವಿದ್ಯಾರ್ಥಿಗಳು ವಿವಿಧ ವಿಭಾಗಗಳಲ್ಲಿ ಭಾಗಿಯಾಗಿ ಬಂಗಾರ, ಬೆಳ್ಳಿ ಮತ್ತು ಕಂಚಿನ ಪದಕಗಳನ್ನು ಪಡೆದು ಸಾಧನೆ ಮಾಡುವ ಮೂಲಕ ತಾಲ್ಲೂಕಿನ ಕೀರ್ತಿಯನ್ನು ಹೆಚ್ಚಿಸಿದ್ದಾರೆ.

ಸುಧಿಕ್ಷಾ ಇಂಟರ್ನ್ಯಾಷನಲ್ ಸ್ಕೂಲ್ ಪಿ.ಯು ಕಾಲೇಜು, ಕರ್ನಾಟಕ ರೋಲರ್ ಸ್ಕೇಟಿಂಗ್ ಅಸೋಸಿಯೇಷನ್ ಹಾಗೂ ಕಲ್ಯಾಣ ಕರ್ನಾಟಕ ರೋಲರ್ ಸ್ಕೇಟಿಂಗ್ ಅಸೋಸಿಯೇಷನ್ ಇವರ ಸಂಯುಕ್ತ ಆಶ್ರಯದಲ್ಲಿ ನಡೆದ ರಾಜ್ಯ ಮಟ್ಟದ ಸ್ಪರ್ದೆಯಲ್ಲಿ, ರಾಜ್ಯದ ವಿವಿಧ ಜಿಲ್ಲೆಗಳ 300 ಕ್ಕೂ ಹೆಚ್ಚು ಕ್ರೀಡಾಪಟುಗಳು ಭಾಗವಹಿಸಿ ಪ್ರತಿಭೆ ಪ್ರದರ್ಶಿಸಿದ್ದರು.

ಈ ಪೈಕಿ 5 ರಿಂದ 6 ವರ್ಷದ ವಯೋಮಾನದ 100 ಮೀಟರ್ ಕೆನಾಸಿಟಿ ಬಾಲಕಿಯರ ವಿಭಾಗದಲ್ಲಿ ಕಾವ್ಯಾ ಕಾಮನಕೇರಿ ಕಂಚಿನ ಪದಕ, 6 ರಿಂದ 8 ವರ್ಷದ 100 ಮೀಟರ್ ಬಾಲಕರ ವಿಭಾಗದಲ್ಲಿ ಮಿಥಿಲ್ ಅನ್ನಗೌನಿ ಬೆಳ್ಳಿ ಪದಕ, 12 ರಿಂದ 14 ವರ್ಷದ 100 ಮೀಟರ್ ಬಾಲಕರ ವಿಭಾಗದಲ್ಲಿ ಹೃದಯಾನಂದ ಕೊಪ್ಪ ಬಂಗಾರ ಪದಕ, ಕರಣ ಬೂದಿಹಾಳಮಠ ಕಂಚಿನ ಪದಕ, ಟ್ಯೊಯಿನ್ ಲೈನ್ 8 ರಿಂದ 10 ವರ್ಷದ 100 ಮೀಟರ್ ಬಾಲಕರ ವಿಭಾಗದಲ್ಲಿ ಬೆಳ್ಳಿ ಪದಕ 200 ಮೀಟರ್ ವಿಕ್ರಾಂತ ಶಾರದಳ್ಳಿ ಬಂಗಾರ ಪದಕ,6 ರಿಂದ 8 ವರ್ಷದ ಬಾಲಕರ ವಿಭಾಗದಲ್ಲಿ 200 ಮೀಟರನಲ್ಲಿ ಅನುಪ್ ತುಪ್ಪದ ಕಂಚಿನ ಪದಕ, 8 ರಿಂದ 10 ವರ್ಷದ ಬಾಲಕರ ವಿಭಾಗದಲ್ಲಿ 100 ಮೀಟರನಲ್ಲಿ ನಾಗಶ್ರತನ ಇಲ್ಲೂರ ಕಂಚಿನ ಪದಕ, 12 ರಿಂದ 14 ವರ್ಷದ ಬಾಲಕರ ವಿಭಾಗದಲ್ಲಿ 100 ಮೀಟರನಲ್ಲಿ ಶ್ರೇಯಸ್ ಭೋವಿ ಬಂಗಾರ ಪದಕ, 12 ರಿಂದ 14 ವರ್ಷದ ಬಾಲಕಿಯರ ವಿಭಾಗದಲ್ಲಿ 100 ಹಾಗೂ 200ಮೀಟರನಲ್ಲಿ ಮೀಟರನಲ್ಲಿ ಗಗನಸಿಂಧು ಅನ್ನಗೌನಿ ರನ್ವಿತಾ ಅನ್ನಗೌನಿ ಕಂಚಿನ ಪದಕ, 10 ರಿಂದ 12 ವರ್ಷದ ಬಾಲಕಿಯರ ವಿಭಾಗದಲ್ಲಿ 100 ಮೀಟರನಲ್ಲಿ ಆಮನಾ ಜಾನ್ವೇಕರ ಬಂಗಾರದ ಪದಕ, 10 ರಿಂದ 12 ವರ್ಷದ ಬಾಲಕಿಯರ ವಿಭಾಗದಲ್ಲಿ ಅದಿತಿ ನಾಗೂರ 100 ಮೀಟರನಲ್ಲಿ ಬೆಳ್ಳಿ ಹಾಗೂ 200 ಮೀಟರ್‌ನಲ್ಲಿ ಬಂಗಾರದ ಪದಕ, 10 ರಿಂದ 12 ವರ್ಷದ ಬಾಲಕಿಯರ ವಿಭಾಗದಲ್ಲಿ 100 ಹಾಗೂ 200 ಮೀಟರ್‌ನಲ್ಲಿ ಶಕುಂತಲಾ ಶಾರದಳ್ಳಿ ಕಂಚಿನ ಪದಕ, 10 ರಿಂದ 12 ವರ್ಷದ ಬಾಲಕಿಯರ ವಿಭಾಗದಲ್ಲಿ 100 ಹಾಗೂ 200 ಮೀಟರ ಎರಡು ಸ್ಕೆಟಿಂಗನಲ್ಲಿ ಕೃತಿಕಾ ತುಪ್ಪದ್ ಬೆಳ್ಳಿ ಪದಕ, ಬಾಲಕ-ಬಾಲಕಿಯರ ಜಂಟಿ 100 ಮತ್ತು 200 ಮೀಟರ್‌ನಲ್ಲಿ 6 ಬಂಗಾರ 4 ಬೆಳ್ಳಿ 13 ಕಂಚು ಪದಕ ಪಡೆದು ಸಾಧನೆಗೈದಿದ್ದಾರೆ. ವಿದ್ಯಾರ್ಥಿಗಳ ಸಾಧನೆಗೆ ತರಬೇತಿದಾರ ಶಿವಕುಮಾರ ಶಾರದಳ್ಳಿ ಅಭಿನಂದಿಸಿದ್ದಾರೆ.

ಉದಯವಾಹಿನಿ ಚಿತ್ರ

ಸಾಧನೆ ಮಾಡುವ ಮೂಲಕ ತಾಲ್ಲೂಕಿಗೆ ಕೀರ್ತಿ

ಅನುಷ್ಠಾನ ಸಮಿತಿಯ ಕಚೇರಿ ಉದ್ಘಾಟನೆ

• ಉದಯವಾಹಿನಿ,ಕಾರ್ಕಳ

ತಾಲ್ಲೂಕು ಪಂಚಾಯಿತಿ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಕಾರ್ಕಳ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯ ಕಚೇರಿ ಉದ್ಘಾಟನೆ ಹಾಗೂ ಅಧ್ಯಕ್ಷ, ಪದಾಧಿಕಾರಿಗಳ ಅಧಿಕಾರ ಸ್ವೀಕಾರ ಸಮಾರಂಭ ನಡೆಯಿತು.

ಉಡುಪಿ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿಯ ಉಪಾಧ್ಯಕ್ಷ ಉದಯ ಶೆಟ್ಟಿ ಮುನಿ ಯಾಲು ಮಾತನಾಡಿ, 'ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳು ಯಶಸ್ವಿಯಾಗುತ್ತಿದ್ದು ಅವುಗಳ ಸಮರ್ಪಕ ಅನುಷ್ಠಾನಕ್ಕೆ ಎಲ್ಲರೂ ಶ್ರಮಿಸಬೇಕು. ಸರ್ಕಾರದೊಂದಿ

ದಿನ ಭವಿಷ್ಯ

ರಾಹುಕಾಲ	ಮಧ್ಯಾಹ್ನ	01:30 ರಿಂದ 03:00
ಗುಳಿಕ ಕಾಲ	ಬೆಳಿಗ್ಗೆ	09:00 ರಿಂದ 10:30
ಯಮಗಂಡ ಕಾಲ	ಬೆಳಿಗ್ಗೆ	06:00 ರಿಂದ 07:30

ಮೇಷ ಇಂದು ನಿಮ್ಮ ವಿಶ್ವಾಸ ಬೆಳೆಯುತ್ತದೆ ಮತ್ತು ಪ್ರಗತಿ ನಿಶ್ಚಿತವಾಗಿದೆ. ದೀರ್ಘಕಾಲದ ಲಾಭಗಳಿಗೆ ಸ್ಟಾಕ್‌ಗಳು ಮತ್ತು ಮ್ಯೂಚುವಲ್ ಫಂಡ್‌ಗಳಲ್ಲಿ ಹೂಡಿಕೆ ಮಾಡುವುದನ್ನು ಶಿಫಾರಸು ಮಾಡಲಾಗಿದೆ.

ವೃಷಭ ನೀವು ಬಹುಕಾಲದಿಂದ ಎದುರು ನೋಡುತ್ತಿದ್ದ ಜೀವನದ ಒತ್ತಡಗಳಿಂದ ಇಂದು ಶಮನ ಪಡೆಯುತ್ತೀರಿ. ಅವುಗಳನ್ನು ಶಾಶ್ವತವಾಗಿ ದೂರವಿಸಿರಿಸಲು ನಿಮ್ಮ ಜೀವನಶೈಲಿಯನ್ನು ಬದಲಿಸಲು ಇದು ಸರಿಯಾದ ಸಮಯ.

ಮಿಥುನ ಜೀವನದೆಡೆಗೆ ಉದಾರವಾದ ಮನೋಭಾವ ಹೊಂದಿ. ದೂರು ನೀಡುವುದು ಮತ್ತು ನಿಮ್ಮ ಜೀವನಮಟ್ಟದ ಬಗೆಗೆ ಅಸಮಾಧಾನ ಹೊಂದುವುದರಿಂದ ಯಾವುದೇ ಪ್ರಯೋಜನವಿಲ್ಲ.

ಕರ್ಕಾಟಕ ಮ್ಮ ಭರವಸೆ ಒಂದು ಸಮೃದ್ಧ ಸೂಕ್ಷ್ಮ ಪರಿಮಳಯುಕ್ತ ಮತ್ತು ಬೆರಗುಗೊಳಿಸುವ ಹೂವಿನ ಹಾಗೆ ಅರಳುತ್ತದೆ. ಇಂದು ನಿಮ್ಮ ಕಚೇರಿಯ ಸಹೋದ್ಯೋಗಿ ನಿಮ್ಮ ಅಮೂಲ್ಯವಾದ ವಸ್ತುವನ್ನು ಕದಿಯಬಹುದು.

ಸಿಂಹ ನೀವು ಧೀರ್ಘಕಾಲೀನ ಅನಾರೋಗ್ಯದ ಚೇತರಿಸಿಕೊಳ್ಳುತ್ತೀರಿ. ಆದರೆ ಸ್ವಾರ್ಥಿಗಳಾದ, ಮುಂಗೋಪಿ ವ್ಯಕ್ತಿಯ ಸಹವಾಸವನ್ನು ತಪ್ಪಿಸಿ – ಅವರು ನಿಮ್ಮ ಮೇಲೆ ಒತ್ತಡ ಹಾಕಬಹುದು.

ಕನ್ಯಾ ದಿನದ ಆರಂಭವು ಚೆನ್ನಾಗಿ ಅಗಿದರು, ಸಂಜೆಯ ಸಮಯದಲ್ಲಿ ಯಾವುದೇ ಕಾರಣದಿಂದ ನಿಮ್ಮ ಹಣ ಖರ್ಚಾಗಬಹುದು. ಇದರಿಂದ ನೀವು ತೊಂದರೆಗೊಳಗಾಗಬಹುದು.

ತುಲಾ ಎಲ್ಲಾ ಬದ್ಧತೆಗಳು ಮತ್ತು ಆರ್ಥಿಕ ವ್ಯವಹಾರಗಳನ್ನು ಎಚ್ಚರಿಕೆಯಿಂದ ನಿರ್ವಹಿಸಬೇಕು. ಜನರು ಮತ್ತು ಅವರ ಉದ್ದೇಶಗಳ ಬಗ್ಗೆ ಅವಸರದ ತೀರ್ಮಾನ ಕೈಗೊಳ್ಳಬೇಡಿ – ಅವರು ಒತ್ತಡದಲ್ಲಿರಬಹುದು.

ವೃಶ್ಚಿಕ ಇಂದು ಕೆಲಸದಲ್ಲಿ ಎಲ್ಲರೂ ಪ್ರಾಮಾಣಿಕವಾಗಿ ನಿಮ್ಮನ್ನು ಆಲಿಸುತ್ತಾರೆ. ದಿನ ಉತ್ತಮವಾಗಿದೆ, ಇಂದು ನಿಮಗಾಗಿ ಸಮಯವನ್ನು ತೆಗೆದುಕೊಳ್ಳಿ ಮತ್ತು ನಿಮ್ಮ ನ್ಯೂನತೆಗಳು ಮತ್ತು ಸಾಮರ್ಥ್ಯಗಳ ಬಗ್ಗೆ ಗಮನ ಹರಿಸಿ.

ಧನಸ್ಸು ಸಂಶಯಾಸ್ಪದ ಹಣಕಾಸು ವ್ಯವಹಾರಗಳಲ್ಲಿ ಸಿಲುಕಿಕೊಳ್ಳದಂತೆ ಎಚ್ಚರಿಕೆ ವಹಿಸಿ. ನಿಮ್ಮ ಜೊತೆಗಿರುವ ಯಾರಾದರೂ ನಿಮ್ಮ ಇತ್ತೀಚಿನ ಕ್ರಮಗಳಿಂದ ಕಿರಿಕಿರಿಗಳ್ಳಬಹುದು.

ಮಕರ ಖಿನ್ನತೆಯನ್ನು ಹೊಡೆದೋಡಿಸಿ. ಇದು ನಿಮ್ಮನ್ನು ಆವರಿಸಿಕೊಳ್ಳುತ್ತಿದೆ ಮತ್ತು ನಿಮ್ಮ ಪ್ರಗತಿಗೆ ಅಡ್ಡಿಪಡಿಸುತ್ತಿದೆ. ಆಲ್ಕೋಹಾಲ್ ಸಿಗರೇಟ್ ಮುಂತಾದವುಗಳಿಗೆ ಹಣವನ್ನು ಖರ್ಚು ಮಾಡಬಾರದು.

ಕುಂಭ ನೀವು ದೈಹಿಕ ಅನಾರೋಗ್ಯ ದಿಂದ ಚೇತರಿಸಿಕೊಳ್ಳುವ ಸಾಧ್ಯತೆಗಳು ಹೆಚ್ಚಿದ್ದು ಇದು ನಿಮ್ಮನ್ನು ಕ್ರೀಡಾ ಸ್ಪರ್ಧೆಗಳಲ್ಲಿ ಭಾಗವಹಿಸಲು ಸಕ್ರಿಯಗೊಳಿಸುತ್ತದೆ. ದೀರ್ಘ ಕಾಲ ಬಾಕಿಯಿದ್ದ ಬಾಕಿಗಳು ಕೊನೆಗೂ ದೊರಕುತ್ತವೆ.

ಮೀನ ಸಂತೋಷದ ದಿನಕ್ಕಾಗಿ ಮಾನಸಿಕ ಒತ್ತಡವನ್ನು ತಪ್ಪಿಸಿ. ಇಂದು ಯಾವುದೇ ವಿರುದ್ಧ ಲಿಂಗದ ಸಹಾಯದಿಂದ ನೀವು ವ್ಯಾಪರ ಅಥವಾ ಉದ್ಯೋಗದಲ್ಲಿ ಆರ್ಥಿಕ ಲಾಭವನ್ನು ಪಡೆಯುವ ಸಾಧ್ಯತೆ ಇದೆ.

ಉತ್ತರ ಕರ್ನಾಟಕ ಕಡೆಗಣನೆ: ವಿಧಾನಸಭೆಯಲ್ಲಿ ಯತ್ನಾಳ್ ಕೆಂಡ

ಉತ್ತರ ಕರ್ನಾಟಕ ಭಾಗಕ್ಕೆ ಅಭಿವೃದ್ಧಿಯಲ್ಲಷ್ಟೇ ಅಲ್ಲದೆ ರಾಜಕೀಯವಾಗಿಯೂ ತೀವ್ರ ಸ್ವರೂಪದ ಅನ್ಯಾಯವಾಗಿದೆ

• ಉದಯವಾಹಿನಿ, ಬೆಳಗಾವಿ

ಉತ್ತರ ಕರ್ನಾಟಕ ಭಾಗಕ್ಕೆ ಅಭಿವೃದ್ಧಿಯಲ್ಲಷ್ಟೇ ಅಲ್ಲದೆ ರಾಜಕೀಯವಾಗಿಯೂ ತೀವ್ರ ಸ್ವರೂಪದ ಅನ್ಯಾಯವಾಗಿದೆ ಎಂದು ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಆರೋಪಿಸಿದ್ದಾರೆ. ಸುವರ್ಣಸೌಧದಲ್ಲಿಂದು ನಡೆಯುತ್ತಿರುವ ಚಳಿಗಾಲದ ಅಧಿವೇಶನದಲ್ಲಿ ಉತ್ತರ ಕರ್ನಾಟಕ ಭಾಗದ ಅಭಿವೃದ್ಧಿ ಕುರಿತ ಚರ್ಚೆಯಲ್ಲಿ ಭಾಗವಹಿಸಿದ್ದ ಅವರು, ದಕ್ಷಿಣ ಕರ್ನಾಟಕ ಜಿಲ್ಲೆಯಲ್ಲಿ 17 ಜಿಲ್ಲೆಗಳಿದ್ದರೆ, ಉತ್ತರ ಕರ್ನಾಟಕ ಭಾಗದಲ್ಲಿ 14 ಜಿಲ್ಲೆಗಳಿವೆ. ಇನ್ನೂ ನಾಲ್ಕೈದು ಜಿಲ್ಲೆಗಳು ಹೆಚ್ಚುವರಿಯಾಗಿ ವಿಂಗಡಣೆಯಾಗಬೇಕಿದೆ ಎಂದರು.

ಉ.ಕರ್ನಾಟಕ ಭಾಗದ ಅಭಿವೃದ್ಧಿ ಕುರಿತ ಚರ್ಚೆ

ನಮ್ಮ ಭಾಗದಲ್ಲಿ 96 ಮಂದಿ ಶಾಸಕರಿದ್ದರೆ ದಕ್ಷಿಣ ಕರ್ನಾಟಕದಲ್ಲಿ 121 ಶಾಸಕರಿದ್ದಾರೆ. ಸಂಸದರ ಪೈಕಿ ನಮಲ್ಲಿ 12 ಮಂದಿ ಇದ್ದರೆ ದಕ್ಷಿಣ ಕರ್ನಾಟಕದಲ್ಲಿ 16 ಮಂದಿ ಇದ್ದಾರೆ. ವಿಧಾನಪರಿಷತ್ ಸದಸ್ಯರ ಪೈಕಿ ದಕ್ಷಿಣ ಕರ್ನಾಟಕದಲ್ಲಿ 53 ಮಂದಿ ಇದ್ದರೆ, ಉತ್ತರ ಕರ್ನಾಟಕದಲ್ಲಿ 22 ಮಂದಿ ಇದ್ದಾರೆ. ರಾಜ್ಯಸಭಾ ಸದಸ್ಯರ ಪೈಕಿ 16 ಮಂದಿ ದಕ್ಷಿಣ ಕರ್ನಾಟಕ ಭಾಗದವರು ಉತ್ತರ ಕರ್ನಾಟಕದಲ್ಲಿ ಇಬ್ಬರು ಮಾತ್ರ ಇದ್ದಾರೆ. ಮತ ಹಾಕುವವರು ನಾವು, ಅಧಿಕಾರ ಅನುಭವಿಸುವವರು ಆ ಭಾಗದ ಜನ ಎಂಬಂತಾಗಿದೆ.

ಕಂದಾಯ ಗ್ರಾಮಗಳಲ್ಲೂ ಅನ್ಯಾಯವಾಗಿದೆ. 21,160 ಗ್ರಾಮಗಳಿದ್ದರೆ, ಉತ್ತರ ಕರ್ನಾಟಕದಲ್ಲಿ 9,571 ಗ್ರಾಮಗಳಿವೆ. ಗ್ರಾಮಪಂಚಾಯಿತಿಗಳಲ್ಲಿ 3,364 ಗ್ರಾಮಗಳಿದ್ದರೆ, ಉತ್ತರಕರ್ನಾಟಕ ಭಾಗದಲ್ಲಿ 2,792 ಗ್ರಾಮಪಂಚಾಯಿತಿಗಳಿವೆ. ಪ್ರಾಥಮಿಕ, ಪ್ರೌಢಶಾಲೆ, ಪದವಿಪೂರ್ವ ಹಾಗೂ ಪದವಿ ಕಾಲೇಜುಗಳಲ್ಲಿ ಅಜಗಜಾಂತರ ವ್ಯತ್ಯಾಸಗಳಿವೆ. ತಾಂತ್ರಿಕ ಶಿಕ್ಷಣ ಸಂಸ್ಥೆಗಳು, ಕಾನೂನು, ವೈದ್ಯಕೀಯ ಆಸ್ಪತ್ರೆಗಳು ಎಲ್ಲದರಲ್ಲೂ ದಕ್ಷಿಣ ಕರ್ನಾಟಕವೇ ಮೇಲುಗೈ ಸಾಧಿಸಿದೆ ಎಂದು ವಿವರಿಸಿದರು.

ನಾವು ದಕ್ಷಿಣ ಕರ್ನಾಟಕದ ವಿಚಾರವಾಗಿ ಅಸಹನೆ ವ್ಯಕ್ತಪಡಿಸುತ್ತಿಲ್ಲ. ಆದರೆ ಸಮಾನ ಅಭಿವೃದ್ಧಿಯಾಗಬೇಕು. ಗ್ಯಾರಂಟಿ ನೀಡುವ ಬದಲಾಗಿ ನೀರಾವರಿ ಕಲ್ಪಿಸಿ ಎಲ್ಲಾ ಕೈಗಳಿಗೆ ಉದ್ಯೋಗ ಕೊಡಿ. ಸಚಿವ ಸಂಪುಟ ಸಭೆಯಲ್ಲಿರುವ ಸಚಿವರಲ್ಲೂ ಮೂರ್ನಾಲ್ಕು ಮಂದಿಯಷ್ಟೇ ಚರ್ಚೆಯಲ್ಲಿ ತೊಡಗಿಸಿಕೊಳ್ಳುತಾರೆ. ಉಳಿದವರು ಮೌನಿಗಳು. ಯತ್ನಾಳ್ ಮಾತನಾಡುತ್ತಿದ್ದ ವೇಳೆ ಆಡಳಿತ ಪಕ್ಷದ ಶಾಸಕ ಕೋ.ನ.ರೆಡ್ಡಿಯವರು ಯತ್ನಾಳ್ ಸಚಿವ ಜಮೀರ್ ಅವರನ್ನು ಭೇಟಿ ಮಾಡಿರುವ ಕುರಿತು ಲೇವಡಿ ಮಾಡಿದರು. ಆಗ ನಾನು ಯಾವುದೇ ಫ್ಲಾಟ್ ಮಂಜೂರು ಮಾಡಿಸಿಕೊಳ್ಳಲು ಹೋಗಿರಲಿಲ್ಲ ಎಂದು ಯತ್ನಾಳ್ ತಿರುಗೇಟು ನೀಡಿದರು.

ಉದಯವಾಹಿನಿ ಚಿತ್ರ

ನಾವು ಮುಗ್ಧರು ಎಂದು ಯತ್ನಾಳ್ ಹೇಳಿದಾಗ ನಿಮನ್ನು ಮುಗ್ಧರು ಎಂದು ಹೇಳಲು ಸಾಧ್ಯವೇ? ಎಂದು ಸುನಿಲ್‌ಕುಮಾರ್ ಛೇಡಿಸಿದರು.

ನಾವು ಕರಾವಳಿ ಭಾಗದವರಂತೆ ಬುದ್ಧಿವಂತರಲ್ಲ ಎಂದು ಯತ್ನಾಳ್ ಮತ್ತೊಮೆ ಹೇಳಿದಾಗ, ಬುದ್ಧಿವಂತರು ಬುದ್ಧಿವಂತರು ಎಂದು ಹೇಳಿ ದಡ್ಡರನ್ನಾಗಿ ಮಾಡಲಾಗುತ್ತಿದೆ ಎಂದು ಸಭಾಧ್ಯಕ್ಷರು ಹಾಸ್ಯ ಚಟಾಕಿ ಹಾರಿಸಿದರು.

ಅಭಿವೃದ್ಧಿಯ ಬಗ್ಗೆ ಮುಖ್ಯಮಂತ್ರಿಯಾದವರಿಗೆ ಸ್ಪಷ್ಟ ಕಲ್ಪನೆ ಇರಬೇಕು. ನಾನು ಕೇಂದ್ರದಲ್ಲಿ ಸಚಿವರಾಗಿ ವಿವಿಧ ಹುದ್ದೆಗಳನ್ನು ಅಲಂಕರಿಸಿದ್ದೇನೆ ಎನ್ನುತ್ತಿದ್ದಂತೆ ಎಂ.ಬಿ.ಪಾಟೀಲ್ ಮಧ್ಯಪ್ರವೇಶಿಸಿದರು.

ನಾನು ರಾಜ್ಯ ಸಚಿವನಿಗಿಂತಲೂ ಹೆಚ್ಚು ಪ್ರಭಾವಿ ಇದ್ದೇನೆ. ಮಂತ್ರಿಯಾಗಿ ನಿಮ ರೀತಿ ಅಸಹಾಯಕನಾಗಿರುವುದಿಲ್ಲ ಎಂದರು.

ಶಿಕ್ಷಣ, ಕೈಗಾರಿಕೆ, ನೀರಾವರಿ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲೂ ಹಿಂದುಳಿದ ಉತ್ತರ ಕರ್ನಾಟಕ ಭಾಗಕ್ಕೆ ಹೆಚ್ಚಿನ ಒತ್ತು ನೀಡಬೇಕು. ನಂಜುಂಡಪ್ಪ ವರದಿ ಹಿಂದುಳಿದ ಪ್ರದೇಶಗಳನ್ನು ಸ್ಪಷ್ಟವಾಗಿ ಗುರುತಿಸಿತ್ತು ಎಂದು ಹೇಳಿದರು.

> ಸುವರ್ಣ ಸೌಧವನ್ನು ಕೋಟ್ಯಂತರ ರೂ. ಖರ್ಚು ಮಾಡಿ ಕಟ್ಟಿಸಲಾಗಿದೆ. ಯಾವ ಕಚೇರಿಗಳೂ ಇಲ್ಲಿಗೆ ಸ್ಥಳಾಂತರಗೊಂಡಿಲ್ಲ. ಕೃಷ್ಣಾ ಜಲನಿಗಮದ ವ್ಯವಸ್ಥಾಪಕ ನಿರ್ದೇಶಕರು ಇಲ್ಲಿಗೆ ಪ್ರವಾಸಕ್ಕೆ ಬಂದಂತೆ ಬಂದು ಹೋಗುತ್ತಾರೆ ಎಂದು ಆರೋಪಿಸಿದರು. ಉತ್ತರ ಕರ್ನಾಟಕ ಭಾಗಕ್ಕೆ ತನ್ನದೇ ಆದ ವೈಭೋಗ ಇದೆ. ಕರಾವಳಿ ಭಾಗಕ್ಕೆ ಹೆಚ್ಚು ಆದಾಯ ಇದೆ. ವಿಜಯಪುರ ಸೇರಿದಂತೆ ಉತ್ತರ ಕರ್ನಾಟಕದ ಭಾಗದಲ್ಲಿ ಬರಕ್ಕೆ ತುತ್ತಾಗಿ ತುತ್ತು ಅನ್ನಕ್ಕೂ ಪರದಾಡುವಂತಹ ಪರಿಸ್ಥಿತಿಯಲ್ಲಿರುವ ಕುಟುಂಬಗಳಿವೆ ಎಂದರು –ಬಸನಗೌಡ ಪಾಟೀಲ್ ಯತ್ನಾಳ್

ಮಹಾರಾಜರು ಆಡಳಿತ ನಡೆಸಿರುವ ಭಾಗ

ರಾಷ್ಟ್ರಕೂಟರು, ಚಾಲುಕ್ಯರು, ಹೊಯ್ಸಳರು, ಅಮೋಘವರ್ಷ ಸೇರಿದಂತೆ ರಾಜ, ಮಹಾರಾಜರು ಆಡಳಿತ ನಡೆಸಿರುವ ಉತ್ತರ ಕರ್ನಾಟಕ ಭಾಗದ ಬಹುತೇಕ ರಾಜ-ಮಹಾರಾಜರು ಸ್ವಾತಂತ್ರ್ಯಕ್ಕಾಗಿ ಬ್ರಿಟಿಷರ ವಿರುದ್ಧ ಹೋರಾಟ ಮಾಡಿದ್ದಾರೆ. ಮಹಾರಾಷ್ಟ್ರದಲ್ಲಿ ಶಿವಾಜಿ ಮಹಾರಾಜರನ್ನು ತೋರಿಸುವಂತೆ ಕರ್ನಾಟಕದಲ್ಲೂ ಇಮಡಿ ಪುಲಿಕೇಶಿ ಅವರನ್ನು ಗೌರವಿಸಬೇಕು ಹಾಗೂ ರಾಜ್ಯದ ರಾಯಭಾರಿ ಎಂದು ಘೋಷಿಸಬೇಕು ಎಂದರು.

ಉಚಿತ ಆಯುಷ್ ಆರೋಗ್ಯ ಚಿಕಿತ್ಸಾ ಶಿಬಿರ

• ಉದಯವಾಹಿನಿ, ಚಿತ್ರದುರ್ಗ

ಸಇಂದಿನ ಒತ್ತಡದ ಜೀವನಶೈಲಿಯಲ್ಲಿ ಆಯುಷ್ ಚಿಕಿತ್ಸಾ ಪದ್ಧತಿಗಳು ಎಂದಿಗಿಂತ ಹೆಚ್ಚು ಪ್ರಾಮುಖ್ಯತೆ ಪಡೆದುಕೊಂಡಿದೆ ಎಂದು ಜಿಲ್ಲಾ ನ್ಯಾಯಾಧೀಶರಾದ ರೋಣ ವಾಸುದೇವ್ ಹೇಳಿದರು.

ನಗರದ ಜಿಲ್ಲಾ ವಕೀಲರ ಭವನದಲ್ಲಿ ಬುಧವಾರ ಜಿಲ್ಲಾ ಆಯುಷ್ ಇಲಾಖೆ, ಜಿಲ್ಲಾ ವಕೀಲರ ಸಂಘ ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಉಚಿತ ಆಯುಷ್ ಆರೋಗ್ಯ ಚಿಕಿತ್ಸಾ ಶಿಬಿರಯನ್ನು ಔಷಧಿ ಸಸ್ಯಕ್ಕೆ ನೀರೆರೆಯುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಆಯುಷ್ ಇಲಾಖೆಯ ಉಚಿತ ಆರೋಗ್ಯ ಚಿಕಿತ್ಸಾ ಶಿಬಿರದ ಪೂರ್ಣ ಪ್ರಯೋಜನವನ್ನು ನ್ಯಾಯಾಧೀಶರು, ನ್ಯಾಯಾಂಗ ಇಲಾಖೆ ಸಿಬ್ಬಂದಿ ಹಾಗೂ ವಕೀಲರು ಪಡೆದುಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಆಯುಷ್ ಅಧಿಕಾರಿ ಡಾ.ಚಂದ್ರಕಾಂತ್ ನಾಗಸಮುದ್ರ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ತಿಪ್ಪೇಸ್ವಾಮಿ, ಕಾರ್ಯದರ್ಶಿ ಗಂಗಾಧರ್ ಸೇರಿದಂತೆ ನ್ಯಾಯಾಧೀಶರು, ನ್ಯಾಯಾಂಗ ಇಲಾಖೆ ಸಿಬ್ಬಂದಿ, ವಕೀಲರು, ಸಾರ್ವಜನಿಕರು ಇದ್ದರು. ಮಹಾಲಕ್ಷ್ಮೀ ಪ್ರಾರ್ಥಿಸಿದರು. ಡಾ.ನಾಗರಾಜ್ ನಾಯಕ್ ವಂದಿಸಿದರು. ಈ ಸಂಧರ್ಭದಲ್ಲಿ ಜಿಲ್ಲಾ ಆಯುಷ್ ಇಲಾಖೆಯ ಎಲ್ಲಾ ಆಯುಷ್ ಆಡಳಿತ ವೈದ್ಯಧಿಕಾರಿಗಳು ಹಾಜರಿದ್ದರು.

ಉದಯವಾಹಿನಿ ಚಿತ್ರ

> ಉಚಿತ ಆಯುಷ್ ಶಿಬಿರ ಎರಡು ಹಂತಗಳಲ್ಲಿ ನಡೆಯುತ್ತಿದ್ದು, ಮೊದಲನೇ ಹಂತದಲ್ಲಿ ಇಂದು ಆರೋಗ್ಯ ತಪಾಸಣೆ ಮಾಡಿ ಎಲ್ಲಾ ಕಾಯಿಲೆಗಳಿಗೂ ಉಚಿತ ತಪಾಸಣೆ ಹಾಗೂ ಔಷಧಿಯನ್ನು ಆಯುಷ್ ತಜ್ಞರು ನೀಡುತ್ತಾರೆ. ಒಂದು ತಿಂಗಳ ನಂತರ ಇದರ ಮುಂದುವರೆದ ಶಿಬಿರವನ್ನು ಹಮ್ಮಿಕೊಳ್ಳಲಾಗುತ್ತದೆ –ಟಿ.ಶಿವಕುಮಾರ್, ಆಯುಷ್ ವೈದ್ಯಾಧಿಕಾರಿ

ಪೌರ ಕಾರ್ಮಿಕರಿಗೆ ವಸತಿಗೃಹ ನಿರ್ಮಾಣಕ್ಕಾಗಿ ಭೂಮಿ ಮಂಜೂರು

• ಉದಯವಾಹಿನಿ, ಅರಸೀಕೆರೆ

ಅರಸೀಕೆರೆ ನಗರದ ನಗರ ಸಭೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪೌರಕಾರ್ಮಿಕರಿಗೆ ವಸತಿಗೃಹ ನಿರ್ಮಾಣದ ಉದ್ದೇಶಕ್ಕಾಗಿ ಹಾಸನ ಜಿಲ್ಲೆಯ ಜಿಲ್ಲಾಧಿಕಾರಿಗಳಾದ ಸಿ ಸತ್ಯಭಾಮರವರು ಎರಡು ಎಕರೆ ಜಾಗವನ್ನು ಕಾಯ್ದಿರಿಸಲಾಗಿದೆ ಎಂದು ಆದೇಶ ಮಾಡಿದ್ದಾರೆ ಇದಕ್ಕಾಗಿ ಜಿಲ್ಲಾಧಿಕಾರಿಗಳಾದ ಸತ್ಯಭಾಮರವರಿಗೆ ಅರಸೀಕೆರೆ ನಗರಸಭೆಯ. ಎಲ್ಲಾ ಸಿಬ್ಬಂದಿಗಳು ಪೌರಕಾರ್ಮಿಕರ ಪರವಾಗಿ ಅಭಿನಂದನೆ ಸಲ್ಲಿಸುತ್ತೇವೆಂದು ಅರಸೀಕೆರೆ ನಗರಸಭೆ ಅಧ್ಯಕ್ಷರಾದ ಎಂ ಶಮಿವುಲ್ಲಾ ಹೇಳಿದರು.

ನಗರಸಭೆ ಆವರಣದಲ್ಲಿ ಪೌರಕಾರ್ಮಿಕರನ್ನು ಉದ್ದೇಶಿಸಿ ಮಾತನಾಡಿದ ಅವರು ಈ ಹಿಂದೆ ಪೌರಕಾರ್ಮಿಕ ವಸತಿಗೃಹ ನಿರ್ಮಾಣಕ್ಕಾಗಿ ಜಮೀನು ನೀಡಿದ್ದು ಅದು ಕಲ್ಲು ಬಂಡೆಗಳಿಂದ ಕೂಡಿದ್ದು ಜನವಸತಿಗೆ ವ್ಯವಸ್ಥಿತವಾಗಿರಲಿಲ್ಲ. ಈ ಉದ್ದೇಶದಿಂದ ಅರಸೀಕೆರೆಯ ತಹಶೀಲ್ದಾರ್ ಅವರ ಮುಖಾಂತರ ವ್ಯವಸ್ಥಿತ ಜಾಗವನ್ನು ಗುರುತಿಸಿ ಹಾಸನ ಉಪ ವಿಭಾಗಾಧಿಕಾರಿಗಳ ಮುಖಾಂತರ. ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಲಾಗಿತ್ತು ಮನವಿಗೆ ಸ್ಪಂದಿಸಿದ ಜಿಲ್ಲಾಧಿಕಾರಿಗಳು ಪೌರಕಾರ್ಮಿಕ ವಸತಿ ಗೃಹ ನಿರ್ಮಾಣದ ಉದ್ದೇಶಕ್ಕಾಗಿ ಎರಡು ಎಕರೆ ಜಮೀನನ್ನು ಗೃಹ ಭಾಗ್ಯ ಯೋಜನೆ ಅಡಿಯಲ್ಲಿ ಮಂಜೂರು ಮಾಡಿರುವುದು ನಮಗೆ ಸಂತಸವಾಗಿದೆ ಇದಕ್ಕಾಗಿ ಗೃಹ ಮಂಡಳಿ ಅಧ್ಯಕ್ಷರು ಹಾಗೂ ಅರಸೀಕೆರೆ ಕ್ಷೇತ್ರದ ಶಾಸಕರಾದ ಕೆಎಂ ಶಿವಲಿಂಗೇಗೌಡರಿಗೆ ಹಾಗೂ ಹಾಸನ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ ಅರಸೀಕೆರೆ ತಹಶೀಲ್ದಾರ್ ಸಂತೋಷ್ ಕುಮಾರ್‌ರವರಿಗೆ. ಮತ್ತು ಇದಕ್ಕಾಗಿ ಶ್ರಮಿಸಿದ ಕಂದಾಯ ಇಲಾಖೆಯ ಎಲ್ಲಾ ಅಧಿಕಾರಿಗಳಿಗೆ ನಗರಸಭೆ ಪೌರಕಾರ್ಮಿಕರ ವತಿಯಿಂದ ನನ್ನ ವೈಯಕ್ತಿಕವಾಗಿಯೂ ಸಹ ಅಭಿನಂದಿಸುವುದಾಗಿ ನಗರಸಭಾ ಅಧ್ಯಕ್ಷರಾದ ಎಂ ಶಮಿವುಲ್ಲಾ ಹೇಳಿದರು.

ಉಪಾಧ್ಯಕ್ಷರಾದ ಮನೋಹರ್ ನಗರ ಸಭಾ ಸದಸ್ಯರುಗಳಾದ ಇಮ್ರಾನ್ ಖಾನ್ ದರ್ಶನ್ ಮತ್ತು ನಗರಸಭೆ ಆಯುಕ್ತರಾದ ಕೃಷ್ಣಮೂರ್ತಿ ನಗರಸಭೆಯ ಅಧಿಕಾರಿಗಳು ಮತ್ತು ನಗರಸಭೆಯ ಸಮಸ್ತ ಪೌರ ಕಾರ್ಮಿಕರು ಉಪಸ್ಥಿತರಿದ್ದರು.

ಉದಯವಾಹಿನಿ ಚಿತ್ರ

ಪೌರಕಾರ್ಮಿಕರ ಪರವಾಗಿ ಅಭಿನಂದನೆ

ವಾಲ್ಮೀಕಿ ಸದಸ್ಯತ್ವ ನೊಂದಣಿ ಅಭಿಯಾನ ತಾತ್ಕಾಲಿಕ ಮುಂದೂಡಿಕೆ

• ಉದಯವಾಹಿನಿ, ಸಿಂಧನೂರು

ತಾಲ್ಲೂಕು ವಾಲ್ಮೀಕಿ ಸಮುದಾಯದ ಸದಸ್ಯತ್ವ ನೊಂದಣಿ ಅಭಿಯಾನವನ್ನು ತಾತ್ಕಾಲಿಕವಾಗಿ ಮುಂದೂಡಲಾಗಿದೆ ಎಂದು ತಾಲ್ಲೂಕು ಶ್ರೀ ವಾಲ್ಮೀಕಿ ನಾಯಕ ಸಂಘದ ತಾಲ್ಲೂಕು ಅಧ್ಯಕ್ಷರಾದ ಆರ್.ತಿಮ್ಮಯ್ಯ ನಾಯಕ ಪತ್ರಿಕಾಗೋಷ್ಠಿ ತಿಳಿಸಿದರು. ಈ ಕುರಿತು ಮಾತನಾಡಿದವರು ತಾಲ್ಲೂಕಿನ ವಾಲ್ಮೀಕಿ ಸಮಾಜದ ಗ್ರಾಮೀಣ ಪ್ರದೇಶದ ಹಲವಾರು ಗ್ರಾಮಗಳಿಂದ ವಾಲ್ಮೀಕಿ ಸಮಾಜದ ಹಿರಿಯರಿಂದ ಹಾಗೂ ಯುವ ಮಿತ್ರರಿಂದ ಸಂಘದ ಅಧ್ಯಕ್ಷರು ಸರ್ವ ಪದಾಧಿಕಾರಿಗಳಿಗೆ ದೂರವಾಣಿ ಕರೆ ಮಾಡುವದರ ಮೂಲಕ ಹಾಗೂ ಮೌಖಿಕವಾಗಿ ಸದಸ್ಯತ್ವ ನೊಂದಣಿ ಅಭಿಯಾನದ ಕುರಿತು ಆಕ್ಷೇಪಣೆ ವ್ಯಕ್ತಪಡಿಸಿದ್ದಾರೆ.

ತಾಲ್ಲೂಕಿನ ಎಲ್ಲಾ ಗ್ರಾಮಗಳ ಹಿರಿಯರಿಗೆ ಯುವಕರಿಗೆ ವಿಷಯ ತಿಳಿಸದೇ ಸಂಪೂರ್ಣವಾಗಿ ಚರ್ಚೆಮಾಡದೇ ಕೆಲವೇ ಹಿರಿಯರು ಕೂಡಿ ನಿರ್ಧಾರ ತೆಗೆದುಕೊಂಡಿದ್ದು ಸಮಂಜಸವಾದ ತೀರ್ಮಾನವಲ್ಲ ಎಂದು ಆಕ್ಷೇಪಣೆ ವ್ಯಕ್ತಪಡಿಸಿದ್ದಾರೆ. ಆದಕಾರಣ ಸದಸ್ಯತ್ವ ನೊಂದಣಿ ಅಭಿಯಾನ ವನ್ನು ತಾತ್ಕಾಲಿಕವಾಗಿ ಮುಂದೂಡಲಾಗಿದೆ.

ಉದಯವಾಹಿನಿ ಚಿತ್ರ

ನೊಂದಣಿ ಅಭಿಯಾನದ ಕುರಿತು ಆಕ್ಷೇಪಣೆ

ತಾಲ್ಲೂಕಿನ ವಾಲ್ಮೀಕಿ ಸಮಾಜದ ಎಲ್ಲರಿಗೂ ತಿಳಿಸಿ ಸಭೆ ಮಾಡಿ ಎಲ್ಲರ ಅಭಿಪ್ರಾಯ/ ಸಲಹೆ ತೆಗೆದುಕೊಂಡು ಮುಂದಿನ ದಿನಮಾನಗಳಲ್ಲಿ ತಾಲ್ಲೂಕು ಬಾಡಿ ವತಿಯಿಂದ ಸದಸ್ಯತ್ವ ನೊಂದಣಿ ಅಭಿಯಾನ ಮಾಡಲಾಗುವುದು ಎಂದು ಹೇಳಿಸಿದರು.

ಈ ಸಂದರ್ಭದಲ

ಸಂವಿಧಾನದ ಬಲದಿಂದಲೇ ನಾನು ಮುಖ್ಯಮಂತ್ರಿ, ಪ್ರಧಾನಿಯಾದೆ

ಅತ್ಯಂತ ಬಡ ರೈತನ ಮಗನಾದ ನನಗೆ ಈ ದೇಶದ ಸಂವಿಧಾನ ಎಲ್ಲವನ್ನೂ ಕೊಟ್ಟಿದೆ: ಹೆಚ್.ಡಿ.ದೇವೇಗೌಡ

ನವದೆಹಲಿ: ಅತ್ಯಂತ ಬಡ ರೈತನ ಮಗನಾದ ನನಗೆ ಈ ದೇಶದ ಸಂವಿಧಾನ ಎಲ್ಲವನ್ನೂ ಕೊಟ್ಟಿದೆ ಎಂದು ರಾಜ್ಯಸಭೆಯಲ್ಲಿನ್ನೆ ಭಾವಪೂರ್ಣವಾಗಿ ಮಾತನಾಡಿದ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ಸಂವಿಧಾನದ ಬಲದಿಂದಲೇ ನಾನು ಮುಖ್ಯಮಂತ್ರಿ, ಪ್ರಧಾನಮಂತ್ರಿ ಆಗುವಂತೆ ಆಯಿತು ಎಂದರು.

ಸಂವಿಧಾನವನ್ನು ಅಳವಡಿಸಿಕೊಂಡ 75 ವರ್ಷಗಳ ಸಂದರ್ಭದಲ್ಲಿ ರಾಜ್ಯಸಭೆಯಲ್ಲಿ ಭಾಷಣ ಮಾಡಿದ ಅವರು, ಸಂವಿಧಾನ ನನಗೆ ಎಲ್ಲವನ್ನೂ ಕೊಟ್ಟಿದೆ. ಒಬ್ಬ ಬಡ ರೈತನ ಮಗನಾಗಿ, ದೂರದ ಹಳ್ಳಿಯಿಂದ ಮುಖ್ಯಮಂತ್ರಿ ಮತ್ತು ಪ್ರಧಾನಿಯಾಗಲು ಸಾಧ್ಯವಾಗಿದ್ದರೆ ಅದು ನಮ ಸಂವಿಧಾನದಿಂದ ಮಾತ್ರ ಎಂದರು.

ಕಳೆದ 75 ವರ್ಷಗಳ ಅವಧಿಯಲ್ಲಿ ಸಂವಿಧಾನದ ಚೌಕಟ್ಟಿನಲ್ಲಿ ಭಾರತದ ಬೆಳೆದ ರೀತಿ, ಮಾಡಿದ ಸಾಧನೆಗಳ ಬಗ್ಗೆ ಅನೇಕ ಮಹತ್ವಪೂರ್ಣ ಅಂಶಗಳನ್ನು ಸದನದಲ್ಲಿ ಹಂಚಿಕೊಂಡರು. ಆಧುನಿಕ ಭಾರತವನ್ನು ರೂಪಿಸುವಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಅವರ ದೂರದೃಷ್ಟಿಯ ಸಂವಿಧಾನ ಅಸಾಧಾರಣ ಕೊಡುಗೆ ನೀಡಿದೆ. ಬಾಬಾ ಸಾಹೇಬ್ ಅವರ ನೇತೃತ್ವದಲ್ಲಿ ರಚನೆಯಾದ ನಮ ಸಂವಿಧಾನವು ಅನೇಕ ಒತ್ತಡಗಳು ಮತ್ತು ನಮ ಕಾಲದ ರಾಜಕೀಯವನ್ನು ತಡೆದುಕೊಂಡು ನಿಂತಿದೆ ಎಂದು ಅವರು ಹೇಳಿದರು.

> ನನ್ನನ್ನೂ ಜೈಲಿಗೆ ಕಳುಹಿಸಲಾಯಿತು. ನನ್ನ ಸೆರೆವಾಸವು ನನ್ನ ತಂದೆಯ ಮೇಲೆ ನಕಾರಾತಕ ಪರಿಣಾಮ ಬೀರಿ ಕುಟುಂಬದ ಮೇಲೆ ಮಾನಸಿಕ ಒತ್ತಡ ಉಂಟು ಮಾಡಿತು. ಕೊನೆಗೆ ಆ ನೋವಿನಲ್ಲಿಯೇ ತಂದೆಯವರು ವಿಧಿವಶರಾದರು. ಪ್ರಜಾಪ್ರಭುತ್ವದಲ್ಲಿ ನಂಬಿಕೆ ಇಟ್ಟಿರುವ ಮತ್ತು ತಮ್ಮ ರಾಜಕೀಯ ನಂಬಿಕೆಗಳ ಜತೆ ನಿಂತಿದ್ದ ಅನೇಕರಿಗೆ ಇದು ಆಘಾತಕಾರಿ ಸಮಯವಾಗಿತ್ತು -ಹೆಚ್.ಡಿ.ದೇವೇಗೌಡ

ಸಂವಿಧಾನದ ಮೇಲಿನ ಚರ್ಚೆಯ ಸಂದರ್ಭದಲ್ಲಿ ತುರ್ತು ಪರಿಸ್ಥಿತಿ ಸಂದರ್ಭವನ್ನು ನೆನಪು ಮಾಡಿಕೊಂಡ ಮಾಜಿ ಪ್ರಧಾನಿಗಳು, ತುರ್ತು ಪರಿಸ್ಥಿತಿಯ ಕಾಲ ಕರಾಳ ಅವಧಿ. ಐವತ್ತು ವರ್ಷಗಳ ಹಿಂದೆ ತುರ್ತು ಪರಿಸ್ಥಿತಿಯನ್ನು ಘೋಷಿಸಿದಾಗ, ಈ ರಾಷ್ಟ್ರದ ಬಹುತೇಕ ರಾಜಕೀಯ ವಿರೋಧಿಗಳೆಲ್ಲರೂ ಜೈಲು ಪಾಲಾದರು. ಸರ್ಕಾರದ ವಿರುದ್ಧ ಟೀಕೆ ಮಾಡುತ್ತಿದ್ದ ಎಲ್ಲರನ್ನೂ ಜೈಲಿಗೆ ಕಳುಹಿಸಲಾಯಿತು ಎಂದು ಅವರು ಹೇಳಿದರು.

ತುರ್ತು ಪರಿಸ್ಥಿತಿ ಅವಧಿಯಲ್ಲಿ ಭಾರತ ಅನೇಕ ಪಾಠಗಳನ್ನು ಕಳಿತುಕೊಂಡಿತು. ಆ ಸಮಯದಲ್ಲಿಯೇ ರಾಷ್ಟ್ರವು ಸಂವಿಧಾನವು ನಮಗೆ ನೀಡಿದ ಸ್ವಾತಂತ್ರ್ಯ ಎಂತಹುದು ಎಂಬುದನ್ನು ಅರಿತುಕೊಂಡಿತು ಎಂದ ಮಾಜಿ ಪ್ರಧಾನಿಗಳು, ಯುವ ಪೀಳಿಗೆಯು ಪ್ರಜಾಪ್ರಭುತ್ವವನ್ನು ಸಂರಕ್ಷಿಸಲು ತುರ್ತು ಪರಿಸ್ಥಿತಿ ಸಮಯದಲ್ಲಿ ಅನೇಕರು ಮಾಡಿದ ತ್ಯಾಗವನ್ನು ಸರಿಸಬೇಕೆಂದು ಮನವಿ ಮಾಡಿದರು.

1977ರ ನಂತರ ಭಾರತದಲ್ಲಿ ಸಮಿಶ್ರ ಸರ್ಕಾರಗಳ ಯಶಸ್ಸು ಸಂವಿಧಾನದ ಸದೃಢತೆಗೆ ಹಿಡಿದ ಕನ್ನಡಿ ಎಂದ ಅವರು, ನಾನು ಮೊದಲ ಬಾರಿಗೆ 13 ಪಕ್ಷಗಳ ಒಕ್ಕೂಟವನ್ನು ಮುನ್ನಡೆಸಿದ್ದೇನೆ.

ಆ ಸರ್ಕಾರದ ಆರ್ಥಿಕ ಸಾಧನೆಯ ಪ್ರಜಾಪ್ರಭುತ್ವದೆಡೆಗಿನ ಹೆಗ್ಗುರುತುಗಳನ್ನು ಗಮನಿಸಿದರೆ ನಮ ಸಂವಿಧಾನದ ಶಕ್ತಿ ಎಂತದ್ದು ಎನ್ನುವುದು ಅರ್ಥವಾಗುತ್ತದೆ. ನಾನು ಅನುಸರಿಸಿದ ಸರಳ ನಿಯಮವೆಂದರೆ, ನೀವು ಸಂವಿಧಾನವನ್ನು ನಿಕಟವಾಗಿ ಮತ್ತು ನಿಷ್ಠೆಯಿಂದ ಅನುಸರಿಸಿದರೆ, ನಾವು ದೊಡ್ಡ ತಪ್ಪುಗಳನ್ನು ತಪ್ಪಿಸಬಹುದು ಎಂದರು. ಸಂವಿಧಾನದ ಪಾವಿತ್ರ್ಯತೆಯನ್ನು ಎತ್ತಿ ಹಿಡಿಯಲು ನಿರಂತರ ಪ್ರಯತ್ನಗಳು ನಡೆಯಬೇಕು ಎಂದು ಕರೆ ನೀಡಿದ ಅವರು, ಇಂತಹ ಪ್ರಯತ್ನವನ್ನು ನಾವು ಎಂದಿಗೂ ಕೈಬಿಡಬಾರದು ಹಾಗೂ ಸಂವಿಧಾನಕ್ಕೆ ಕೊಡುಗೆ ನೀಡಿದ ಡಾ.ಅಂಬೇಡ್ಕರ್ ಮತ್ತು ಇತರರಿಗೆ ಶ್ರದ್ಧಾಂಜಲಿ ಸಲ್ಲಿಸಿದರು. ನಾವು ನಮ ಸಂವಿಧಾನ ಅಳವಡಿಸಿಕೊಂಡ ಶತಮಾನೋತ್ಸವವನ್ನು ಆಚರಿಸೋಣ ಮತ್ತು ಈ ರಾಷ್ಟ್ರದ ಭವ್ಯ ಭವಿಷ್ಯದಲ್ಲಿ ಅದರ ಅನೇಕ ಶತಮಾನಗಳನ್ನು ಆಚರಿಸೋಣ ಎಂದು ಅವರು ಕರೆ ನೀಡಿದರು.

ನಮ್ಮ ಸಂವಿಧಾನ ವಿಶ್ವದ ಅತ್ಯುತ್ತಮ ಸಂವಿಧಾನ

ನಮ್ಮ ಸಂವಿಧಾನ ವಿಶ್ವದ ಅತ್ಯುತ್ತಮ ಸಂವಿಧಾನಗಳಲ್ಲಿ ಒಂದು. ಅಂತಹ ಮಹೋನ್ನತ ಸಂವಿಧಾನವನ್ನು ನಾವು ಹೊಂದಿದ್ದೇವೆ. ಇದರ ಸಂರಚನೆ ನಮ್ಮ ವೈವಿಧ್ಯತೆ ಮತ್ತು ಒಕ್ಕೂಟ ವ್ಯವಸ್ಥೆಯ ರಚನೆಯನ್ನು ಗುರುತಿಸುವಾಗ ಪ್ರಜಾಪ್ರಭುತ್ವದ ವಿವಿಧ ಸಾಂಸ್ಥಿಕ ಸ್ತಂಭಗಳ ನಡುವೆ ಅಧಿಕಾರದ ಸಮತೋಲನವನ್ನು ಸಂವಿಧಾನವು ಅತ್ಯಂತ ಬಲವಾಗಿ ಎತ್ತಿ ಹಿಡಿದಿದೆ ಎಂದು ಅವರು ಹೇಳಿದರು.

ಭಾರತದೊಂದಿಗೆ ಕೆಲಸ ಮಾಡಲು ಸಿದ್ಧ: ಚೀನಾ

ಬೀಜಿಂಗ್: ಭಾರತದೊಂದಿಗೆ ಕೆಲಸ ಮಾಡಲು ಚೀನಾ ಸಿದ್ಧವಿದೆ ಎಂದು ಚೀನಾದ ವಿದೇಶಾಂಗ ಸಚಿವ ವಾಂಗ್‌ಯಿ ಹೇಳಿದ್ದಾರೆ. ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಅವರೊಂದಿಗೆ ಚರ್ಚೆ ನಡೆಸಿದ ಬಳಿಕ ಅವರು ಈ ಅಭಿಪ್ರಾಯ ವ್ಯಕ್ತವಾಗಿದೆ. ಗಾಲ್ವಾನ್ ಕಣಿವೆಯಲ್ಲಿ ಉಭಯ ದೇಶಗಳ ಸೈನಿಕರ ನಡುವೆ ಸಂಘರ್ಷ ನಡೆದು 5 ವರ್ಷಗಳ ನಂತರ ಈ ಅಭಿಪ್ರಾಯ ಹೊರಹಾಕಿದ್ದಾರೆ.

ಭಾರತ- ಚೀನಾ ನಡುವೆ ಮುಂಚಿನ ಹಾಗೆ ದ್ವಿಪಕ್ಷೀಯ ಸಂಬಂಧಗಳನ್ನು ಸಾಧ್ಯವಾದಷ್ಟು ಬೇಗ ಮರಳಿ ಆರಂಭಿಸಲು ಅನುಸರಿಸಬೇಕಾದ ಕಾರ್ಯತಂತ್ರ ರೂಪಿಸಲಾಗುವುದು ಎಂದು ತಿಳಿಸಿದ್ದಾರೆ. ಉಭಯ ದೇಶಗಳ ನಾಯಕರ ನಡುವೆ ಇರುವ ಭಿನ್ನಾಭಿಪ್ರಾಯ ಮತ್ತು ಸಮಸ್ಯೆ ನಿವಾರಣೆಗೆ ಹೆಚ್ಚಿನ ಆದ್ಯತೆ ನೀಡಲಾಗುವುದು. ಪ್ರಮುಖ ಸಾಮಾನ್ಯ ತಿಳುವಳಿಕೆಗಳನ್ನು ಕಾರ್ಯಗತಗೊಳಿಸಲು, ಪರಸ್ಪರ ಪ್ರಮುಖ ಆಸಕ್ತಿಗಳು ಮತ್ತು ಪ್ರಮುಖ ಕಾಳಜಿಗಳನ್ನು ಗೌರವಿಸಲು, ಸಂಭಾಷಣೆ ಮತ್ತು ಸಂವಹನದ ಮೂಲಕ ಪರಸ್ಪರ ನಂಬಿಕೆ ಬಲಪಡಿಸಲು ಕೆಲಸ ಮಾಡಲಾಗುವುದು ಎಂದು ಹೇಳಿದ್ದಾರೆ.

ಪ್ರಾಮಾಣಿಕತೆ ಮತ್ತು ಉತ್ತಮ ನಂಬಿಕೆಯೊಂದಿಗೆ ಭಿನ್ನಾಭಿಪ್ರಾಯಗಳನ್ನು ಸರಿಯಾಗಿ ಇತ್ಯರ್ಥಗೊಳಿಸಲು ಮತ್ತು ದ್ವಿಪಕ್ಷೀಯ ಸಂಬಂಧಗಳನ್ನು ಮರಳಿ ತರಲು ಚೀನಾ ಭಾರತದೊಂದಿಗೆ ಕೆಲಸ ಮಾಡಲು ಸಿದ್ಧವಾಗಿದೆ. ಆದಷ್ಟು ಬೇಗ ಸ್ಥಿರ ಮತ್ತು ಆರೋಗ್ಯಕರ ಬೆಳವಣಿಗೆ ಲಭ್ಯವಾಗಲಿದೆ ಎಂದು ಚೀನಾದ ವಿದೇಶಾಂಗ ವ್ಯವಹಾರಗಳ ವಕ್ತಾರರು ಮಾಹಿತಿ ನೀಡಿದ್ದಾರೆ.

ಡಿಸೆಂಬರ್ 2019 ರ ನಂತರ ರಾಷ್ಟ್ರೀಯ ಭದ್ರತಾ ಸಲಹೆಗಾರ ದೋವಲ್ ಮತ್ತು ದೇಶಾಂಗ ಸಚಿವ ವಾಂಗ್ ಯಿ ನಡುವಿನ ಸಭೆಗಳು ಬಹುಪಕ್ಷೀಯ ಸಮಸ್ಯೆಗಳ ಮೇಲೆ ನಡೆದಿವೆ ಹೊರತು ಗಡಿ ನಿರ್ಣಯವಲ್ಲ ಎಂದು ಹೇಳಲಾಗಿದೆ. ಇಬ್ಬರು ಪ್ರತಿನಿಧಿಗಳು ಗಡಿ ಪ್ರದೇಶಗಳಲ್ಲಿ ಶಾಂತಿ ಮತ್ತು ನೆಮ್ಮದಿಯ ನಿರ್ವಹಣೆ ಮತ್ತು ಗಡಿ ಪ್ರಶ್ನೆಗೆ ನ್ಯಾಯೋಚಿತ, ಸಮಂಜಸ ಮತ್ತು ಪರಸ್ಪರ ಸ್ವೀಕಾರಾರ್ಹ ಪರಿಹಾರವನ್ನು ಅನ್ವೇಷಿಸುತ್ತಾರೆ ಎಂದು ನವದೆಹಲಿಯಲ್ಲಿ ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ.

ಅನೇಕ ಸುತ್ತಿನ ಮಾತುಕತೆ

ಅಕ್ಟೋಬರ್‌ನಲ್ಲಿ, ಗಡಿ ಪ್ರದೇಶಗಳಲ್ಲಿ ನೈಜ ನಿಯಂತ್ರಣ ರೇಖೆಯ ಉದ್ದಕ್ಕೂ ಗಸ್ತು ವ್ಯವಸ್ಥೆಗಳ ಕುರಿತು ಭಾರತ ಮತ್ತು ಚೀನಾ ಒಪ್ಪಂದಕ್ಕೆ ಬಂದವು. 2020ರ ಮೇ ತಿಂಗಳಲ್ಲಿ ಭಾರತದ ಪೂರ್ವ ಲಡಾಖ್‌ನಲ್ಲಿ ಚೀನಾ ಮಿಲಿಟರಿಯ ಕ್ರಮಗಳಿಂದಾಗಿ ಗಡಿ ಬಿಕ್ಕಟ್ಟು ಪ್ರಾರಂಭವಾಯಿತು. ಆನಂತರ ಉಭಯ ದೇಶಗಳ ನಡುವೆ ಅನೇಕ ಸುತ್ತಿನ ಮಾತುಕತೆ ನಡೆಯುತ್ತಿವೆ.

3 ದಶಕಗಳಲ್ಲಿ ಕಚ್ಚಾ ಬಾಂಬ್‌ಗಳಿಗೆ 565 ಮಕ್ಕಳು ಬಲಿ

ಕೊಲ್ಕತ್ತಾ: ಕಳೆದ ಮೂರು ದಶಕಗಳಲ್ಲಿ ಭಾರತದ ಪಶ್ಚಿಮ ಬಂಗಾಳ ರಾಜ್ಯದಲ್ಲಿ ದೇಶ ನಿರ್ಮಿತ ಅಥವಾ ಕಚ್ಚಾ ಬಾಂಬ್‌ಗಳಿಂದ 565 ಮಕ್ಕಳು ಸಾವನ್ನಪ್ಪಿದ್ದಾರೆ ಅಥವಾ ಗಾಯಗೊಂಡಿದ್ದಾರೆ ಎಂದು ಬಿಬಿಸಿ ವಿಶ್ವಸೇವೆಯ ತನಿಖೆಯಿಂದ ತಿಳಿದುಬಂದಿದೆ.

ಈ ವರ್ಷದ ನವೆಂಬರ್ 10ರವರೆಗೆ ಕನಿಷ್ಠ 565 ಮಕ್ಕಳು ಸಾವನ್ನಪ್ಪಿದ್ದಾರೆ ಎಂದು ನಾವು ಕಂಡುಕೊಂಡಿದ್ದೇವೆ. ಈ ಪೈಕಿ 94 ಮಂದಿ ಸಾವನ್ನಪ್ಪಿದ್ದು, 471 ಮಂದಿ ಗಾಯಗೊಂಡಿದ್ದಾರೆ.

ಪಶ್ಚಿಮ ಬಂಗಾಳದಲ್ಲಿ ದೇಶ ನಿರ್ಮಿತ ಬಾಂಬ್‌ಗಳಿಂದಾಗಿ ಮಕ್ಕಳ ಸಾವಿನ ಬಗ್ಗೆ ಯಾವುದೇ ಅಧಿಕೃತ ಮಾಹಿತಿ ಲಭ್ಯವಿಲ್ಲ. ಆದ್ದರಿಂದ, ನಿಜವಾದ ಸಾವು ನೋವುಗಳ ಸಂಖ್ಯೆ ಹೆಚ್ಚಾಗುವ ಸಾಧ್ಯತೆಯಿದೆ ಎಂದು ವರದಿ ಬಹಿರಂಗಪಡಿಸಿದೆ. ಅಂದರೆ ಸರಾಸರಿ ಪ್ರತಿ 18 ದಿನಗಳಿಗೊಮ್ಮೆ ಒಂದು ಮಗು ಕಚ್ಚಾ ಬಾಂಬ್‌ಗೆ ಬಲಿಯಾಗುತ್ತಿದೆ. ಅನೇಕ ಮಕ್ಕಳು ತಮ್ಮ ಕಣ್ಣುಗಳನ್ನು ಕಳೆದುಕೊಂಡಿದ್ದಾರೆ, ಹಲವಾರು ಮಕ್ಕಳು ತಮ್ಮ ಕೈ ಮತ್ತು ಕಾಲುಗಳನ್ನು ಕಳೆದುಕೊಂಡು ಅಂಗವಿಕಲತೆ ಅನುಭವಿಸುತ್ತಿದ್ದಾರೆ.

ಈ ಅಪಘಾತಗಳಲ್ಲಿ 60 ಪ್ರತಿಶತಕ್ಕಿಂತಲೂ ಹೆಚ್ಚು ಮಕ್ಕಳು ತಮ್ಮ ಮನೆಗಳ ಹೊರಗೆ ತೋಟಗಳಲ್ಲಿ, ರಸ್ತೆಗಳಲ್ಲಿ, ಹೊಲಗಳಲ್ಲಿ ಅಥವಾ ಶಾಲೆಗಳ ಬಳಿ ಆಟವಾಡುತ್ತಿದ್ದಾಗ ಸಂಭವಿಸಿವೆ. ಕಚ್ಚಾ ಬಾಂಬ್‌ಗಳಿಂದ ಕೊಲ್ಲಲ್ಪಟ್ಟ ಅಥವಾ ಕೈಕಾಲುಗಳನ್ನು ಕಳೆದುಕೊಂಡ ಮಕ್ಕಳ ಪೋಷಕರ ನೋವು ಹೇಳತೀರದು ಅದೊಂದು ದುರಂತ ಜೀವನ ಎನ್ನಬಹುದು.

ಇಂತಹ ಘಟನೆಗಳಿಂದ ಕುಟುಂಬ ದೀರ್ಘಕಾಲೀನ ಪರಿಣಾಮಗಳನ್ನು ಎದುರಿಸಬೇಕಾಗುತ್ತದೆ. ಗಾಯಗೊಂಡಿರುವ ಮಕ್ಕಳ ಚಿಕಿತ್ಸಾ ವೆಚ್ಚ ಜಾಷ ದೋಪಚಾರಕ್ಕೆ ಪರದಾಡುವ ಸ್ಥಿತಿ ಉಂಟಾಗಿದೆ.

ಇಸ್ರೇಲ್‌ಗೆ 5,600 ಯುವಕರ ರವಾನೆ

ಲಕ್ನೋ: ಪ್ಯಾಲೆಸ್ತೀನ್ ಧ್ವಜಹೊಂದಿರುವ ಬ್ಯಾಗ್ ಹಿಡಿದು ಸಂಸತ್ತಿಗೆ ಹೋದ ಪ್ರಿಯಾಂಕಾ ಗಾಂಧಿ ನಡೆ ಟೀಕಿಸಿರುವ ಯುಪಿ ಸಿಎಂ ಯೋಗಿ ಆದಿತ್ಯನಾಥ್, ಉತ್ತರ ಪ್ರದೇಶದ 5,600 ಕ್ಕೂ ಹೆಚ್ಚು ಯುವಕರನ್ನು ಇಸ್ರೇಲ್‌ಗೆ ಕಳುಹಿಸಲಾಗಿದೆ ಎಂದಿದ್ದಾರೆ.

ವಿಧಾನಸಭೆಯಲ್ಲಿ ಪ್ರಸ್ತಾಪಿಸಿದ ಅವರು, ಯುವಕರ ಭದ್ರತೆಯನ್ನು ದೇಶದಲ್ಲಿ ಖಾತ್ರಿ ಮಾಡಲಾಗಿದೆ. ರಾಜ್ಯದ 12,000 ಕ್ಕೂ ಹೆಚ್ಚು ಯುವಕರು ಕೌಶಲ್ಯ ಮಿಷನ್‌ಗೆ ಸಂಪರ್ಕ ಹೊಂದಿದ್ದಾರೆ. ನಿನ್ನೆ ಕಾಂಗ್ರೇಸ್ ಸಂಸದರೊಬ್ಬರು ಸಂಸತ್ತಿನಲ್ಲಿ ಪ್ಯಾಲೆಸ್ತೀನ್ ಧ್ವಜವಿರುವ ಚೀಲವನ್ನು ಹೊತ್ತುಕೊಂಡು ಹೋಗುತ್ತಿದ್ದಾರೆ. ಆದರೆ ನಾವು ಉತ್ತರ ಪ್ರದೇಶದ ಯುವಕರನ್ನು ಇಸ್ರೇಲ್‌ಗೆ ಕಳುಹಿಸುತ್ತಿದ್ದೇವೆ.

ಪ್ರಿಯಾಂಕ ಗಾಂಧಿಯವರ ನಡೆಯ ಬಗ್ಗೆ ವಾಗ್ದಾಳಿ

ಇದರೊಂದಿಗೆ 5,600 ಕ್ಕೂ ಹೆಚ್ಚು ಯುವಕರನ್ನು ಇಸ್ರೇಲ್‌ಗೆ ಕಳುಹಿಸಲಾಗಿದೆ. ಪ್ರತಿಯೊಬ್ಬ ಯುವಕರಿಗೆ ಉಚಿತ ವಸತಿ, ಉಚಿತ ಆಹಾರ ನೀಡಲಾಗುತ್ತಿದೆ, ಜೊತೆಗೆ 1.5 ಲಕ್ಷ ರೂ. ಹೆಚ್ಚುವರಿ ಪಡೆಯಲಾಗುತ್ತಿದೆ ಮತ್ತು ಸಂಪೂರ್ಣ ಭದ್ರತೆಯನ್ನು ಖಾತರಿಪಡಿಸಲಾಗಿದೆ ಎಂದು ಯೋಗಿ ಹೇಳಿದರು. ಭಾರತದಲ್ಲಿನ ಇಸ್ರೇಲಿ ರಾಯಭಾರಿ ಯುಪಿಯಿಂದ ಹೆಚ್ಚು ಹೆಚ್ಚು ಯುವಕರು ಇಸ್ರೇಲ್‌ಗೆ ಬರಬೇಕೆಂದು ನಾವು ಬಯಸುತ್ತೇವೆ ಏಕೆಂದರೆ ಇಲ್ಲಿನ ಯುವಕರು ಉತ್ತಮ ಕೆಲಸ ಮಾಡುತ್ತಿದ್ದಾರೆ. ಇಡೀ ಜಗತ್ತು ಯುಪಿಯ ಯುವಕರ ಕೌಶಲ್ಯವನ್ನು ಗುರುತಿಸುತ್ತಿದೆ ಎಂದು ಹೇಳಿದರು.

ಬಿಜೆಪಿ ಸಂಸದ ಅನುರಾಗ್ ಠಾಕೂರ್ ಅವರು ಕಾಂಗ್ರೇಸ್ ಸಂಸದೆ ಪ್ರಿಯಾಂಕ ಗಾಂಧಿಯವರ ನಡೆಯ ಬಗ್ಗೆ ವಾಗ್ದಾಳಿ ನಡೆಸಿ, ಬಾಂಗ್ಲಾದೇಶದಲ್ಲಿ ಹಿಂದೂಗಳ ಮೇಲಿನ ದೌರ್ಜನ್ಯದ ಬಗ್ಗೆ ಮಾತನಾಡಲಿಲ್ಲ ಆದರೆ ''ಪ್ಯಾಲೆಸ್ತೀನ್ ಬ್ಯಾಗ್‌ನೊಂದಿಗೆ ಫ್ಯಾಶನ್ ಹೇಳಿಕೆ ನೀಡಲು ಬಯಸುತ್ತಾರೆ'' ಎಂದು ಹೇಳಿದರು. ಇದಕ್ಕೆ ತಿರುಗೇಟು ನೀಡಿದ ಪ್ರಿಯಾಂಕಾ ಗಾಂಧಿ, ನಾನು ಯಾವ ಬಟ್ಟೆ ಧರಿಸಬೇಕು ಎಂಬುದನ್ನು ನಿರ್ಧರಿಸುವವರು ಯಾರು ಇದು ವಿಶಿಷ್ಟವಾದ ಪಿತೃಪ್ರಭುತ್ವವಾಗಿದೆ, ಮಹಿಳೆ ಏನು ಧರಿಸಬೇಕೆಂದು ನಿರ್ಧರಿಸುತ್ತದೆ ಎಂದು ಖಾರವಾಗಿ ಪ್ರತಿಕ್ರಿಯೆ ನೀಡಿದರು.

ಇಸ್ರೇಲ್-ಹಮಾಸ್ ಸಂಘರ್ಷ: 5,000 ಪ್ಯಾಲೆಸ್ತೀನಿಯನ್ನರ ಸಾವು

ಟೆಲ್ ಅವೀವಾ: ಇಸ್ರೇಲ್ ಮತ್ತು ಹಮಾಸ್ ನಡುವಿನ ನಡೆಯುತ್ತಿರುವ ಸಂಘರ್ಷದಲ್ಲಿ ಗಾಜಾದಲ್ಲಿ ಇದುವರೆಗೆ 45,000 ಕ್ಕೂ ಹೆಚ್ಚು ಪ್ಯಾಲೆಸ್ತೀನಿಯರು ಸಾವನ್ನಪ್ಪಿದ್ದಾರೆ ಎಂದು ಆರೋಗ್ಯಾಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಎರಡೂ ಕಡೆ ಕದನ ವಿರಾಮ ಮಾತುಕತೆ ನಡೆಯುತ್ತಿರುವ ನಡುವೆ ಸಂಘರ್ಷ ಆರಂಭವಾಗಿನಿಂದ ಇಲ್ಲಿಯವರೆಗೆ ಗಾಜಾದಲ್ಲಿ 45,000ಕ್ಕೂ ಹೆಚ್ಚು ಪ್ಯಾಲೆಸ್ತೀನಿಯಾದ ಜೀವಗಳನ್ನು ಬಲಿ ತೆಗೆದುಕೊಂಡಿದೆ, ಈ ಸಾವು ನೋವಿನ ಸಂಖ್ಯೆ ಮತ್ತಷ್ಟು ಹೆಚ್ಚಿರಬಹುದು ಎಂದು ಹೇಳಲಾಗಿದೆ.

ಅಲ್ ಜಜೀರಾ ಪತ್ರಕರ್ತ ಅಹ್ಮದ್ ಬೇಕರ್ ಅಲ್-ಲೌಹ್ ಮತ್ತು ಸಿವಿಲ್ ಡಿಫೆನ್ಸ್‌ನ ಸದಸ್ಯರು, ಹಿಂದಿನ ದಿನ ಇಸ್ರೇಲಿ ದಾಳಿಯಲ್ಲಿ ಹತ್ಯೆಯಾಗಿದ್ದಾರೆ. ಈ ನಡುವೆ ಗಾಜಾದಲ್ಲಿ ಇದುವರೆಗೆ ಸಾವನ್ನಪ್ಪಿದವರ ಮಾಹಿತಿ ಹೊರಹಾಕಲಾಗಿದೆ. ಕತಾರ್, ಈಜಿಪ್ಟ್ ಮತ್ತು ಅಮೆರಿಕಾದದಲ್ಲಿ ಇತ್ತೀಚಿನ ದಿನಗಳಲ್ಲಿ ಕದನ ವಿರಾಮ ಒಪ್ಪಂದ ಜಾರಿ ಮಾಡುವ ಪ್ರಯತ್ನ ಮುಂದುವರಿದಿದೆ ಎಂದು ಇಸ್ರೇಲಿ ರಕ್ಷಣಾ ಸಚಿವ ಇಸ್ರೇಲ್ ಕಾಟ್ಜ್ ಹೇಳಿದ್ದಾರೆ. ಏಕೈಕ ಒಪ್ಪಂದದ ನಂತರ ಯಾವುದೇ ಸಮಯಕ್ಕಿಂತ ಸಮಾಲೋಚಕರು ಒಪ್ಪಂದಕ್ಕೆ ಹತ್ತಿರವಾಗಿದ್ದಾರೆ ನಂಬಿದ್ದಾರೆ, ವಾರದ ಅವಧಿಯ ವಿರಾಮದ ಬಳಿಕ 105 ಒತ್ತೆಯಾಳುಗಳನ್ನು ಬಿಡುಗಡೆ ಮಾಡಲಾಗಿದೆ ಎಂದಿದ್ದಾರೆ. ಹಮಾಸ್‌ಗೆ ಹೆಚ್ಚು ಹೊಂದಿಕೊಳ್ಳುವ ಅಗತ್ಯವನ್ನು ಅನುಸರಿಸಿ ಅವಕಾಶ ರಚಿಸಲಾಗುತ್ತಿದೆ. ಈ ಪ್ರಕ್ರಿಯೆಯಲ್ಲಿ ಪ್ರಾಯೋಗಿಕ ಹಂತಕ್ಕೆ ಮುನ್ನಡೆಯಬಹುದು. ಈ ನಿಟ್ಟಿನಲ್ಲಿ ವಿದೇಶಾಂಗ ವ್ಯವಹಾರಗಳು ಮತ್ತು ರಕ್ಷಣಾ ಸಮಿತಿ ಹೇಳಿದ್ದಾರೆ.

ಪ್ಯಾಲೆಸ್ತೀನಿಯನ್ ಆರೋಗ್ಯ ಅಧಿಕಾರಿಗಳು ಗಾಜಾ ಸಾವಿನ ಸಂಖ್ಯೆಯನ್ನು 45,028 ಏರಿಕೆಯಾಗಿದೆ. ಯುದ್ಧ ಪ್ರಾರಂಭವಾದಾಗಿನಿಂದ 106,962 ಜನರು ಗಾಯಗೊಂಡಿದ್ದಾರೆ ಮತ್ತು ಸಾವಿರಾರು ದೇಹಗಳನ್ನು ಅವಶೇಷಗಳಡಿಯಲ್ಲಿ ಮತ್ತಷ್ಟು ಮಂದಿ ಸಿಲಿಕಿರುವ ಸಾಧ್ಯತೆ ಇದೆ. ಸಚಿವಾಲಯದ ಅಂಕಿಅಂಶ ಹೋರಾಟಗಾರರು ಮತ್ತು ನಾಗರಿಕರ ನಡುವೆ ವ್ಯತ್ಯಾಸ ಹೊಂದಿಲ್ಲವಾದರೂ, ಸಾವುಗಳಲ್ಲಿ ಅರ್ಧಕ್ಕಿಂತ ಹೆಚ್ಚು ಮಹಿಳೆಯರು ಮತ್ತು ಮಕ್ಕಳು ಎಂದು ಅದು ಹೇಳಿದೆ. ಯಾವುದೇ ಪುರಾವೆಗಳಿಲ್ಲದೆ, ಇಸ್ರೇಲಿ ಮಿಲಿಟರಿ 17,000 ಕ್ಕೂ ಹೆಚ್ಚು ಭಯೋತ್ಪಾದಕರನ್ನು ಕೊಂದಿದೆ ಎಂದು ಹೇಳಿಕೊಂಡಿದೆ. ಪ್ಯಾಲೇಸ್ತೀನಿಯನ್ ವೈದ್ಯಕೀಯ ಸಿಬ್ಬಂದಿಯ ಪ್ರಕಾರ, ಗಾಜಾ ನಗರದ ಪೂರ್ವ ಶಿಜೈಯಾ ನೆರೆಹೊರೆಯಲ್ಲಿ ರಾತ್ರಿಯಿಡೀ ಸಂಭವಿಸಿದ ಇಸ್ರೇಲಿ ದಾಳಿಯ ಇತ್ತೀಚಿನ ಬಲಿಪಶುಗಳಲ್ಲಿ ನಾಲ್ಕು ಜನರ ಕುಟುಂಬ ಸೇರಿದಂತೆ ಹತ್ತು ವ್ಯಕ್ತಿಗಳು ಸೇರಿದ್ದಾರೆ. ಇಸ

ಶಾಹಿದ್ ಕಪೂರ್ ಜೊತೆ ರಶ್ಮಿಕಾ ಮಂದಣ್ಣ ರೊಮ್ಯಾನ್ಸ್

ಪುಷ್ಪ 2 ಬೆಡಗಿ ರಶ್ಮಿಕಾ ಮಂದಣ್ಣಗೆ ಬಾಲಿವುಡ್‌ನಿಂದ ಬಂಪರ್ ಅವಕಾಶಗಳು ಅರಸಿ ಬರುತ್ತಿವೆ. ಇದೀಗ ಶಾಹಿದ್ ಕಪೂರ್ ನಟನೆಯ ಹೊಸ ಸಿನಿಮಾದಲ್ಲಿ ರಶ್ಮಿಕಾ ನಾಯಕಿ ಎಂಬ ಸುದ್ದಿಯೊಂದು ಸೋಶಿಯಲ್ ಮೀಡಿಯಾದಲ್ಲಿ ಹರಿದಾಡುತ್ತಿದೆ. 'ಕಾಕ್ ಟೈಲ್' ಸಿನಿಮಾದ ಸೀಕ್ವೇಲ್‌ನಲ್ಲಿ ಶಾಹಿದ್ ಕಪೂರ್ ಮತ್ತು ರಶ್ಮಿಕಾ ಮಂದಣ್ಣ ಜೋಡಿಯಾಗಿ ಕಾಣಿಸಿಕೊಳ್ಳಲಿದ್ದಾರಂತೆ. ಈಗಾಗಲೇ ಕಥೆಯ ಕುರಿತು ನಟಿಯ ಬಳಿ ಒಂದು ಹಂತದ ಚರ್ಚೆ ಕೂಡ ನಡೆದಿದೆ ಎನ್ನಲಾಗಿದೆ. ನಟಿ ಓಕೆ ಅಂದ್ರಾ ಎಂಬುದು ಇದುವರೆಗೂ ಖಾತ್ರಿಯಾಗಿಲ್ಲ. ತಂಡದ ಕಡೆಯಿಂದ ಅನೌನ್ಸ್ ಆಗಲಿದೆಯಾ ಕಾಯಬೇಕಿದೆ.

ಈ ಹಿಂದೆ 'ಕಾಕ್‌ಟೈಲ್' ಮೊದಲ ಭಾಗದಲ್ಲಿ ಸೈಫ್ ಅಲಿ ಖಾನ್ ಮತ್ತು ದೀಪಿಕಾ ಪಡುಕೋಣೆ ಜೊತೆಯಾಗಿ ನಟಿಸಿದರು. ಈ ಚಿತ್ರ ಸಕ್ಸಸ್ ಕಂಡಿತ್ತು. ಇದೀಗ ಹಲವು ವರ್ಷಗಳ ಬಳಿಕ ಇದೇ ಸಿನಿಮಾದ ಸೀಕ್ವೆಲ್ ಮಾಡಲು ಚಿತ್ರತಂಡ ಪ್ಲ್ಯಾನ್ ಮಾಡಿದೆ. ಹೊಸ ಜೋಡಿಯ ಕಥೆ ತೋರಿಸಲು ಹೊರಟಿದ್ದಾರೆ.ಇನ್ನೂ ಈಗಾಗಲೇ ರಶ್ಮಿಕಾ ನಟಿಸಿರುವ ಬಾಲಿವುಡ್‌ನ 'ಅನಿಮಲ್' ಸಿನಿಮಾ ಸಕ್ಸಸ್ ಕಂಡಿದೆ. ಜೊತೆಗೆ 'ಪುಷ್ಪ 2' ಹಿಂದಿ ವರ್ಷನ್‌ನಲ್ಲೂ ಉತ್ತಮ ಗಳಿಕೆ ಮಾಡಿದೆ. ಈ ಸಿನಿಮಾ ಒಟ್ಟಾರೆ 1500 ಕೋಟಿ ರೂ.ಗೂ ಅಧಿಕ ಕಲೆಕ್ಷನ್ ಮಾಡಿ ಗೆದ್ದು ಬೀಗಿದೆ.



ಈ ವರ್ಷ ದಾಂಪತ್ಯ ಜೀವನಕ್ಕೆ ಕಾಲಿಟ್ಟ ತಾರೆಯವರಿವರು

ಈ ವರ್ಷ ಮದುವೆಯಾದ ಸೆಲೆಬ್ರಿಟಿಗಳ ಪಟ್ಟಿ ಇಲ್ಲಿದೆ ನೋಡಿ. ಅರ್ಜುನ್ ಸರ್ಜಾ ಪುತ್ರಿ ಐಶ್ವರ್ಯಾ ಸರ್ಜಾ ವಿವಾಹವಾದರು. ದಕ್ಷಿಣ ಭಾರತದ ಖ್ಯಾತ ನಟಿ ಕೀರ್ತಿ ಸುರೇಶ್, ಆಂಟೊನಿ ತಟ್ಟಿಲ್ ಅವರೊಟ್ಟಿಗೆ ಮದುವೆಯಾದರು. ದಶಕಗಳಿಂದಲೂ ಈ ಜೋಡಿ ಪ್ರೀತಿಯಲ್ಲಿತ್ತು. ಆಂಟೊನಿ ತಟ್ಟಿಲ್ ದುಬೈನಲ್ಲಿ ಉದ್ಯಮಿ ಆಗಿದ್ದಾರೆ. 'ಟಗರು' ಪುಟ್ಟಿ ಎಂದೇ ಕನ್ನಡ ಸಿನಿಮಾ ಪ್ರೇಮಿಗಳಿಂದ ಪ್ರೀತಿಯಿಂದ ಕರೆಸಿಕೊಳ್ಳುವ ಮಾನ್ವಿತಾ, ಅರುಣ್ ಕುಮಾರ್ ಎಂಬುವರನ್ನು ಈ ವರ್ಷ ಮೇ 1 ರಂದು ಮದುವೆಯಾದರು. ಮಾನ್ವಿತಾ ಮದುವೆಯಲ್ಲಿ ಹಲವು ಸ್ಯಾಂಡಲ್‌ವುಡ್ ತಾರೆಯರು ಭಾಗಿಯಾಗಿದ್ದರು. ನಟ ನಾಗ ಚೈತನ್ಯ ಮತ್ತು ಶೋಭಿತಾ ಧುಲಿಪಾಲ ಡಿಸೆಂಬರ್ 4 ರಂದು ಹೈದರಾಬಾದ್‌ನಲ್ಲಿ ಅದ್ಧೂರಿಯಾಗಿ ಮದುವೆಯಾದರು. ನಾಗ ಚೈತನ್ಯಗೆ ಇದು ಎರಡನೇ ಮದುವೆ.

ಪ್ರಭಾಸ್ ಸಿನಿಮಾದಲ್ಲಿ ಐಟಂ ಡ್ಯಾನ್ಸ್

ತಮಿಳಿನ ಲೇಡಿ ಸೂಪರ್ ಸ್ಟಾರ್ ನಯನತಾರಾ ನಟಿ, ನಿರ್ಮಾಪಕಿಯಾಗಿ ಬ್ಯುಸಿಯಾಗಿದ್ದಾರೆ. ಇದರ ನಡುವೆ ಪ್ರಭಾಸ್ ಸಿನಿಮಾದಲ್ಲಿ ಕಾಣಿಸಿಕೊಳ್ಳಲು 'ಜವಾನ್' ಬೆಡಗಿ ಗ್ರೀನ್ ಸಿಗ್ನಲ್ ಕೊಟ್ಟಿದ್ದಾರೆ ಎನ್ನಲಾದ ಸುದ್ದಿಯೊಂದು ಸೋಶಿಯಲ್ ಮೀಡಿಯಾದಲ್ಲಿ ಹರಿದಾಡುತ್ತಿದೆ. ನಾಯಕಿಯಾಗಿ ಅಲ್ಲ, ಬದಲಾಗಿ ಐಟಂ ಹಾಡಿಗೆ ಹೆಜ್ಜೆ ಹಾಕಲು ರೆಡಿಯಾಗಿದ್ದಾರೆ ಎಂಬ ಸುದ್ದಿ ಚರ್ಚೆಗೆ ಗ್ರಾಸವಾಗಿದೆ.

ಪ್ರಭಾಸ್ ನಟನೆಯ 'ದಿ ರಾಜಾ ಸಾಬ್' ಸಿನಿಮಾದಲ್ಲಿ ನಯನತಾರಾ ಸ್ಪೆಷಲ್ ಹಾಡಿಗೆ ಹೆಜ್ಜೆ ಹಾಕಲು ಚಿತ್ರತಂಡ ನಟಿಯನ್ನು ಸಂಪರ್ಕಿಸಿದೆ ಎನ್ನಲಾಗಿದೆ. ನಟಿ ಕೂಡ ಒಪ್ಪಿಕೊಂಡಿದ್ದಾರೆ ಎನ್ನಲಾಗಿದೆ. ಈ ವಿಚಾರ ನಿಜನಾ ಎಂಬುದನ್ನು ಚಿತ್ರತಂಡದ ಕಡೆಯಿಂದ ಸ್ಪಷ್ಟನೆ ಸಿಗುವವರೆಗೂ ಕಾಯಬೇಕಿದೆ. ಇನ್ನೂ ಈ ಚಿತ್ರದಲ್ಲಿ ಪ್ರಭಾಸ್ ಜೊತೆ ನಿಧಿ ಅಗರ್ವಾಲ್, ಮಾಳವಿಕಾ ಮೋಹನನ್ ನಾಯಕಿಯರಾಗಿ ಕಾಣಿಸಿಕೊಂಡಿದ್ದಾರೆ. ಇದೇ ಮುಂದಿನ ವರ್ಷ ಏ.10ಕ್ಕೆ ಸಿನಿಮಾ ರಿಲೀಸ್ ಆಗಲಿದೆ.

ಧೈರ್ಯ ತುಂಬಿದ ಸುದೀಪ

ಉಪೇಂದ್ರ ನಿರ್ದೇಶಿಸಿ ನಟಿಸಿರುವ 'ಯುಐ' ಸಿನಿಮಾ ಇನ್ನೆರಡು ದಿನಗಳಲ್ಲಿ ಬಿಡುಗಡೆ ಆಗಲಿದೆ. ಸಿನಿಮಾ ಕನ್ನಡದ ಜೊತೆಗೆ ತೆಲುಗಿನಲ್ಲಿಯೂ ಬಿಡುಗಡೆ ಆಗಲಿದೆ. ತೆಲುಗಿನಲ್ಲಿ ಉಪೇಂದ್ರಗೆ ದೊಡ್ಡ ಅಭಿಮಾನಿ ವರ್ಗವಿದೆ. ಅಂದಹಾಗೆ ಬಹಳ ವರ್ಷಗಳ ಹಿಂದೆಯೇ ತೆಲುಗಿನ ಮೆಗಾಸ್ಟಾರ್ ಚಿರಂಜೀವಿಗೆ ಉಪೇಂದ್ರ ಸಿನಿಮಾ ಒಂದನ್ನು ನಿರ್ದೇಶಿಸಬೇಕಿತ್ತು. ನಟ ಹಾಗೂ ನಿರ್ದೇಶಕ ಉಪೇಂದ್ರ ಅವರು ದೊಡ್ಡ ಮಟ್ಟದಲ್ಲಿ ಖ್ಯಾತಿ ಪಡೆದಿದ್ದಾರೆ. ಅವರ ನಿರ್ದೇಶನವನ್ನು ಅನೇಕರು ಮೆಚ್ಚಿಕೊಂಡಿದ್ದಾರೆ. ಅವರ ಐಡಿಯಾಗಳು ಭಿನ್ನವಾಗಿರುತ್ತವೆ. ಈ ಮೊದಲು ನಿರ್ದೇಶನ ಮಾಡಿದ ಸಿನಿಮಾಗಳೇ ಇದಕ್ಕೆ ಸಾಕ್ಷಿ. ಅವರನ್ನು ಅನೇಕರು ಸ್ಫೂರ್ತಿಯಾಗಿ ಇಟ್ಟುಕೊಂಡಿದ್ದಾರೆ. ಅವರು ನಿರ್ದೇಶನ ಮಾಡಿದ 'ಓಂ', 'ಉಪೇಂದ್ರ' ಮೊದಲಾದ ಚಿತ್ರಗಳು ಸೂಪರ್ ಹಿಟ್ ಆಗಿವೆ. ಈಗ ಅವರ 'ಯುಐ' ಚಿತ್ರದ ಮೂಲಕ ಮತ್ತೆ ನಿರ್ದೇಶನಕ್ಕೆ ಮರಳಿದ್ದಾರೆ. ಉಪೇಂದ್ರ ಅವರು ಈ ಮೊದಲು ಚಿರಂಜೀವಿ ಚಿತ್ರಕ್ಕೆ ನಿರ್ದೇಶನ ಮಾಡಬೇಕಿತ್ತು. ಆದರೆ, ಅದು ಸಾಧ್ಯವಾಗಿಲ್ಲ. ಇತ್ತೀಚೆಗೆ ಹೈದರಾಬಾದ್‌ಗೆ ಉಪೇಂದ್ರ ಅವರು ತೆರಳಿದ್ದರು. ಈ ವೇಳೆ ಅವರು ಅಲ್ಲಿ ಹಲವು ವಿಚಾರಗಳ ಬಗ್ಗೆ ಮಾತನಾಡಿದ್ದಾರೆ. 'ನಾನು ಒಂದು ಸಿನಿಮಾದ ಕಥೆ ಜೊತೆ ಸಾಕಷ್ಟು ಸಮಯ ಕಳೆದೆ. ಅದಕ್ಕೆ ಸಾಕಷ್ಟು ಸಮಯ ತೆಗೆದುಕೊಂಡೆ. ಆದರೆ, ಅವರ ನನ್ನ ಬರವಣಿಗೆ ಅವರ ರೇಂಜ್ಗೆ ಇಲ್ಲ ಎನಿಸಿತು' ಎಂದಿದ್ದಾರೆ ಉಪೇಂದ್ರ. ಈ ಬರವಣಿಗೆ ಪ್ರಕ್ರಿಯೆಯಲ್ಲಿ ಸ್ಟಾರ್ಟಂ ಅನ್ನೋದು ಏನು ಎಂಬುದರ ಅರ್ಥ ಅವರಿಗೆ ಆಗಿತ್ತು. 'ಸ್ಕ್ರಿಪ್ಟ್ ಕೆಲಸ ಮಾಡುವಾಗ ಚಿರಂಜೀವಿ ಅವರು ಚಿತ್ರದ ವಿವಿಧ ಅಂಶಗಳನ್ನು ನೋಡಬೇಕಾಗಿತ್ತು. ಅವರು ವಿವಿಧ ವಯಸ್ಸಿನ ಪ್ರೇಕ್ಷಕರಿಗೆ ಇಷ್ಟವಾಗುತ್ತಾರೆ. ಅದಕ್ಕೇ ಅವರು ಮೆಗಾಸ್ಟಾರ್.

ನಾನು ಅದೇ ರೀತಿ ಕಥೆ ಮಾಡಲು ಸಾಧ್ಯವಾಗಲಿಲ್ಲ' ಎಂದಿದ್ದಾರೆ ಉಪೇಂದ್ರ.

'ಉಪ್ಪಿ 2 ಬಳಿಕ ಈ ಸಿನಿಮಾ ಮಾಡಲು ಎಂಟು ವರ್ಷಗಳು ಹಿಡಿದವು. ಜನರ ಬುದ್ಧಿವಂತಿಕೆ ಸವಾಲಾಗಿ ಈ ಸಿನಿಮಾ ಇರಲಿದೆ' ಎಂದು ಉಪೇಂದ್ರ ಹೇಳಿದ್ದಾರೆ. ಉಪೇಂದ್ರ ನಿರ್ದೇಶನ ಮಾಡುತ್ತಿರುವ 'ಯುಐ' ಸಿನಿಮಾ ರಿಲೀಸ್‌ಗೆ ರೆಡಿ ಇದೆ. ಈ ಚಿತ್ರ ಡಿಸೆಂಬರ್ 20ರಂದು ಕನ್ನಡದ ಜೊತೆಗೆ ಹಲವು ಭಾಷೆಗಳಲ್ಲಿ ತೆರೆಗೆ ಬರಲಿದೆ.

'ದೇಶವೇ ಹೆಮ್ಮೆಪಡೋ ಸಿನಿಮಾ ಮಾಡುವೆ'

ಅಟ್ಲಿ ಅವರು 'ಜವಾನ್' ಚಿತ್ರದ ನಂತರ ತಮ್ಮ ಆರನೇ ಚಿತ್ರ '06' ಘೋಷಿಸಿದ್ದಾರೆ. ಸಲ್ಮಾನ್ ಖಾನ್ ಈ ಚಿತ್ರದಲ್ಲಿ ನಟಿಸಲಿದ್ದಾರೆ. ಈ ಚಿತ್ರದ ಬಗ್ಗೆ ಸಾಕಷ್ಟು ನಿರೀಕ್ಷೆ ಇದೆ. ಪಾತ್ರವರ್ಗದ ಆಯ್ಕೆ ಪ್ರಕ್ರಿಯೆ ನಡೆಯುತ್ತಿದ್ದು, ರಜನಿಕಾಂತ್ ಅಥವಾ ಕಮಲ್ ಹಾಸನ್ ನಟಿಸುವ ಸಾಧ್ಯತೆಯಿದೆ ಎಂದು ತಿಳಿದುಬಂದಿದೆ. 'ಜವಾನ್' ಸಿನಿಮಾ ನಿರ್ದೇಶನ ಮಾಡಿದ ಕಾಲಿವುಡ್ ನಿರ್ದೇಶಕ ಅಟ್ಲಿ ಅವರ ಖ್ಯಾತಿ ಹೆಚ್ಚಾಗಿದೆ. ಅವರು ಈಗ ಬಾಲಿವುಡ್‌ನಲ್ಲಿ ಬ್ಯುಸಿ ಇದ್ದಾರೆ. ಅವರ ಮುಂದಿನ ಚಿತ್ರಗಳ ಬಗ್ಗೆ ನಿರೀಕ್ಷೆ ಹೆಚ್ಚಾಗಿದೆ. ಈಗ ಅವರ ನಿರ್ದೇಶನದ ಆರನೇ ಸಿನಿಮಾ ಅನೌನ್ಸ್ ಆಗಿದೆ. ಇದಕ್ಕೆ ಸದ್ಯ '06' ಎನ್ನುವ ಟೈಟಲ್ ಇಡಲಾಗಿದೆ. ಈ ಚಿತ್ರದಲ್ಲಿ ಸಲ್ಮಾನ್ ಖಾನ್ ಪ್ರಮುಖ ಪಾತ್ರವಹಿಸಲಿದ್ದಾರೆ. ಅಟ್ಲಿ ಅವರು 'ಬೇಬಿ ಜಾನ್' ಸಿನಿಮಾ ಪ್ರಚಾರದಲ್ಲಿ ಬ್ಯುಸಿ ಇದ್ದಾರೆ. ಇದು ಅವರ ನಿರ್ಮಾಣದ ಮೊದಲ ಸಿನಿಮಾ. ಈ ಚಿತ್ರವನ್ನು ಕಲೀಸ್ ಅವರು ನಿರ್ದೇಶನ ಮಾಡಿದ್ದು, 'ತೇರಿ' ಚಿತ್ರವನ್ನು ಸ್ಫೂರ್ತಿಯಾಗಿ ಇಟ್ಟುಕೊಂಡು ಸಿನಿಮಾ ಮಾಡಲಾಗಿದೆ. ವರುಣ್ ಧವನ್ ಈ ಚಿತ್ರದಲ್ಲಿ ಮುಖ್ಯ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಡಿಸೆಂಬರ್ 25ರಂದು ಸಿನಿಮಾ ರಿಲೀಸ್ ಆಗಲಿದೆ. 'ಎ6 ಚಿತ್ರಕ್ಕೆ ಸಾಕಷ್ಟು ಸಮಯ ಹಾಗೂ ಎನರ್ಜಿ ಬೇಕಿದೆ. ನಾವು ಸ್ಕ್ರಿಪ್ಟ್‌ನ ಪೂರ್ಣಗೊಳಿಸುವ ಹಂತದಲ್ಲಿ ಇದ್ದೇವೆ. ದೇವರ ಅನುಗ್ರಹದಿಂದ ಶೀಘ್ರವೇ ದೊಡ್ಡ ಅನೌನ್ಸ್‌ಮೆಂಟ್ ಆಗಲಿದೆ' ಎಂದು ಅಟ್ಲಿ ಅವರು ಹೇಳಿದ್ದಾರೆ.

ಶಿವಣ್ಣ ಫೈಟರ್, ಅವರು ಯಾವತ್ತೂ ಕುಗ್ಗಿಲ್ಲ, ಕುಗ್ಗೋದು ಇಲ್ಲ

ನಟ ಶಿವರಾಜ್‌ಕುಮಾರ್‌ಗೆ ಡಿ.24ರಂದು ಸರ್ಜರಿ ಇರೋ ಹಿನ್ನೆಲೆ ಇಂದು (ಡಿ.18) ಪತ್ನಿಯೊಂದಿಗೆ ಅಮೆರಿಕಗೆ ತೆರಳಲಿದ್ದಾರೆ. ಈ ಕುರಿತು ನಟ ಸುದೀಪ್ ಮಾತನಾಡಿ, ಶಿವಣ್ಣ ಫೈಟರ್ ಅವರು ಯಾವತ್ತೂ ಕುಗ್ಗಿಲ್ಲ, ಕುಗ್ಗೋದು ಇಲ್ಲ ಎಂದಿದ್ದಾರೆ. ಶಿವಣ್ಣ ಫೈಟರ್, ಅವರು ಯಾವತ್ತೂ ಕುಗಿಲ್ಲ, ಕುಗ್ಗೋದು ಇಲ್ಲ, ಅವರ ಪಕ್ಕದಲ್ಲಿ ದೊಡ್ಡ ಶಕ್ತಿಯಿದೆ ಅವರೇ ಗೀತಾ ಅಕ್ಕ. ಇವರ ಜೊತೆ ದೊಡ್ಡ ಶಕ್ತಿಯಾಗಿ ಕೆ.ಪಿ ಶ್ರೀಕಾಂತ್ ನಿಂತಿದ್ದಾರೆ. ಅವರು ಯಾವತ್ತೂ ಶಿವಣ್ಣರನ್ನು ಬಿಟ್ಟು ಕೊಟ್ಟಿಲ್ಲ. ಇವರೆಲ್ಲರೂ ಜೊತೆಯಾಗಿ ಇರಬೇಕಾದ್ರೆ ಇಲ್ಲಿ ಪಾಸಿಟಿವಿಟಿ ಇದೆ. ಹಾಗಾಗಿ ಶಿವಣ್ಣ ಫೈಟ್ ಮಾಡುತ್ತಾರೆ. ನನಗೆ ಇದರಲ್ಲಿ ಡೌಂಟ್ ಇಲ್ಲ ಎಂದಿದ್ದಾರೆ ಸುದೀಪ್. ಅಂದಹಾಗೆ, ಇಂದು ಶಿವಣ್ಣ ಮನೆಗೆ ಕಿಚ್ಚ ಸುದೀಪ್ ಭೇಟಿ ನೀಡಿದ್ದು, ನಟನನ್ನು ತಬ್ಬಿಕೊಂಡು ಧೈರ್ಯ ತುಂಬಿದ್ದಾರೆ. ನಟನ ಆರೋಗ್ಯದ ಕುರಿತು ಕುಶಲೋಪರಿ ವಿಚಾರಿಸಿದ್ದಾರೆ.

'ಅವರೇ ಹೇಳಬೇಕು'; ಶಮಿ ಆಗಮನದ ಬಗ್ಗೆ ರೋಹಿತ್ ಹೇಳಿದ್ದಿದು

ಆಸ್ಟ್ರೇಲಿಯಾ ಪ್ರವಾಸದಲ್ಲಿರುವ ಭಾರತ ತಂಡಕ್ಕೆ ಮತ್ತೊಬ್ಬ ಅನುಭವಿ ವೇಗಿಯ ಕೊರತೆ ಸಾಕಷ್ಟು ಕಾಡುತ್ತಿದೆ. ಹೀಗಾಗಿ ಮೊಹಮ್ಮದ್ ಶಮಿ ಅವರನ್ನು ಆಸ್ಟ್ರೇಲಿಯಾಕ್ಕೆ ಕಳುಹಿಸಲಾಗುವುದು ಎಂಬ ವರದಿ ಇತ್ತು. ಆದರೆ ಈ ಬಗ್ಗೆ ಮಾತನಾಡಿರುವ ರೋಹಿತ್ ಶರ್ಮಾ ಅವರು ಎನ್‌ಸಿಎಯಿಂದ ಸ್ಪಷ್ಟ ಮಾಹಿತಿ ಬಂದ ನಂತರವೇ ನಿರ್ಧಾರ ತೆಗೆದುಕೊಳ್ಳುವುದಾಗಿ ಹೇಳಿದ್ದಾರೆ.

ಆಸ್ಟ್ರೇಲಿಯಾ ಪ್ರವಾಸದಲ್ಲಿ ಟೀಂ ಇಂಡಿಯಾದ ಬ್ಯಾಟಿಂಗ್ ವೈಫಲ್ಯವೇ ತಂಡದ ಕಳಪೆ ಪ್ರದರ್ಶನಕ್ಕೆ ಪ್ರಮುಖ ಕಾರಣ ಎಂಬುದರಲ್ಲಿ ಯಾವುದೇ ಅನುಮಾನವಿಲ್ಲ. ತಂಡದ ಯಾವೊಬ್ಬ ಬ್ಯಾಟರ್ ಕೂಡ ಸ್ಥಿರ ಪ್ರದರ್ಶನ ನೀಡುತ್ತಿಲ್ಲ. ಇದು ಆಡಳಿತ ಮಂಡಳಿಯ ನಿದ್ದೆಗೆಡಿಸಿದ್ದರೆ ಇನ್ನೊಂದೆಡೆ ತಂಡಕ್ಕೆ ಮತ್ತೊಬ್ಬ ಅನುಭವಿ ವೇಗಿಯ ಅನುಪಸ್ಥಿತಿ ಮೊದಲ ಟೆಸ್ಟ್‌ನಿಂದಲೂ ಕಾಡುತ್ತಿದೆ. ಅನುಭವಿ ವೇಗಿ ಜಸ್ಪ್ರೀತ್ ಬುಮ್ರಾರನ್ನು ಬಿಟ್ಟರೆ ಉಳಿದವರಿಂದ ಸ್ಥಿರ ಪ್ರದರ್ಶನ ಕಂಡುಬರುತ್ತಿಲ್ಲ. ಬುಮ್ರಾ ಜೊತೆಗೆ ಮತ್ತೊಬ್ಬ ಅನುಭವಿಯಾಗಿ ಸಿರಾಜ್ ತಂಡದಲ್ಲಿ ಇದ್ದರಾದರೂ ಅವರು ಅವಶ್ಯಕ ಸಂದರ್ಭದಲ್ಲಿ ವಿಕೆಟ್ ಪಡೆಯುತ್ತಿಲ್ಲ. ಇದು ಬುಮ್ರಾ ಅವರ ಮೇಲೆ ಒತ್ತಡ ತರುತ್ತಿದೆ. ಹೀಗಾಗಿ ಬುಮ್ರಾಗೆ ಸಾಥ್ ನೀಡುವ ಮತ್ತೊಬ್ಬ ವೇಗಿ ಮೊಹಮ್ಮದ್ ಶಮಿಯನ್ನು ಆಸ್ಟ್ರೇಲಿಯಾಕ್ಕೆ ಕರೆಸಿಕೊಳ್ಳಬೇಕು ಎಂಬುದು ಅನುಭವಿಗಳ ಅಭಿಪ್ರಾಯವಾಗಿದೆ. ಇದೀಗ 3ನೇ ಟೆಸ್ಟ್ ಮುಗಿದ ಬಳಿಕ ಮಾತನಾಡಿರುವ ರೋಹಿತ್ ಶರ್ಮಾ ಅಡ್ಡಗೋಡೆಯ ಮೇಲೆ ದೀಪವಿಟ್ಟಿದ್ದಾರೆ.

ಶಮಿ ಲಭ್ಯತೆಯ ಬಗ್ಗೆ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ರೋಹಿತ್, ಶಮಿ ಅವರ ಸ್ಥಿತಿಯ ಬಗ್ಗೆ ಎನ್‌ಸಿಎ ಸ್ಪಷ್ಟ ಮಾಹಿತಿ ನೀಡುವವರೆಗೆ ಅವರನ್ನು ಆಸ್ಟ್ರೇಲಿಯಾಕ್ಕೆ ಕರೆಸಿಕೊಳ್ಳುವ ಅಪಾಯವನ್ನು ತೆಗೆದುಕೊಳ್ಳುವುದಿಲ್ಲ. ಎನ್‌ಸಿಎಯಿಂದ ಯಾರಾದರೂ ಅವರ ಬಗ್ಗೆ ಮಾತನಾಡಬೇಕಾದ ಸಮಯ ಬಂದಿದೆ. ಅದು ನಮ್ಮ ರಾಷ್ಟ್ರೀಯ ಕ್ರಿಕೆಟ್ ಅಕಾಡೆಮಿ, ಅಲ್ಲಿ ಶಮಿ ಪುನರ್ವಸತಿಗೆ ಒಳಗಾಗಿದ್ದಾರೆ. ಹೀಗಾಗಿ ಎನ್‌ಸಿಎಯಿಂದಲೇ ನಮಗೆ ಏನಾದರೂ ಅಪ್‌ಡೇಟ್ ಕೊಡಬೇಕು.

ಶಮಿ ಭಾರತದಲ್ಲಿ ಸಾಕಷ್ಟು ಕ್ರಿಕೆಟ್ ಆಡುತ್ತಿದ್ದಾರೆಂಬುದು ನನಗೆ ಗೊತ್ತು. ಆದರೆ ಅವರ ಮೊಣಕಾಲಿನಲ್ಲಿ ಸಮಸ್ಯೆ ಎಂದು ವರದಿಗಳಿವೆ. ಇಂತಹ ಪರಿಸ್ಥಿತಿಯಲ್ಲಿ ಅವರನ್ನು ಇಲ್ಲಿಗೆ ಕರೆಸಿಕೊಂಡು ಪಂದ್ಯದ ಮಧ್ಯದಲ್ಲಿ ತಂಡದಿಂದ ಹೊರಗೆ ಹೋಗುವುದನ್ನು ನೋಡಲು ನಾವು ಬಯಸುವುದಿಲ್ಲ. ಆದ್ದರಿಂದ ನಾವು ಅಂತಹ ಯಾವುದೇ ಅಪಾಯವನ್ನು ತೆಗೆದುಕೊಳ್ಳಲು ಬಯಸುವುದಿಲ್ಲ. ಶಮಿ 100 ಪ್ರತಿಶತ ಫಿಟ್ ಆಗಿದ್ದಾರೆ ಎಂಬುದು ಖಚಿತವಾದ ಬಳಿಕಷ್ಟೇ ತಂಡದಲ್ಲಿ ಆಡಿಸುತ್ತೇವೆ ಎಂದಿದ್ದಾರೆ.

ಶಮಿ ಹೋಗುವುದು ಡೌಟ್

ಹೆಡ್‌ಗೆ ಇಂಜುರಿ.. ಉಳಿದ ಪಂದ್ಯಗಳಿಗೆ ಅನುಮಾನ

ಬ್ರಿಸ್ಬೇನ್‌ನಲ್ಲಿ ನಡೆದ ಮೂರನೇ ಟೆಸ್ಟ್ ಪಂದ್ಯ ಡ್ರಾದಲ್ಲಿ ಅಂತ್ಯಗೊಂಡಿದೆ. ಆದರೆ ಆಸ್ಟ್ರೇಲಿಯಾದ ಸ್ಟಾರ್ ಬ್ಯಾಟ್ಸ್‌ಮನ್ ಟ್ರಾವಿಸ್ ಹೆಡ್ ತೊಡೆಸಂದು ಗಾಯದಿಂದ ಬಳಲುತ್ತಿರುವುದು ಆತಿಥೇಯ ತಂಡಕ್ಕೆ ನುಂಗಲಾರದ ತುತ್ತಾಗಿ ಪರಿಣಮಿಸಿದೆ. ಬಾಕ್ಸಿಂಗ್ ಡೇ ಟೆಸ್ಟ್‌ನಿಂದ ಅವರು ಹೊರಗುಳಿಯುವ ಸಾಧ್ಯತೆ ಇದೆ. ಆದರೆ ಅವರು ಮೆಲ್ಬೋರ್ನ್ ಟೆಸ್ಟ್‌ಗೆ ಸಂಪೂರ್ಣ ಫಿಟ್ ಆಗುವ ನಿರೀಕ್ಷೆಯಿದೆ ಎಂದು ಹೇಳಿದ್ದಾರೆ. ಭಾರತ ಮತ್ತು ಆಸ್ಟ್ರೇಲಿಯಾ ನಡುವೆ ಬ್ರಿಸ್ಬೇನ್‌ನ ಗಾಬಾದಲ್ಲಿ ನಡೆದ ಬಾರ್ಡರ್-ಗವಾಸ್ಕರ್ ಟ್ರೋಫಿ ಟೆಸ್ಟ್ ಸರಣಿಯ ಮೂರನೇ ಪಂದ್ಯ ಡ್ರಾನಲ್ಲಿ ಅಂತ್ಯಗೊಂಡಿದೆ. ಹೀಗಾಗಿ ಐದು ಪಂದ್ಯಗಳ ಟೆಸ್ಟ್ ಸರಣಿ ಸದ್ಯ 1-1ರಲ್ಲಿ ಸಮಬಲಗೊಂಡಿದೆ. ಇದೀಗ ಸರಣಿಯ ನಾಲ್ಕನೇ ಹಾಗೂ ಬಾಕ್ಸಿಂಗ್ ಡೇ ಟೆಸ್ಟ್ ಪಂದ್ಯವು ಡಿಸೆಂಬರ್ 26 ರಿಂದ ಮೆಲ್ಬೋರ್ನ್ ಕ್ರಿಕೆಟ್ ಮೈದಾನದಲ್ಲಿ ನಡೆಯಲಿದೆ. ಆದರೆ ಅದಕ್ಕೂ ಮುನ್ನ ಆಸ್ಟ್ರೇಲಿಯಾ ತಂಡಕ್ಕೆ ಆಘಾತ ಎದುರಾಗಿದ್ದು ತಂಡದ ಸ್ಟಾರ್ ಬ್ಯಾಟ್ಸ್‌ಮನ್ ಟ್ರಾವಿಸ್ ಹೆಡ್ ಗಾಯಗೊಂಡಿದ್ದಾರೆ ಎಂದು ವರದಿಯಾಗಿದೆ. ಹೆಡ್ ತೊಡೆಸಂದು ಸಮಸ್ಯೆಯಿಂದ ಬಳಲುತ್ತಿದ್ದು, ಅವರೀಗ ಬಾಕ್ಸಿಂಗ್ ಡೇ ಟೆಸ್ಟ್‌ನಿಂದ ಹೊರಗುಳಿಯಬಹುದು ಎಂದು ಹೇಳಲಾಗುತ್ತಿದೆ.ಆದರೆ ತಮ್ಮ ಫಿಟ್ನೆಸ್ ಬಗ್ಗೆ ಅಪ್ಡೇಟ್ ನೀಡಿರುವ ಹೆಡ್, 'ಎಂಸಿಜಿಯಲ್ಲಿ ನಡೆಯುವ ನಾಲ್ಕನೇ ಟೆಸ್ಟ್ ವೇಳೆಗೆ ಸಂಪೂರ್ಣ ಫಿಟ್ ಆಗುವ ನಿರೀಕ್ಷೆಯಿದೆ ಎಂದಿದ್ದಾರೆ. ಗಾಬಾದಲ್ಲಿ 152 ರನ್‌ಗಳ ಅದ್ಭುತ ಇನ್ನಿಂಗ್ಸ್ ಆಡಿದ ಹೆಡ್‌ಗೆ ಪಂದ್ಯ ಶ್ರೇಷ್ಠ ಪ್ರಶಸ್ತಿ ಲಭಿಸಿತು. ಪಂದ್ಯದ ಬಳಿಕ ಮಾತನಾಡಿದ ಅವರು, ನನ್ನ ಬ್ಯಾಟಿಂಗ್‌ನಿಂದ ತುಂಬಾ ಸಂತೋಷವಾಗಿದೆ. ಸ್ವಲ್ಪ ಊತವಿದ್ದರೂ ಮುಂದಿನ ಪಂದ್ಯದ ವೇಳೆಗೆ ಚೇತರಿಸಿಕೊಳ್ಳಲಿದ್ದೇನೆ ಎಂದಿದ್ದಾರೆ. ಈಗ ನಡೆಯುತ್ತಿರುವ ಬಾರ್ಡರ್ ಗವಾಸ್ಕರ್ ಟ್ರೋಫಿಯಲ್ಲಿ ಟ್ರಾವಿಸ್ ಹೆಡ್ ಟ